ಸಂಪುಟ: ೦೭/ ಸಂಚಿಕೆ: ೨೧೪/ಗುರುವಾರ ದಿನಾಂಕ : ೧೬-೧೦-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 214/THURSDAY Date : 16-10-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಸಾರ್ವಕಾಲಿಕ ದಾಖಲೆ ಬರೆದ ಚಿನ್ನ, ಬೆಳ್ಳಿ ಬೆಲೆ



**ನವದೆಹಲಿ:** ರಾಷ್ಟ್ರ ರಾಜಧಾನಿ ಯಲ್ಲಿ ಚಿನ್ನದ ಬೆಲೆ ಒಂದೇ ದಿನದಲ್ಲಿ 2,850 ರೂ. ಏರಿಕೆಯಾಗುವುದರ ಮೂಲಕ 10 ಗ್ರಾಂಗೆ 1,30,800 ರೂ. ತಲುಪಿದೆ. ಧಂತೇರಾಸ್ ಹಬ್ಬದ ಹಿನ್ನೆಲೆಯಲ್ಲಿ ಚಿಲ್ಲರೆ ವ್ಯಾಪಾರಿಗಳು ಮತ್ತು ಆಭರಣ ವ್ಯಾಪಾರಿಗಳಿಂದ ಭಾರೀ ಪ್ರಮಾಣದಲ್ಲಿ ಹಬ್ಬದ ಖರೀದಿ ನೆದಿದೆ.

ಅಖಿಲ ಭಾರತ ಸರಾಫಾ ಸಂಘದ ಪ್ರಕಾರ, 99.9 ಪ್ರತಿಶತ ಶುದ್ಧತೆಯ ಅಮೂಲ್ಯ ಲೋಹ ಸೋಮವಾರ 10 ಗ್ರಾಂಗೆ 1,27,950 ರೂ. ಗೆ ಮುಕ್ತಾಯಗೊಂಡಿತ್ತು.99.5 ಪ್ರತಿಶತ ಶುದ್ಧ ಚಿನ್ನವು ಮಂಗಳವಾರ 2,850 ರೂ. ಏರಿಕೆಯಾಗಿ 10 ಗ್ರಾಂಗೆ (ಎಲ್ಲಾ ತೆರಿಗೆಗಳನ್ನು ಒಳಗೊಂಡಂತೆ) ದಾಖಲೆಯ 1,30,200 ರೂ. ತಲುಪಿದೆ. ಇಲ್ಲಿವರೆಗೆ ಬಂಗಾರದ ಬೆಲೆ ಅಂದರೆ 2024ರ ಡಿಸೆಂಬರ್‌ನಿಂದ ಇಲ್ಲಿಯವರೆಗೆ ಶೇ.65.67ರಷ್ಟು ಏರಿಕೆಯಾಗಿದೆ.

ಜಾಗತಿಕ ರಾಜಕೀಯ ಕಾರಣಗಳು, ಪೂರೈಕೆ ನಿರ್ಬಂಧಗಳು ಮತ್ತು ಬಲವಾದ ದೇಶೀಯ ಹೂಡಿಕೆ ಬೇಡಿಕೆ ಹಾಗೂ ದುರ್ಬಲ ರೂಪಾಯಿಯಿಂದ ಚಿನ್ನ ಮತ್ತು ಬೆಳ್ಳಿ ಹೊಸ ಗರಿಷ್ಠ ಮಟ್ಟವನ್ನು ತಲುಪಿವೆ. ಏರಿಕೆಯ ಪ್ರವೃತ್ತಿ ಹಾಗೇ ಮುಂದುವರೆದಿದೆ.

ಬೆಳ್ಳಿ ಕೂಡ 6,000 ರೂ.ಗಳಷ್ಟು ಏರಿಕೆಯಾಗಿ ಪ್ರತಿ ಕಿಲೋಗ್ರಾಂಗೆ 1,85,000 ರೂ.ಗಳ ಜೀವಮಾನದ ಗರಿಷ್ಠ ಮಟ್ಟ ತಲುಪಿದೆ (ಎಲ್ಲಾ ತೆರಿಗೆಗಳನ್ನು ಒಳಗೊಂಡಂತೆ), ಇದು ಸತತ 5ನೇ ದಿನದ ಏರಿಕೆಯನ್ನು ಸೂಚಿಸುತ್ತದೆ. ಹಿಂದಿನ ಮಾರುಕಟ್ಟೆ ಅವಧಿಯಲ್ಲಿ ಬಿಳಿ ಲೋಹವು ಪ್ರತಿ ಕೆಜಿಗೆ 1,79,000 ರೂ.ಗಳಲ್ಲಿ ಸ್ಥಿರವಾಗಿತ್ತು.

## ಪರೀಕ್ಷೆಯಲ್ಲಿ ಶೇ. 33 ಅಂಕ ಪಡೆದರೆ ಪಾಸ್

**ಬೆಂಗಳೂರು:** ರಾಜ್ಯ ಸರ್ಕಾರವು ಶಿಕ್ಷಣ ವ್ಯವಸ್ಥೆಯಲ್ಲಿ ಮಹತ್ವದ ಪರಿವರ್ತನೆಯನ್ನು ಜಾರಿಗೆ ತರುತ್ತಿದೆ. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಿಗೆ ಕನಿಷ್ಠ ಉತ್ತೀರ್ಣ ಅಂಕಗಳನ್ನು ಕಡಿತಗೊಳಿಸಲಾಗಿದೆ. ಜೊತೆಗೆ, 800 ಸರ್ಕಾರಿ ಶಾಲೆಗಳನ್ನು ಕರ್ನಾಟಕ ಸಾರ್ವಜನಿಕ ಶಾಲೆಗಳಾಗಿ (ಕೆಪಿಎಸ್) ಏಕಕಾಲದಲ್ಲಿ ಮೇಲ್ದರ್ಜೆಗೇರಿಸುವ ಮಹತ್ವದ ಘೋಷಣೆ ಮಾಡಲಾಗಿದೆ.

ಈ ಬಗ್ಗೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ಅವರು ಪತ್ರಿಕಾಗೋಷ್ಠಿಯಲ್ಲಿ ಘೋಷಣೆ ಮಾಡಿದ್ದಾರೆ.

ವಿದ್ಯಾರ್ಥಿಗಳ ಉತ್ತೀರ್ಣತೆಯ ಶೇಕಡಾವಾರು ಪ್ರಮಾಣವನ್ನು ಹೆಚ್ಚಿಸಲು ಮತ್ತು ಸಿಬಿಎಸ್‌ಇಯಂತಹ ರಾಷ್ಟ್ರೀಯ ಸಂಸ್ಥೆಗಳೊಂದಿಗೆ ರಾಜ್ಯದ ಮಾನದಂಡಗಳ ಹೊಂದಾಣಿಕೆಗೆ ಈ ಪ್ರಮುಖ ಕ್ರಮ ಕೈಗೊಳ್ಳಲಾಗಿದೆ. ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳ ಕನಿಷ್ಠ ಉತ್ತೀರ್ಣತೆಯ ಅಂಕಗಳನ್ನು 35%ರಿಂದ 33%ಕ್ಕೆ ಇಳಿಸಲಾಗಿದೆ. ಕರ್ನಾಟಕ ಆಡಳಿತ ಸುಧಾರಣಾ ಆಯೋಗ-2ರ ಶಿಫಾರಸನ್ನು ಆಧರಿಸಿ ಈ ಬದಲಾವಣೆ ಮಾಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಹೊಸ ನಿಯಮವು 2025-26ರ ಶೈಕ್ಷಣಿಕ ವರ್ಷದಿಂದ ಎಲ್ಲಾ ನಿಯಮಿತ, ಪುನರಾವರ್ತಿತ ಮತ್ತು ಖಾಸಗಿ ವಿದ್ಯಾರ್ಥಿಗಳಿಗೆ ಜಾರಿಗೆ ಬರಲಿದೆ.



### ಕೆಪಿಎಸ್ ಆಗಿ 800 ಸರ್ಕಾರಿ ಶಾಲೆಗಳ ಪರಿವರ್ತನೆ

ಮೊದಲ ಬಾರಿಗೆ, ಕರ್ನಾಟಕದಾದ್ಯಂತ 800 ಸರ್ಕಾರಿ ಶಾಲೆಗಳನ್ನು ಏಕಕಾಲದಲ್ಲಿ ಕರ್ನಾಟಕ ಸಾರ್ವಜನಿಕ ಶಾಲೆಗಳಾಗಿ (ಕೆಪಿಎಸ್) ಮೇಲ್ದರ್ಜೆಗೇರಿಸಲಾಗುವುದು. ಪೂರ್ವ ಪ್ರಾಥಮಿಕದಿಂದ ದ್ವಿತೀಯ ಪಿಯುಸಿಯವರೆಗೆ ಒಂದೇ ಸೂರಿನಡಿ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವ ಮೂಲಕ ಶಾಲಾ ಶಿಕ್ಷಣ ವಲಯವನ್ನು ಬಲಪಡಿಸಲು ಈ ಉಪಕ್ರಮದ ಮೊರೆಹೋಗಲಾಗಿದೆ. ಪ್ರತಿಯೊಂದು ಶಾಲೆಯನ್ನು 4.00 ಕೋಟಿ ಅಂದಾಜು ವೆಚ್ಚದಲ್ಲಿ ಅಗತ್ಯ ಮೂಲಸೌಕರ್ಯಗಳೊಂದಿಗೆ ಅಭಿವೃದ್ಧಿಪಡಿಸಲಾಗುತ್ತಿದೆ.

ಈ ತಿದ್ದುಪಡಿಯನ್ನು ಬೆಂಬಲಿಸಿ 701 ಪತ್ರಗಳನ್ನು ಸ್ವೀಕರಿಸಲಾಗಿದ್ದು, ಕರಡು ಅಧಿಸೂಚನೆ ಪ್ರಕ್ರಿಯೆಯನ್ನು ಅನುಸರಿಸಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಬದಲಾವಣೆ ಕುರಿತು ಮಾತನಾಡಿದ ಎಸ್.ಮಧು ಬಂಗಾರಪ್ಪ, "ವಿದ್ಯಾರ್ಥಿಗಳ ಉತ್ತೀರ್ಣತಾ ಪ್ರಮಾಣವನ್ನು ಹೆಚ್ಚಿಸುವುದು ಮತ್ತು ಸಿಬಿಎಸ್‌ಇ ಮತ್ತು ಇತರ ರಾಜ್ಯಗಳ ಉತ್ತೀರ್ಣ ಮಾನದಂಡಗಳಿಗೆ ಹೊಂದಿಕೆಯಾಗುವ ಏಕರೂಪದ ವ್ಯವಸ್ಥೆಯನ್ನು ಜಾರಿಗೆ ತರುವ ಗುರಿ ಇದಾಗಿದೆ. ಹೀಗಾಗಿ, ಉತ್ತೀರ್ಣ ಅಂಕಗಳನ್ನು ಕಡಿತಗೊಳಿಸುವ ನಿರ್ಧಾರ ತೆಗೆದುಕೊಳ್ಳಲಾಗಿದೆ" ಎಂದು ಹೇಳಿದರು. ಹೊಸ ಮಾನದಂಡಗಳ ಪ್ರಕಾರ, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಆಂತರಿಕ ಮೌಲ್ಯಮಾಪನ ಮತ್ತು ಬಾಹ್ಯ ಪರೀಕ್ಷೆ ಎರಡನ್ನೂ ಒಟ್ಟುಗೂಡಿಸಿ ಒಟ್ಟಾರೆಯಾಗಿ ಕನಿಷ್ಠ 33% (625 ರಲ್ಲಿ 206 ಅಂಕಗಳು) ಅಂಕಗಳು ಹಾಗೂ ಆಯಾ ವಿಷಯಗಳಲ್ಲಿ ಕನಿಷ್ಠ 30 ಅಂಕಗಳನ್ನು ಪಡೆಯಬೇಕು.

ದ್ವಿತೀಯ ಪಿಯುಸಿ ವಿದ್ಯಾರ್ಥಿಗಳು ಪ್ರತಿ ವಿಷಯದ ಲಿಖಿತ ಪರೀಕ್ಷೆಯಲ್ಲಿ ಕನಿಷ್ಠ 30% ಅಂಕಗಳು ಮತ್ತು ಪ್ರತಿ ವಿಷಯದಲ್ಲಿ ಕನಿಷ್ಠ 30 ಅಂಕಗಳನ್ನು (ಲಿಖಿತ ಮತ್ತು ಪ್ರಾಯೋಗಿಕ/ಆಂತರಿಕ ಅಂಕಗಳನ್ನು ಒಳಗೊಂಡಂತೆ) ಗಳಿಸಬೇಕು. ಜೊತೆಗೆ, ಒಟ್ಟಾರೆ 33% (600 ರಲ್ಲಿ 198) ಅಂಕಗಳನ್ನು ಪಡೆಯಬೇಕಾಗಿದೆ.

### 6ನೇ ಗ್ಯಾರಂಟಿ ಜಾರಿಗೆ ಮುಂದಾದ ಕಾಂಗ್ರೆಸ್ ಸರ್ಕಾರ

## ಬಿ-ಖಾತಾದಾರರಿಗೆ ಎ-ಖಾತಾ ಭಾಗ್ಯ

**ಬೆಂಗಳೂರು:** ರಾಜ್ಯ ಕಾಂಗ್ರೆಸ್ ಸರ್ಕಾರ ಭೂಮಿ ಹಕ್ಕಿನ 6ನೇ ಗ್ಯಾರಂಟಿಯನ್ನು ಜಾರಿಗೊಳಿಸುತ್ತಿದ್ದು, ಬಿ ಖಾತಾಗಳನ್ನು ಎ ಖಾತೆಗಳನ್ನಾಗಿ ಪರಿವರ್ತಿಸಲಾಗುತ್ತಿದೆ ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ವಿಧಾನಸೌಧದ ಸಮೇಳನ ಸಭಾಂಗಣದಲ್ಲಿಂದು ಬಿ ಖಾತೆಯಿಂದ ಎ ಖಾತೆಗೆ ಆಸ್ತಿ ಪರಿವರ್ತಿಸಲು ಸಿದ್ಧಪಡಿಸಿರುವ ವೆಬ್‌ಸೈಟ್‌ಗೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬೆಂಗಳೂರಿನಲ್ಲಿ 25 ಲಕ್ಷ ಆಸ್ತಿಗಳಿವೆ. ಅದರಲ್ಲಿ 7.5 ಲಕ್ಷ ಎ ಖಾತೆಗಳಿದ್ದು, ಇನ್ನೂ 7.5 ಲಕ್ಷ ಬಿ ಖಾತೆಗಳಿವೆ. ಸುಮಾರು 8 ರಿಂದ 9 ಲಕ್ಷ ಆಸ್ತಿಗಳನ್ನೂ ಖಾತೆ ನೋಂದಣಿಗಾಗಿ ಮನವಿ ಸಲ್ಲಿಕೆಯಾಗಿವೆ ಎಂದು ವಿವರಿಸಿದರು.ನಮ ರಾಜ್ಯದಲ್ಲಿನ ಆಸ್ತಿ ದಾಖಲಾತಿಗಳ ಕ್ರಮ ಬದ್ಧತೆ ಮತ್ತು ಡಿಜಿಟಲೀಕರಣಕ್ಕಾಗಿ ಕೇಂದ್ರ ಸರ್ಕಾರ ನಮಗೆ ಪ್ರಶಸ್ತಿ ನೀಡಿದೆ ಎಂದು ಹೇಳಿಕೊಂಡರು.

ಕರ್ನಾಟಕ ಪಟ್ಟಣ ಮತ್ತು ನಗರ ಯೋಜನಾ ಕಾಯ್ದೆ (ಕೆಟಿಸಿಪಿ ಆ್ಯಕ್ಟ್) 1961ರ ಅಡಿಯಲ್ಲಿ ಅನುಮೋದನೆಗೊಂಡ ಕೃಷಿ ಜಮೀನುಗಳ ಕಂದಾಯ ನಿವೇಶನಗಳಲ್ಲಿ ಮನೆ ಕಟ್ಟಿಕೊಂಡಿದ್ದರೆ, ಕೆಲವು ಪರಿವರ್ತನೆಯಾಗಿದ್ದು, ಇನ್ನೂ ಕೆಲವು ಪರಿವರ್ತನೆಯಾಗದೇ ಇದ್ದರೆ, ಈ ಆಸ್ತಿಗಳ ಮಾಲೀಕರಿಗೆ ಬ್ಯಾಂಕಿನಿಂದ ಸಾಲ ಪಡೆಯಲು ಮತ್ತು ಕಟ್ಟಡ ನಿರ್ಮಾಣಕ್ಕೆ ನಿಯಮ ಬದ್ಧವಾಗಿ ನಕ್ಷೆ ಅನುಮೋದನೆ ಪಡೆಯಲು ಸಾಧ್ಯವಾಗುತ್ತಿಲ್ಲ. ಈ ಕಾರಣಕ್ಕಾಗಿ ಎ ಪರಿವರ್ತನಾ ಅಭಿಯಾನವನ್ನು ಆರಂಭಿಸಿದ್ದೇವೆ.

ನಿರ್ಮಾಣಗೊಂಡಿರುವ ಕಟ್ಟಡದ ಸಕ್ರಮೀಕರಣಕ್ಕೆ ನಾವು ಕೈ ಹಾಕುತ್ತಿಲ್ಲ ಎಂದು ಇದೇ ವೇಳೆ ಸ್ಪಷ್ಟಪಡಿಸಿದರು.ಕಂದಾಯ ಲೇಔಟ್‌ಗಳಲ್ಲಿ ಭೂ ಮಾಲೀಕರು ರಸ್ತೆಗಳನ್ನು ತಮ ಹೆಸರಿಗೆ ಇರಿಸಿಕೊಂಡು, ಇಬ್ಬಿಬ್ಬರಿಗೆ ನೋಂದಣಿ ಮಾಡಿ, ಸಾರ್ವಜನಿಕರಿಗೆ ಮೋಸ ಮಾಡುವ ಪ್ರಯತ್ನ ಮಾಡುತ್ತಿದ್ದರು. ಹೀಗಾಗಿ ಮೂರ್ನಾಲ್ಕು ತಿಂಗಳ ಹಿಂದೆ ನಡೆದ ಅಧಿವೇಶನದಲ್ಲಿ ಕಾನೂನು ತಿದ್ದುಪಡಿ ತಂದು ಎಲ್ಲಾ ರಸ್ತೆಗಳನ್ನು ಸರ್ಕಾರದ ಆಸ್ತಿಗಳೆಂದು ಘೋಷಣೆ ಮಾಡಿದ್ದೇವೆ ಎಂದರು.



ಕಂದಾಯ ನಿವೇಶನಗಳು, ಪರಿವರ್ತನೆಯಾಗದ ಭೂಮಿ, ಯೋಜನೆ ಅನುಮೋದನೆಯಿಲ್ಲದ ಬಿ ಖಾತೆ ನಿವೇಶನಗಳನ್ನು ಎ ಖಾತೆಯನ್ನಾಗಿ ಪರಿವರ್ತಿಸಿಕೊಳ್ಳಲು 100 ದಿನಗಳ ಕಾಲಾವಕಾಶ ನೀಡಲಾಗುತ್ತಿದೆ. ನವೆಂಬರ್ 1 ರಿಂದ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆಗೆ ಅವಕಾಶ ಕಲ್ಪಿಸಲಾಗುತ್ತಿದ್ದು, ಸಾರ್ವಜನಿಕರು 500 ರೂ. ಶುಲ್ಕ ಪಾವತಿಸಿ ನೋಂದಣಿ ಮಾಡಿಕೊಳ್ಳಬಹುದು ಎಂದರು.

ಪ್ರತಿಯೊಂದು ಪಾಲಿಕೆಯಲ್ಲೂ ಎರಡು ಕಡೆ ಕಚೇರಿಗಳನ್ನು ಆರಂಭಿಸಿ, ಸಹಾಯ ಕೇಂದ್ರಗಳ ಮೂಲಕ ನೆರವು ನೀಡಲಾಗುವುದು. ಬೆಂಗಳೂರು ಒನ್ ಕೇಂದ್ರದಲ್ಲೂ ನೋಂದಣಿಗೆ ಅವಕಾಶ ಕಲ್ಪಿಸಲಾಗುವುದು. ಯಾರಿಗೆ ಯಾರೂ ಕೂಡ ಒಂದು ರೂ. ಲಂಚ ನೀಡಬಾರದು. ಅಧಿಕೃತವಾದ ಶುಲ್ಕ ಮಾತ್ರ ಪಾವತಿಸಬೇಕು ಎಂದರು.

## ಆರ್‌ಎಸ್‌ಎಸ್ ಚಟುವಟಿಕೆ ನಿಷೇಧ ತ.ನಾಡು ಮಾದರಿ ಪರಿಶೀಲಿಸಿ ನಿರ್ಧಾರ

**ಮೈಸೂರು:** ಸರ್ಕಾರಿ ಸ್ಥಳಗಳಲ್ಲಿ ಆರ್.ಎಸ್‌ಎಸ್ ಚಟುವಟಿಕೆಗಳನ್ನು ಕೈಗೊಳ್ಳಬಾರದು. ತಮಿಳುನಾಡು ಮಾದರಿಯಲ್ಲಿ ಇಲ್ಲಿಯೂ ನಿಷೇಧಿಸಬೇಕು ಎಂದು ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ. ಇದರಲ್ಲಿ ತಪ್ಪೇನಿದೆ?, ಬೆದರಿಕೆಗಳಿಗೆ ನಾವು ಹೆದರುವುದಿಲ್ಲ" ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ತಮಗೆ ಬೆದರಿಕೆ ಕರೆ ಬಂದಿರುವ ಕುರಿತು ಪ್ರಿಯಾಂಕ್ ಖರ್ಗೆ ಆಡಿಯೋ ಬಿಡುಗಡೆ ಮಾಡಿರುವ ಬಗ್ಗೆ ಮೈಸೂರು ಏರ್‌ಪೋರ್ಟ್‌ನಲ್ಲಿ ಮಾಧ್ಯಮಕ್ಕೆ ಪ್ರತಿಕ್ರಿಯಿಸಿದ ಸಿಎಂ, "ತಮಿಳುನಾಡಿನಲ್ಲಿ ಆರ್.ಎಸ್.ಎಸ್. ನಿಷೇಧದ ಬಗ್ಗೆ ಮಾಹಿತಿ ಪಡೆಯಲು ಸೂಚನೆ ನೀಡಲಾಗಿದೆ. ತಮಿಳುನಾಡಿನಲ್ಲಿ ಯಾವ ರೀತಿ ನಿಷೇಧ ಹೇರಲಾಗಿದೆ ಎಂಬ ಬಗ್ಗೆ ಮಾಹಿತಿ ತರಿಸುವಂತೆ ಮುಖ್ಯ ಕಾರ್ಯದರ್ಶಿಗಳಿಗೆ ಸೂಚಿಸಲಾಗಿದೆ. ವರದಿ ಬಂದ ನಂತರ ಅದನ್ನು ಪರಿಶೀಲಿಸಲಾಗುವುದು" ಎಂದು ತಿಳಿಸಿದ ಅವರು, "ಪ್ರಿಯಾಂಕ್ ಖರ್ಗೆ ಅವರಿಗೆ ರಕ್ಷಣೆ ಒದಗಿಸಲಾಗುವುದು. ದುಷ್ಟ ಶಕ್ತಿಗಳು ಯಾವಾಗಲೂ ಇಂಥದ್ದೇ ಕೆಲಸ ಮಾಡುತ್ತವೆ. ಬೆದರಿಕೆಗಳಿಗೆ ಪ್ರಿಯಾಂಕ್ ಖರ್ಗೆ ಅವರು ಹೆದರುವುದಿಲ್ಲ, ನಾನೂ ಹೆದರುವುದಿಲ್ಲ" ಎಂದರು.

ತಾಕತ್ತಿದ್ದರೆ RSS ಮೇಲೆ ನಿಷೇಧ ಹೇರಲಿ ಎಂದು ಬಿಜೆಪಿ ನಾಯಕರು ಸವಾಲು ಹಾಕಿರುವ ಬಗ್ಗೆ ಪ್ರತಿಕ್ರಿಯಿಸಿ, "ಚುನಾವಣೆಯ ಸಂದರ್ಭದಲ್ಲಿಯೂ ಬಿಜೆಪಿಯವರು ತಾಕತ್ತಿದ್ದರೆ ಬನ್ನಿ ಎಂದಿದ್ದರು. ಆದರೆ ಸೋತು ಹೋದರು" ಎಂದು ವ್ಯಂಗ್ಯವಾಡಿದರು.

ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ತಡವಾಗುತ್ತಿರುವ ಕುರಿತ ಪ್ರಶ್ನೆಗೆ ಉತ್ತರಿಸಿದ ಸಿಎಂ, "ಬೆಂಗಳೂರು ನಗರ ಬಿಟ್ಟರೆ ಬೇರೆಲ್ಲೂ ಶೇಕಡಾವಾರು ಪ್ರಮಾಣದಲ್ಲಿ ಕಡಿಮೆಯಾಗಿಲ್ಲ" ಎಂದು ತಿಳಿಸಿದರು.



ಶಾಸಕರಿಗೆ ಅನುದಾನ ನೀಡುವಲ್ಲಿ ಸರ್ಕಾರ ತಾರತಮ್ಯ ಮಾಡುತ್ತಿದೆ ಎಂದು ಹೈಕೋರ್ಟ್ ಗೆ ಶ್ರೀನಿವಾಸಪುರ ಶಾಸಕ ಮೊರೆ ಹೋಗಿರುವ ಬಗ್ಗೆ ಮಾತನಾಡಿ, "ಜೆಡಿಎಸ್ ನವರು ನಮ್ಮ ಶಾಸಕರಿಗೆ ಅನುದಾನ ನೀಡಿದ್ದಾರೆಯೇ" ಎಂದು ಪ್ರಶ್ನಿಸಿ, "ರಾಜ್ಯದ ಸರ್ವತೋಮುಖ ಅಭಿವೃದ್ಧಿಯಾಗಬೇಕಿದ್ದು, ಎಲ್ಲರಿಗೂ ಅನುದಾನ ಒದಗಿಸಲಾಗುತ್ತಿದೆ" ಎಂದರು.

ಮೈಸೂರಿನಲ್ಲಿ ಅಪರಾಧ ಪ್ರಕರಣ ಹೆಚ್ಚಳ: ಮೈಸೂರಿನಲ್ಲಿ ಅಪರಾಧ ಪ್ರಕರಣಗಳು ಹೆಚ್ಚುತ್ತಿರುವ ಬಗ್ಗೆ ಪರಿಶೀಲಿಸಲಾಗುವುದು ಎಂಬ ಸಿಎಂ ತಿಳಿಸಿದರು. ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಪ್ರಿಯಾಂಕ್ ಖರ್ಗೆ ಅವರಿಗೆ ಬಂದಿರುವ ಬೆದರಿಕೆ ಕರೆ ಬಗ್ಗೆ ಇಂದು ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿ, "ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿದ್ದೇವೆ" ಎಂದು ಬೆಂಗಳೂರಿನಲ್ಲಿ ತಿಳಿಸಿದ್ದಾರೆ. "ಯಾರು ಬೆದರಿಕೆ ಕರೆ ಮಾಡಿದ್ದಾರೆ, ಎಲ್ಲಿಂದ ಬಂದಿದೆ ಎಂಬುದನ್ನು ತನಿಖೆ ಮಾಡುತ್ತೇವೆ. ಆರ್‌ಎಸ್‌ಎಸ್ ವಿಚಾರದಲ್ಲಿ ಸಚಿವರು ತಮ್ಮ ಅಭಿಪ್ರಾಯ ಹೇಳಿರಬಹುದು. ಆ ಬಗ್ಗೆ ಸರ್ಕಾರ ತೀರ್ಮಾನ ಮಾಡುತ್ತದೆ. ಅದಕ್ಕೆ ಅವರಿಗೆ ಬೆದರಿಕೆ ಮಾಡುವುದು ಸರಿಯಲ್ಲ. ಎಲ್ಲವನ್ನೂ ಪರಿಶೀಲನೆ ಮಾಡುವುದಕ್ಕೆ ಸೂಚಿಸಿದ್ದೇನೆ" ಎಂದು ತಿಳಿಸಿದ್ದಾರೆ.

## ಎಂಎಸ್‌ಐಎಲ್ ಸೂಪರ್ ಮಾರ್ಕೆಟ್ ಮಳಿಗೆ ತೆರೆಯಲು ಚಿಂತನೆ: ಪಾಟೀಲ

**ಬೆಂಗಳೂರು:** ಪೊಲೀಸ್ ಹಾಗೂ ಸೇನಾ ಕ್ಯಾಂಟಿನ್ ಮಾದರಿಯಲ್ಲಿ ಸರ್ಕಾರಿ ನೌಕರರ ಬದುಕಿಗೆ ಅಗತ್ಯ ವಸ್ತುಗಳು ರಿಯಾಯಿತಿ ದರದಲ್ಲಿ ಸಿಗಬೇಕೆಂಬ ಉದ್ದೇಶದಿಂದ ರಾಜ್ಯ ಸರ್ಕಾರಿ ಸ್ವಾಮ್ಯದ ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ (ಎಂಎಸ್‌ಐಎಲ್) ವತಿಯಿಂದ ಸೂಪರ್ ಮಾರ್ಕೆಟ್ ಮಳಿಗೆ ಆರಂಭಿಸಲು ಚಿಂತನೆ ನಡೆಸಲಾಗಿದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ.

ನಗರದ ಖನಿಜ ಭವನದಲ್ಲಿ ಇಂದು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಎಂಎಸ್‌ಐಎಲ್ ವ್ಯವಸ್ಥಾಪಕ ನಿರ್ದೇಶಕ ಮನೋಜ್ ಕುಮಾರ್ ಸೇರಿದಂತೆ ಇತರ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ರಾಜ್ಯದ ಪೊಲೀಸ್, ಅರೆ ಸೇನಾ ಪಡೆಗಳ ನೌಕರರಿಗೆ ಈ ರೀತಿಯ ಕ್ಯಾಂಟೀನ್ ಸೌಲಭ್ಯವಿದೆ. ರಾಜ್ಯದಲ್ಲಿ 6 ಲಕ್ಷ ಸರ್ಕಾರಿ ನೌಕರರಿದ್ದಾರೆ. ಅವರ ಕುಟುಂಬಗಳ ಹಿತದೃಷ್ಟಿಯಿಂದ ಇಂಥದ್ದೊಂದು ಉಪಕ್ರಮ ಆರಂಭಿಸುವುದು ನಮ್ಮ ಚಿಂತನೆ. ಇದಕ್ಕೆ ಸಬ್ಸಿಡಿ ಅಥವಾ ತೆರಿಗೆ ವಿನಾಯಿತಿ ಪಡೆದುಕೊಳ್ಳುವುದು ಹೇಗೆಂದು ಆರ್ಥಿಕ ಇಲಾಖೆಯ ಜೊತೆ ಚರ್ಚಿಸಲಾಗುವುದು. ಸೂಪರ್ ಮಾರ್ಕೆಟ್ ಮಳಿಗೆ ಆರಂಭಿಸುವ ಸಾಧ್ಯಾಸಾಧ್ಯತೆಯ ಕುರಿತು ಒಂದು ತಿಂಗಳಲ್ಲಿ ವಿಸ್ತೃತ ವರದಿ ಸಲ್ಲಿಸುವಂತೆ ಎಂಎಸ್‌ಐಎಲ್‌ಗೆ ಸೂಚಿಸಲಾಗಿದೆ" ಎಂದು ಸಚಿವ ಎಂ.ಬಿ.ಪಾಟೀಲ್ ಹೇಳಿದರು.

ಉದ್ದೇಶಿತ ಎಂಎಸ್‌ಐಎಲ್ ಸೂಪರ್ ಮಾರ್ಕೆಟ್‌ನಲ್ಲಿ ಸರ್ಕಾರಿ ನೌಕರರ ದಿನನಿತ್ಯದ ಬದುಕಿಗೆ ಬೇಕಾದ ದವಸ-ಧಾನ್ಯಗಳಿಂದ ಹಿಡಿದು ಎಫ್‌ಎಂಸಿಜಿ ವಲಯದಲ್ಲಿ



ಬರುವ ಪ್ರತಿಯೊಂದು ಪದಾರ್ಥವೂ ರಿಯಾಯಿತಿ ದರದಲ್ಲಿ ಸಿಗುವಂತಾದರೆ ಅನುಕೂಲವಾಗುತ್ತದೆ. ಮೊದಲ ಹಂತದಲ್ಲಿ ಬೆಂಗಳೂರಿನಲ್ಲಿ 4-5 ಮಳಿಗೆಗಳನ್ನು ತೆರೆಯುವ ಆಲೋಚನೆ ಇದೆ. ನಂತರ ಜಿಲ್ಲಾ ಕೇಂದ್ರಗಳಲ್ಲೂ ಇದೇ ರೀತಿಯ ಸೌಲಭ್ಯ ವಿಸ್ತರಣೆಗೆ ಮುಂದಾಗಬಹುದು. ಅಧ್ಯಯನ ವರದಿ ಬಂದ ನಂತರ ತೀರ್ಮಾನಿಸಲಾಗುವುದು" ಎಂದು ಅವರು ತಿಳಿಸಿದರು.

ಸೂಪರ್ ಮಾರ್ಕೆಟ್ ಮಳಿಗೆ ಆರಂಭವಾದರೆ ಎಂಎಸ್‌ಐಎಲ್ ಚಟುವಟಿಕೆ ವಿಸ್ತರಿಸುವ ಜೊತೆಗೆ, ಆದಾಯವನ್ನೂ ಕಂಡುಕೊಳ್ಳಬಹುದು. ಅಲ್ಲದೆ, ಲಕ್ಷಾಂತರ ಸರ್ಕಾರಿ ನೌಕರರ ಕುಟುಂಬಗಳಿಗೂ ಇದರಿಂದ ಪ್ರಯೋಜನವಾಗಲಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರಿ ನೌಕರರ ಸಂಘಟನೆಗಳ ಜೊತೆ ಮಾತುಕತೆ ನಡೆಸುವಂತೆಯೂ ಸೂಚಿಸಲಾಗಿದೆ. ಎಂಎಸ್‌ಐಎಲ್‌ನ ಚಟುವಟಿಕೆಗಳು ಈಗ ಸೀಮಿತ ಪ್ರಮಾಣದಲ್ಲಿವೆ. ಇದಕ್ಕೆ ಮತ್ತಷ್ಟು ಕಸುವು ತುಂಬಿ, ಆರ್ಥಿಕವಾಗಿ ಸದೃಢಗೊಳಿಸಬೇಕೆಂಬ ಆಲೋಚನೆ ನಮ್ಮದು. ಇದರಿಂದ ಅಪಾರ ಸಂಖ್ಯೆಯಲ್ಲಿ ಪ್ರತ್ಯಕ್ಷ ಮತ್ತು ಪರೋಕ್ಷ ಉದ್ಯೋಗಗಳೂ ಸೃಷ್ಟಿಯಾಗಲಿವೆ" ಎಂದು ಸಚಿವರು ವಿಶ್ವಾಸ ವ್ಯಕ್ತಪಡಿಸಿದರು.

### ಸರ್ಕಾರಿ ನೌಕರರ ತುಟ್ಟಿಭತ್ಯೆ ಶೇ.2ರಷ್ಟು ಹೆಚ್ಚಳ

## ರಾಜ್ಯ ಸರ್ಕಾರದಿಂದ ಆದೇಶ

**ಬೆಂಗಳೂರು:** ಸರ್ಕಾರಿ ನೌಕರರ ತುಟ್ಟಿಭತ್ಯೆಯನ್ನು (ಡಿಎ) ಶೇ.2ರಷ್ಟು ಹೆಚ್ಚಿಸಿ ರಾಜ್ಯ ಸರ್ಕಾರ ಬುಧವಾರ ಆದೇಶ ಹೊರಡಿಸಿದೆ. ಈ ಮೂಲಕ ನೌಕರರಿಗೆ ದೀಪಾವಳಿಯ ಸಿಹಿಸುದ್ದಿ ನೀಡಿದೆ.

ರಾಜ್ಯ ಸರ್ಕಾರಿ ನೌಕರರಿಗೆ ಪರಿಷ್ಕೃತ ತುಟ್ಟಿಭತ್ಯೆ ಕಳೆದ ಜುಲೈ 1ರಿಂದ ಅನ್ವಯವಾಗಲಿದೆ. ಮೂಲವೇತನದ ಶೇ.12.25 ರಿಂದ ಶೇ.14.25ಕ್ಕೆ ಪರಿಷ್ಕರಿಸಿ ಆದೇಶಿಸಿದೆ. ಕೇಂದ್ರ ಸರ್ಕಾರ ನೌಕರರಿಗೆ ತುಟ್ಟಿಭತ್ಯೆ ಹೆಚ್ಚಳ ಬಳಿಕ ರಾಜ್ಯ ಸರ್ಕಾರ ಡಿಎಯನ್ನು ಪರಿಷ್ಕರಿಸುವ ಸಂಪ್ರದಾಯವಿದೆ. ಇತ್ತೀಚೆಗೆ ಕೇಂದ್ರ ಸರ್ಕಾರವು ತನ್ನ ನೌಕರರಿಗೆ ಶೇ.3ರಷ್ಟು ಡಿಎ ಹೆಚ್ಚಳ ಮಾಡಿತ್ತು. ಇದೇ ರೀತಿ ಶೇ.3ರಷ್ಟು ತುಟ್ಟಿಭತ್ಯೆ ಹೆಚ್ಚಿಸುವಂತೆ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಎಸ್.ಷಡಾಕ್ಷರಿ ಮನವಿ ಮಾಡಿದ್ದರು. ಇದರಂತೆ ಶೇ.2ರಷ್ಟು ಡಿಎ ಹೆಚ್ಚಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅನುಮೋದನೆ ನೀಡಿದ್ದಾರೆ. ತುಟ್ಟಿಭತ್ಯೆ ಹೆಚ್ಚಳಕ್ಕೆ ಷಡಾಕ್ಷರಿ ರಾಜ್ಯ ಸರ್ಕಾರಕ್ಕೆ ಧನ್ಯವಾದ ಸಲ್ಲಿಸಿದ್ದಾರೆ.

ಸರ್ಕಾರಿ ನೌಕರರಿಗೆ 'ಆರೋಗ್ಯ ಸಂಜೀವಿನಿ' ಯೋಜನೆ ಜಾರಿ: ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದವರಿಗೆ ನಗದುರಹಿತ ವೈದ್ಯಕೀಯ ಚಿಕಿತ್ಸೆ ನೀಡುವ 'ಕರ್ನಾಟಕ ಆರೋಗ್ಯ ಸಂಜೀವಿನಿ' ಯೋಜನೆ ಅಕ್ಟೋಬರ್ 1ರಿಂದ ಜಾರಿಗೆ ಬಂದಿದೆ. ಈ ಕುರಿತು ಸರ್ಕಾರ ಸೆಪ್ಟೆಂಬರ್ 23ರಂದು ಆದೇಶ ಹೊರಡಿಸಿತ್ತು.

ಈ ಯೋಜನೆಗಾಗಿ ನೌಕರರ ವೇತನದಿಂದ ಗ್ರೂಪ್‌ಗೆ ಅನುಗುಣವಾಗಿ ಮಾಸಿಕ ವಂತಿಕೆ ಕಡಿತವಾಗಲಿದ್ದು, ಸರ್ಕಾರ ಹೊಸ ಮಾರ್ಗಸೂಚಿಗಳನ್ನು ಹೊರಡಿಸಿತ್ತು. ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ಯೋಜನೆ ಅನುಷ್ಠಾನವಾಗಿದೆ. ಯೋಜನೆಯು ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಗುಣಮಟ್ಟದ ವೈದ್ಯಕೀಯ ಸೇವೆಗಳನ್ನು ನಗದುರಹಿತವಾಗಿ ಪಡೆಯಲು ಸಹಾಯಕವಾಗಲಿದೆ. ಅಕ್ಟೋಬರ್‌ನಿಂದಲೇ ಇದರ ಪ್ರಯೋಜನಗಳು ಲಭ್ಯ. ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ ಜಾರಿಗೆ ಬಂದ ದಿನಾಂಕದಿಂದ ಪ್ರಸ್ತುತ ಜಾರಿಯಲ್ಲಿರುವ "ಜ್ಯೋತಿ ಸಂಜೀವಿನಿ" ಯೋಜನೆ ಸ್ಥಗಿತಗೊಳ್ಳಲಿದೆ ಎಂದು ಆದೇಶದಲ್ಲಿ ಸ್ಪಷ್ಟಪಡಿಸಲಾಗಿತ್ತು.ಸರ್ಕಾರಿ ನೌಕರನ ಪತಿ ಅಥವಾ ಪತ್ನಿ ಕೂಡ ಸರ್ಕಾರಿ ನೌಕರರಾಗಿರುವಲ್ಲಿ ವಂತಿಕೆಯನ್ನು ಪತಿ ಅಥವಾ ಪತ್ನಿ ಇಬ್ಬರಲ್ಲಿ ಒಬ್ಬರು ಪಾವತಿಸುವ ಬಗ್ಗೆ ಸಂಬಂಧಪಟ್ಟ ಸರ್ಕಾರಿ ನೌಕರರೇ ತೀರ್ಮಾನಿಸಿ ಡಿಡಿಒಗೆ ಮಾಹಿತಿ ನೀಡಬೇಕು.

## ರಸ್ತೆ ಸರಿಪಡಿಸದಿದ್ದರೆ ತೆರಿಗೆ ಕಟ್ಟಲ್ಲ

**ಬೆಂಗಳೂರು:** ಸೂಕ್ತ ಸೌಲಭ್ಯ ಕಲ್ಪಿಸಿ ಇಲ್ಲವೇ ನಾವು ಇನ್ನು ಮುಂದೆ ಆಸ್ತಿ ತೆರಿಗೆ ಪಾವತಿಸುವುದಿಲ್ಲ ಎಂದು ಐಟಿ-ಬಿಟಿ ಮಂದಿ ಪಟ್ಟು ಹಿಡಿದಿದ್ದಾರೆ. ಇಲ್ಲಿನ ರಸ್ತೆ ಗುಂಡಿಗ ಳಿಂದ ಆಗಬಾರದ ಅನಾಹುತಗಳಾಗುತ್ತಿವೆ ಇಂತಹ ಸನ್ನಿವೇಶದಲ್ಲಿ ನಾವು ಯಾಕೆ ಆಸ್ತಿ ತೆರಿಗೆ ಪಾವತಿಸಬೇಕು ಎಂದು ಟ್ಯಾಕ್ಸ್ ಪೇಯರ್‌ರಸ ಫೋರಂ ಸದಸ್ಯರು ಸಿಎಂ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿದ್ದಾರೆ.

ಅತಿ ಹೆಚ್ಚು ಐಟಿ-ಬಿಟಿ ಮಂದಿ ವಾಸಿಸುವ ವರ್ತೂರು ಹಾಗೂ ಪಣತ್ತೂರಿನ ನಿವಾಸಿಗಳು ಟ್ಯಾಕ್ಸ್ ಪೇಯರ್‌ರಸ ಫೋರಂ ರಚನೆ ಮಾಡಿಕೊಂಡು ಸರ್ಕಾರದ ವಿರುದ್ಧ ಸಮರ ಸಾರಿದ್ದಾರೆ.ನಗರದ ಇಂತಹ ದುಸ್ಥಿತಿ ತಲುಪಿರುವ ಸಂದರ್ಭದಲ್ಲಿ ನಾವು ಆಸ್ತಿ ತೆರಿಗೆ ಕಟ್ಟುವುದಿಲ್ಲ, ನಮ್ಮಿಂದ ತೆರಿಗೆ ಕೇಳಬೇಡಿ ಎಂದು ಅವರು ಸಿಎಂ, ಡಿಸಿಎಂಗೆ ಪತ್ರ ಬರೆದಿದ್ದಾರೆ. ವರ್ತೂರು ಮತ್ತು ಪಣತ್ತೂರು ಭಾಗದ ರಸ್ತೆಗಳು ಸಂಪೂರ್ಣ ಹಾಳಾಗಿವೆ. ಇರುವ ರಸ್ತೆಗಳಲ್ಲಿ ಗುಂಡಿಗಳಿವೆ ಹೀಗಾಗಿ ಇಲ್ಲಿ ನಿತ್ಯ ಗಂಟೆಗಟ್ಟಲೆ ಟ್ರಾಫಿಕ್ ಜಾಮ್ ಉಂಟಾಗುತ್ತಿದೆ. ನಿತ್ಯ ಸ್ಕೂಲ್ ಬಸ್‌ಗಳ ಅಪಘಾತದಿಂದ ಬೆಸತ್ತು ನಾವು ಈ ರೀತಿಯ ತೀರ್ಮಾನಕ್ಕೆ ಬಂದಿದ್ದೇವೆ ಎಂದು ಫೋರಂ ಸದಸ್ಯರು ತಿಳಿಸಿದ್ದಾರೆ. ಗುಂಡಿ ಮುಕ್ತ ರಸ್ತೆ ಮಾಡಿ ಮೂಲಭೂತ ಸೌಕರ್ಯ ಕಲ್ಪಿಸಿದ ನಂತರ ತೆರಿಗೆ ಕೇಳಿ ಎಂದು ಅವರು ಪತ್ರದಲ್ಲಿ ಆಗ್ರಹಿಸಿದ್ದಾರೆ.

## ಮಾನವ ಹಕ್ಕುಗಳ ಮಂಡಳಿಗೆ ಭಾರತದ ಸಾರಥ್ಯ

**ನ್ಯೂಯಾರ್ಕ್:** ಭಾರತವು 2026-28ರ ಅವಧಿಗೆ ವಿಶ್ವಸಂಸ್ಥೆಯ ಮಾನವ ಹಕ್ಕುಗಳ ಮಂಡಳಿಗೆ (ಯುಎನ್‌ಎಚ್‌ಆರ್‌ಸಿ) ಆಯ್ಕೆಯಾಗಿದ್ದು, ಇದು ಜಿನೀವಾ ಮೂಲದ ಹಕ್ಕುಗಳ ಸಂಸ್ಥೆಯಲ್ಲಿ ದೇಶದ ಏಳನೇ ಅವಧಿಯನ್ನು ಗುರುತಿಸುತ್ತದೆ. ನಿನ್ನೆ ನಡೆದ ಚುನಾವಣೆಯ ಫಲಿತಾಂಶಗಳನ್ನು ಪ್ರಕಟಿಸಿದ ಯುಎನ್‌ಎಚ್‌ಆರ್‌ಸಿ, ಭಾರತದ ಮೂರು ವರ್ಷಗಳ ಅವಧಿ ಜನವರಿ 1, 2026 ರಂದು ಪ್ರಾರಂಭವಾಗಲಿದೆ ಎಂದು ತಿಳಿಸಿದೆ.

ವಿಶ್ವಸಂಸ್ಥೆಗೆ ಭಾರತದ ಖಾಯಂ ಪ್ರತಿನಿಧಿ ಪರ್ವತನೇನಿ ಹರೀಶ್, ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಎಲ್ಲಾ ನಿಯೋಗಗಳ ಅಗಾಧ ಬೆಂಬಲಕ್ಕಾಗಿ ಧನ್ಯವಾದ ಅರ್ಪಿಸಿದರು.2026-28ರ ಅವಧಿಗೆ ಭಾರತ ಇಂದು ಏಳನೇ ಬಾರಿಗೆ ಮಾನವ ಹಕ್ಕುಗಳ ಮಂಡಳಿಗೆ ಆಯ್ಕೆಯಾಗಿದೆ ಎಂದು ಅವರು ಹೇಳಿದರು.

ಈ ಚುನಾವಣೆಯು ಮಾನವ ಹಕ್ಕುಗಳು ಮತ್ತು ಮೂಲಭೂತ ಸ್ವಾತಂತ್ರ್ಯಗಳಿಗೆ ಭಾರತದ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದು ರಾಜತಾಂತ್ರಿಕರು ಹೇಳಿದರು.ನಮ್ಮ ಅಧಿಕಾರಾವಧಿಯಲ್ಲಿ ಈ ಉದ್ದೇಶವನ್ನು ಪೂರೈಸಲು ನಾವು ಎದುರು ನೋಡುತ್ತಿದ್ದೇವೆ ಎಂದು ಅವರು ಹೇಳಿದರು.ಯುಎನ್ ಮಾನವ ಹಕ್ಕುಗಳ ಮಂಡಳಿಯು ಸಮಾನ ಭೌಗೋಳಿಕ ವಿತರಣಾ ನಿಯಮಗಳ ಅಡಿಯಲ್ಲಿ ಮೂರು ವರ್ಷಗಳ ಅವಧಿಗೆ ಯುಎನ್ ಜನರಲ್ ಅಸೆಂಬ್ಲಿಯಿಂದ ಆಯ್ಕೆಯಾದ 47 ಸದಸ್ಯ ರಾಷ್ಟ್ರಗಳನ್ನು ಒಳಗೊಂಡಿದೆ.

ಐದು ಪ್ರಾದೇಶಿಕ ಗುಂಪುಗಳಿಗೆ ಕೌನ್ಸಿಲ್ ಸ್ಥಾನಗಳನ್ನು ಈ ಕೆಳಗಿನಂತೆ ಹಂಚಲಾಗಿದೆ: ಆಫ್ರಿಕನ್ ರಾಜ್ಯಗಳು, 13 ಸ್ಥಾನಗಳು; ಏಷ್ಯಾ-ಪೆಸಿಫಿಕ್ ರಾಜ್ಯಗಳು, 13 ಸ್ಥಾನಗಳು; ಪೂರ್ವ ಯುರೋಪಿಯನ್ ರಾಜ್ಯಗಳು, 6 ಸ್ಥಾನಗಳು; ಲ್ಯಾಟಿನ್ ಅಮೇರಿಕನ್ ಮತ್ತು ಕೆರಿಬಿಯನ್ ರಾಜ್ಯಗಳು, 8 ಸ್ಥಾನಗಳು; ಮತ್ತು ಪಶ್ಚಿಮ ಯುರೋಪಿಯನ್ ಮತ್ತು ಇತರ ರಾಜ್ಯಗಳು, 7 ಸ್ಥಾನಗಳು.

ಸತತ ಎರಡು ಅವಧಿಗಳ ನಂತರ 2024 ರಲ್ಲಿ ಯುಎನ್‌ಎಚ್‌ಆರ್‌ಸಿಯಲ್ಲಿ ಕೊನೆಯ ಬಾರಿಗೆ ಸೇವೆ ಸಲ್ಲಿಸಿದ ಭಾರತ, ಈ ವರ್ಷ ಸ್ವಲ್ಪ ಅಂತರವನ್ನು ತೆಗೆದುಕೊಂಡು 2026-28 ಅವಧಿಗೆ ಚುನಾವಣೆಗೆ ಸ್ಪರ್ಧಿಸುವ ಮೊದಲು ಮೂರನೇ ನೇರ ಅಧಿಕಾರಾವಧಿಯನ್ನು ನಿರ್ಬಂಧಿಸುವ ನಿಯಮಗಳಿಗೆ ಅನುಸಾರವಾಗಿದೆ.2011, 2018 ಮತ್ತು 2025 ರಲ್ಲಿ ಮೂರು ಕಡ್ಡಾಯ ವಿರಾಮಗಳನ್ನು ಹೊರತುಪಡಿಸಿ, 2006 ರಲ್ಲಿ ರಚನೆಯಾದಾಗಿನಿಂದ ಭಾರತವು ನಿರಂತರವಾಗಿ ಕೌನ್ಸಿಲ್‌ನ ಸದಸ್ಯ ರಾಷ್ಟ್ರವಾಗಿದೆ.


## ಇಂದು ಆಂಧ್ರಕ್ಕೆ ಮೋದಿ: ವಿವಿಧ ಯೋಜನೆಗಳಿಗೆ ಚಾಲನೆ

### ಒಟ್ಟು 13,430 ಕೋಟಿ ರೂ. ಯೋಜನೆಗಳಿಗೆ ಶಂಕುಸ್ಥಾಪನೆ: ಶ್ರೀಶೈಲಂನ ಶ್ರೀ ಭ್ರಮರಾಂಬ ಮಲ್ಲಿಕಾರ್ಜುನ ಸ್ವಾಮಿ ದೇವಸ್ಥಾನಕ್ಕೆ ಭೇಟಿ ವಿಶೇಷ ಪೂಜೆ

**ಅಮರಾವತಿ:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಇಂದು ಆಂಧ್ರಪ್ರದೇಶಕ್ಕೆ ಬಹು ಕಾರ್ಯಕ್ರಮಗಳಿಗಾಗಿ ಭೇಟಿ ನೀಡಲಿದ್ದಾರೆ, ಈ ಸಂದರ್ಭದಲ್ಲಿ ಅವರು 13,430 ಕೋಟಿ ರೂ. ಮೌಲ್ಯದ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಕರ್ನೂಲ್‌ನಲ್ಲಿ ಸೂಪರ್ ಜಿಎಸ್‌ಟಿ ಸೂಪರ್ ಸೇವಿಂಗ್ಸ್ ಕಾರ್ಯಕ್ರಮದಲ್ಲಿಯೂ ಅವರು ಭಾಗವಹಿಸಲಿದ್ದಾರೆ. ಈ ಯೋಜನೆಗಳು ಕೈಗಾರಿಕೆ, ವಿದ್ಯುತ್ ಪ್ರಸರಣ, ರಸ್ತೆಗಳು, ರೈಲ್ವೆಗಳು, ರಕ್ಷಣಾ ಉತ್ಪಾದನೆ ಮತ್ತು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲದಂತಹ ಪ್ರಮುಖ ಕ್ಷೇತ್ರಗಳನ್ನು ವ್ಯಾಪಿಸಿವೆ.ಪ್ರಧಾನಿ ಮೋದಿ ಗುರುವಾರ ಬೆಳಿಗ್ಗೆ ನಂದ್ಯಾಲ್ ಜಿಲ್ಲೆಯ ಶ್ರೀಶೈಲಂನಲ್ಲಿರುವ ಶ್ರೀ ಭ್ರಮರಾಂಬ ಮಲ್ಲಿಕಾರ್ಜುನ ಸ್ವಾಮಿ ವರ್ಲ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಲಿದ್ದಾರೆ. ನಂತರ, ಅವರು ಶ್ರೀಶೈಲಂನಲ್ಲಿರುವ ಶ್ರೀ ಶಿವಾಜಿ ಸ್ಫೂರ್ತಿ ಕೇಂದ್ರಕ್ಕೆ ಭೇಟಿ ನೀಡಲಿದ್ದಾರೆ ಮತ್ತು ನಂತರ ಕರ್ನೂಲ್‌ಗೆ ತೆರಳಿ ಉದ್ಘಾಟನೆ ಮತ್ತು ಶಿಲಾನ್ಯಾಸ ಕಾರ್ಯಕ್ರಮಗಳನ್ನು ನೆರವೇರಿಸಲಿದ್ದಾರೆ.ಮೋದಿ ಸುಮಾರು 13,430 ಕೋಟಿ ರೂ. ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಶಿಲಾನ್ಯಾಸ, ಉದ್ಘಾಟನೆ ಮತ್ತು ದೇಶಕ್ಕೆ ಲೋಕಾರ್ಪಣೆ ಮಾಡಲಿದ್ದಾರೆ. ಈ ಯೋಜನೆಗಳು ಪ್ರಮುಖ ವಲಯಗಳಲ್ಲಿ ವ್ಯಾಪಿಸಿವೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಕರ್ನೂಲ್- ಪೂಲಿಂಗ್ ಸ್ಟೇಷನ್‌ನಲ್ಲಿ 2,880



ಕೋಟಿ ರೂ.ಗಳಿಗೂ ಹೆಚ್ಚು ಹೂಡಿಕೆಯಲ್ಲಿ ಪ್ರಸರಣ ವ್ಯವಸ್ಥೆಯನ್ನು ಬಲಪಡಿಸಲು ಅವರು ಅಡಿಪಾಯ ಹಾಕಲಿದ್ದಾರೆ.ಈ ಯೋಜನೆಯು 765 ಕೆವಿ ಡಬಲ್-ಸರ್ಕ್ಯೂಟ್ ಕರ್ನೂಲ್-ಪೂಲಿಂಗ್ ಸ್ಟೇಷನ್-ಚಿಲಕಲುರಿಪೇಟೆ ಪ್ರಸರಣ ಮಾರ್ಗದ ನಿರ್ಮಾಣವನ್ನು ಒಳಗೊಂಡಿದೆ, ಇದು 6,000 ರಷ್ಟು ರೂಪಾಂತರ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ ಮತ್ತು ರಾಷ್ಟ್ರದ ಬೆಳವಣಿಗೆಯನ್ನು ಬೆಂಬಲಿಸಲು ನವೀಕರಿಸಬಹುದಾದ ಶಕ್ತಿಯ ದೊಡ್ಡ ಪ್ರಮಾಣದ ಪ್ರಸರಣವನ್ನು ಸಕ್ರಿಯಗೊಳಿಸುತ್ತದೆ.

ಅದೇ ರೀತಿ, ಕರ್ನೂಲ್‌ನ ಓರ್ವಕಲ್ ಕೈಗಾರಿಕಾ ಪ್ರದೇಶ ಮತ್ತು ಕಡಪದ ಕೊಪ್ಪರ್ತಿ ಕೈಗಾರಿಕಾ ಪ್ರದೇಶಕ್ಕೆ ಅವರು ಶಿಲಾನ್ಯಾಸ ಮಾಡಲಿದ್ದಾರೆ, ಒಟ್ಟು 4,920 ಕೋಟಿ ರೂ. ಗಳಿಗೂ ಹೆಚ್ಚು ಹೂಡಿಕೆಯೊಂದಿಗೆ.ರಾಷ್ಟ್ರೀಯ ಕೈಗಾರಿಕಾ ಕಾರಿಡಾರ್ ಅಭಿವೃದ್ಧಿ ಮತ್ತು ಅನುಷ್ಠಾನ ಟ್ರಸ್ಟ್ ಮತ್ತು ಆಂಧ್ರಪ್ರದೇಶ ಕೈಗಾರಿಕಾ ಮೂಲಸೌಕರ್ಯ ನಿಗಮ ಲಿಮಿಟೆಡ್ ಜಂಟಿಯಾಗಿ ಅಭಿವೃದ್ಧಿಪಡಿಸಿರುವ ಈ ಆಧುನಿಕ ಬಹು-ವಲಯ ಕೈಗಾರಿಕಾ ಕೇಂದ್ರಗಳು ಪ್ಲಗ್-ಅಂಡ್-ಪ್ಲೇ ಮೂಲಸೌಕರ್ಯ ಮತ್ತು ವಾಕ್-ಟು-ವರ್ಕ್ ಪರಿಕಲ್ಪನೆಯನ್ನು ಹೊಂದಿವೆ.

ಈ ಕೇಂದ್ರಗಳು 21,000 ಕೋಟಿ ರೂ. ಹೂಡಿಕೆಗಳನ್ನು ಆಕರ್ಷಿಸುವ ಮತ್ತು ಸುಮಾರು ಒಂದು ಲಕ್ಷ ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ, ಇದು ದಕ್ಷಿಣ ರಾಜ್ಯದ ರಾಯಲಸೀಮಾ ಪ್ರದೇಶದಲ್ಲಿ ಕೈಗಾರಿಕಾ ಅಭಿವೃದ್ಧಿ ಮತ್ತು ಜಾಗತಿಕ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುತ್ತದೆ.ಪ್ರಧಾನಮಂತ್ರಿಯವರು 960 ಕೋಟಿ ರೂ.ಗಳಿಗೂ ಹೆಚ್ಚು ವೆಚ್ಚದಲ್ಲಿ ಸಬ್ಬಾವರಂನಿಂದ ಶೀಲಾನಗರದವರೆಗಿನ ಆರು ಪಥಗಳ ಹಸಿರುಮನೆ ಹೆದ್ದಾರಿಗೆ ಅಡಿಪಾಯ ಹಾಕಲಿದ್ದಾರೆ.

ಈ ಯೋಜನೆಯು ಬಂದರು ನಗರ ವಿಶಾಖಪಟ್ಟಣದಲ್ಲಿ ದಟ್ಟಣೆಯನ್ನು ಕಡಿಮೆ ಮಾಡುವುದು ಮತ್ತು ವ್ಯಾಪಾರ ಮತ್ತು ಉದ್ಯೋಗವನ್ನು ಸುಗಮಗೊಳಿಸುವ ಗುರಿಯನ್ನು ಹೊಂದಿದೆ.ಇದಲ್ಲದೆ, ಪ್ರಧಾನಮಂತ್ರಿಯವರು ಕಡಪನೆಲ್ಲೂರು ಗಡಿಯಿಂದ ಸಿಎಸ್ ಪುರಂವರೆಗೆ ಅಗಲೀಕರಣಗೊಳಿಸುವ ಪಿಲೇರು-ಕಲೂರು ವಿಭಾಗದ ರಸ್ತೆಯ ಚತುಷ್ಪಥ ಮತ್ತು -165 ರಲ್ಲಿ ಗುಡಿವಾಡ ಮತ್ತು ನುಜೆಲ್ಲಾ ರೈಲು ನಿಲ್ದಾಣಗಳ ನಡುವಿನ ಚತುಷ್ಪಥ ರೈಲ್ ಓವರ್ ಬ್ರಿಡ್ಜ ಅನ್ನು ಉದ್ಘಾಟಿಸಲಿದ್ದಾರೆ.

ಇಂಧನ ವಲಯದಲ್ಲಿ, ಪ್ರಧಾನ ಮಂತ್ರಿ ಅವರು ಗೈಲ್ ಇಂಡಿಯಾ ಲಿಮಿಟೆಡ್‌ನ ಶ್ರೀಕಾಕುಲಂ-ಅಂಗುಲ್ ನೈಸರ್ಗಿಕ ಅನಿಲ ಪೈಪ್‌ಲೈನ್ ಅನ್ನು ಉದ್ಘಾಟಿಸಲಿದ್ದಾರೆ.

## ಕೃಷಿ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ



**ಧಾರವಾಡ:** ಉತ್ತರ ಕರ್ನಾಟಕ ಜನತೆಯ ಬಹುದಿನಗಳ ಬೇಡಿಕೆಯಾದ 'ಸಿಹಿ ನೀರು ಮುತ್ತು (Pearl) ಕೃಷಿ'ಯ ಪ್ರಥಮ ತರಬೇತಿ ಕಾರ್ಯಕ್ರಮವನ್ನು ಅಕ್ಟೋಬರ್ 13 ರಂದು ಪ್ರಾರಂಭಿಸಲಾಯಿತು.

ಎರಡು ದಿನಗಳ ಈ ತರಬೇತಿ ಕಾರ್ಯಕ್ರಮಕ್ಕೆ ಡಾ.ಕೆ.ವಿ.ಬಸವಕುಮಾರ ವಿದ್ಯಾಧಿಕಾರಿಗಳು(ಕೃಷಿ), ಕೃಷಿ ಮಹಾವಿದ್ಯಾಲಯ, ಹನುಮನಮಟ್ಟಿ ಇವರು ಮುತ್ತು ಕೃಷಿಯ ಸೂಕ್ಷ್ಮ ಪರಿಚಯದೊಂದಿಗೆ ಗಣ್ಯಮಾನ್ಯರಿಗೆ ಸ್ವಾಗತವನ್ನು ಕೋರಿದರು. ಇದೇ ಸಂದರ್ಭದಲ್ಲಿ ವಿಶ್ವವಿದ್ಯಾಲಯದಲ್ಲಿ ಮುತ್ತು ಕೃಷಿಯ ಯೋಜನೆಯ ಅನುಷ್ಠಾನಕ್ಕೆ ಕಾರಣೀಭೂತರಾದ ಹಾಗೂ ಕಾರ್ಯಕ್ರಮದ ಮುಖ್ಯ ಅತಿಥಿಗಳಾದ ಡಾ.ಬಿ.ಡಿ.ಬಿರಾದಾರ, ಸಂಶೋಧನಾ ನಿರ್ದೇಶಕರು, ತರಬೇತಿಯ ಹಿನ್ನಲೆ ಮತ್ತು ಉದ್ದೇಶಗಳನ್ನು ಶಿಬಿರಾರ್ಥಿಗಳಿಗೆ ತಿಳಿಸಿಕೊಟ್ಟರು. ಸಮಾರಂಭದ ಅಧ್ಯಕ್ಷತೆ ವಹಿಸಿದ ಕುಲಪತಿಗಳಾದ ಡಾ.ಪಿ.ಎಲ್.ಪಾಟೀಲ್ ಅವರು ಮುತ್ತು ಕೃಷಿ ಕೈಗೊಂಡು ಆರ್ಥಿಕ ಸ್ವಾವಲಂಬಿಗಳಾಗಲು ಸಣ್ಣ ಹಿಡುವಳಿದಾರರು, ಸ್ವಯಂ ಸಂಘಗಳು ಮತ್ತು ಮಹಿಳಾ ಉದ್ಯಮದಾರರಿಗೆ ಕರೆನೀಡಿದರು.

ಕಾರ್ಯಕ್ರಮದಲ್ಲಿ ಡಾ.ಪಿ.ಯು.ಕೃಷ್ಣರಾಜ, ವಿದ್ಯಾಧಿಕಾರಿಗಳು, ಕೃಷಿ ಮಹಾವಿದ್ಯಾಲಯ, ಧಾರವಾಡ, ಡಾ. ಪ್ರಶಾಂತಿ ಎಸ್. ಕೆ, ಮುಖ್ಯಸ್ಥರು, ಜೈವಿಕ ತಂತ್ರಜ್ಞಾನ ವಿಭಾಗ ಹಾಗೂ ಇತರೇ ಸಿಬ್ಬಂದಿಗಳು ಉಪಸ್ಥಿತರಿದ್ದರು. ಈ ಯೋಜನೆಯ ಆಯೋಜಕರಾದ ಡಾ. ಎನ್. ಬಿ. ಮೊಗೇರ ಅವರು ವಂದನಾರ್ಪಣೆಯನ್ನು ಸಲ್ಲಿಸಿದರು. ರೈತರು, ಚಿಕ್ಕ ಹಿಡುವಳಿದಾರರು, ಆಸಕ್ತ ನವೋದ್ಯಮಿಗಳು ಸೇರಿದಂತೆ ಒಟ್ಟು 20 ಶಿಬಿರಾರ್ಥಿಗಳು ಈ ತರಬೇತಿಯಲ್ಲಿ ಭಾಗವಹಿಸಿದ್ದರು.

## ಇಂದು ಫೋನ್-ಇನ್ ಕಾರ್ಯಕ್ರಮ

**ಹುಕ್ಕೇರಿ:** ಮಹಿಳಾ ಕಲ್ಯಾಣ ಸಂಸ್ಥೆಯ ನಮ್ಮೂರ ಬಾನುಲಿ ಸಮುದಾಯ ರೇಡಿಯೋ ಕೇಂದ್ರ 90.8 ಈಒ ವತಿಯಿಂದ ಹಿರಿಯ ನಾಗರಿಕರಿಗಾಗಿ ವಿಶೇಷ "ಫೋನ್–ಇನ್ ಕಾರ್ಯಕ್ರಮ"ವನ್ನು ಗುರುವಾರ, ಅಕ್ಟೋಬರ್ 16, 2025 ರಂದು ಮಧ್ಯಾಹ್ನ 3.00ರಿಂದ 5.00ರವರೆಗೆ ಆಯೋಜಿಸಲಾಗಿದೆ.

ಕಾರ್ಯಕ್ರಮದ ಮುಖ್ಯ ಉದ್ದೇಶ ಹಿರಿಯ ನಾಗರಿಕರ ಸಾಮಾಜಿಕ, ಕಾನೂನು ಹಾಗೂ ಭಾವನಾತ್ಮಕ ಸಮಸ್ಯೆಗಳಿಗೆ ಸಹಾಯ ಒದಗಿಸುವುದಾಗಿದೆ ಇದರಲ್ಲಿ, ಸರಕಾರದ ವಿವಿಧ ಯೋಜನೆಗಳ ಕುರಿತು ಮಾಹಿತಿ, ವೈಯಕ್ತಿಕ ಮತ್ತು ವೈವಹಾರಿಕ ಸಮಸ್ಯೆಗಳ ಪರಿಹಾರ, ಶೋಷಣೆ, ಮೋಸ ಮತ್ತು ಕಿರುಕುಳ ನಿವಾರಣೆಯ ಪ್ರಯತ್ನ, ರಕ್ಷಣೆ ಹಾಗೂ ಪುನರ್ವಸತಿ ಅವಕಾಶಗಳ ಕುರಿತು ಮಾಹಿತಿ, ಕಾನೂನು ಸಹಾಯ, ಪಿಂಚಣಿ ಮತ್ತು ಇತರೆ ಪ್ರಮಾಣಪತ್ರಗಳ ಪಡೆಯಲು ನೆರವು ಹಾಗೂ ಆಪ್ತ ಸಮಾಲೋಚನೆ ಹಾಗೂ ಭಾವನಾತ್ಮಕ ಬೆಂಬಲ ಹಾಗೂ ಇತರೆ. ಹಿರಿಯ ನಾಗರಿಕರು ತಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳಲು ಹಾಗೂ ಸಲಹೆ ಪಡೆಯಲು ದೂರವಾಣಿ ಸಂಖ್ಯೆ 9164577143 ಗೆ ಕರೆಮಾಡಬಹುದು

# ಆರ್‌ಎಸ್‌ಎಸ್ ಏಕಭಾರತ ಶ್ರೇಷ್ಠ ಭಾರತ ಎಂಬ ದಿಟ್ಟೆ ಹೆಜ್ಜೆ ಇಟ್ಟಿದೆ

**ಬಸವನಬಾಗೇವಾಡಿ:** ದೇಶದಲ್ಲಿ 1925 ರಲ್ಲಿ ವ್ಯಕ್ತಿ ನಿರ್ಮಾಣದಿಂದ ರಾಷ್ಟ್ರ ನಿರ್ಮಾಣ ಮಾಡಬೇಕೆಂಬ ಸದುದ್ದೇಶದಿಂದ ಡಾ.ಹೆಗಡೆವಾರ ಅವರು ರಾಷ್ಟ್ರೀಯ ಸ್ವಯಂ ಸೇವಕ ಸಂಘವನ್ನು ಅಸ್ತಿತ್ವಕ್ಕೆ ತಂದರು. ಈ ಧ್ಯೇಯ ಹೊಂದಿರುವ ಸಂಘವು ಇಂದು ಏಕಭಾರತ ಶ್ರೇಷ್ಠ ಭಾರತ ಎಂಬ ದಿಟ್ಟೆ ಹೆಜ್ಜೆ ಇಟ್ಟಿದೆ ಎಂದು ಆರ್.ಎಸ್.ಎಸ್. ಪ್ರಾಂತ ಕಾರ್ಯಕಾರಿಣಿ ಸದಸ್ಯ ನಾಗೇಶ ಚಿನ್ನಾರೆಡ್ಡಿ ಹೇಳಿದರು.

ಪಟ್ಟಣದ ಬಸವೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಮೈದಾನದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಶತಾಬ್ದಿ ವರ್ಷದಂಗವಾಗಿ ಮಂಗಳವಾರ ಹಮ್ಮಿಕೊಂಡಿದ್ದ ಬಹಿರಂಗ ಸಭೆಯಲ್ಲಿ ಮುಖ್ಯ ವಕ್ತಾರರಾಗಿ ಮಾತನಾಡಿದ ಅವರು, ಇತಿಹಾಸ ಪ್ರಜ್ಞೆಯೊಂದಿಗೆ ಡಾ.ಹೆಗಡೆವಾರ ಅವರು ಈ ಸಂಘದ ಸ್ಥಾಪನೆ ಮಾಡುವ ಮೂಲಕ ದೇಶದಲ್ಲಿ ಸ್ವಯಂ ಸೇವಕರು ದೇಶದ ಸ್ವಾತಂತ್ರ್ಯ, ರಕ್ಷಣೆಗಾಗಿ, ಹಿಂದು ಸಮಾಜದ ಸಂರಕ್ಷಣೆಗಾಗಿ ಮೌನ ತಪಸ್ವಿಯಾಗಿ ಕಾರ್ಯನಿರ್ವಹಿಸುವಂತೆ ಮಾಡುವಲ್ಲಿ ಪಾತ್ರ ವಹಿಸಿದ್ದನ್ನು ಕಾಣುತ್ತೇವೆ. ದೇಶದ ಪ್ರತಿಯೊಬ್ಬರ ಅಂತಃಕರಣದಲ್ಲಿ ದೇಶದ ವೈಭವ, ದೇಶ ಭಕ್ತಿ ಬರಬೇಕು. ಗುಣವಿಕಾಸ ಹೊಂದಬೇಕು. ಸಮಾಜದಲ್ಲಿರುವ ಎಲ್ಲರೂ ನನ್ನವರು ಎಂಬ ಭಾವ ಬರಬೇಕೆಂಬ ಉದ್ದೇಶ ಸೇರಿದಂತೆ ಸದುದ್ದೇಶಗಳೊಂದಿಗೆ ಸಂಘವು ದೇಶದಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದರು.

ನೂರು ವರ್ಷದಲ್ಲಿ ಸಂಘವು ಸಮಾಜದಲ್ಲಿ ಆತ್ಮಜ್ಞಾನ, ಆತ್ಮವಿಶ್ವಾಸ, ಆತ್ಮಗೌರವ ಮೂಡಿಸಿದೆ. ಹಿಂದು ಸಂಸ್ಕೃತಿ, ಸಂಸ್ಕಾರಕ್ಕೆ ಯಾವುದೇ ಸವಾಲು ಬಂದರೂ ಅಮೂಲಗ್ರವಾಗಿ



ಅದನ್ನು ಕಿತ್ತು ಹಾಕಲು ಸಮಾಜದಲ್ಲಿ ಜಾಗೃತಿ ಮೂಡಿಸಿದೆ. ಸದ್ಗುಣಗಳು ವಿಕಾಸವಾಗುವಂತೆ ಮಾಡಿದೆ. ಹಿಂದು ಸಂಘಟಿತ ಸಶಕ್ತ ಭಾರತವನ್ನು ನಿರ್ಮಾಣ ಮಾಡಲು ಹೊರಟಿದೆ. ದೇಶದ ಹಿತ ಕಾಪಾಡುವಲ್ಲಿ ಸದಾ ನಿರತವಾಗಿದೆ. ಇಂತಹ ಸಂಘವನ್ನು ರಾಜ್ಯದ ಒರ್ವ ಮಂತ್ರಿಯೊಬ್ಬರು ಆತಂಕವಾದಿ ಸಂಘಟನೆ ಎಂದು ಹೇಳಿರುವದು ವಿಷಾದಕರ ಸಂಗತಿ. ಇಂತಹವರು ತಮ್ಮ ಸ್ವಾರ್ಥಕ್ಕಾಗಿ, ಸಮಾಜದ ವಿಭಜನೆಗೆ ಮುಂದಾಗುತ್ತಿದ್ದಾರೆ. ಸಂಘವು ಸಮೃದ್ಧ ಸಮಾಜ ನಿರ್ಮಾಣ ಮಾಡಬೇಕೆಂಬ ಕನಸು ಹೊಂದಿದೆ. ಇದಕ್ಕೆ ಎಲ್ಲ ಬಾಂಧವರು ಕಟ್ಟಿಬದ್ಧರಾಗಬೇಕಿದೆ ಎಂದರು.

ಇಂದು ಕೌಟುಂಬಿಕದಲ್ಲಿ ಮೌಲ್ಯಗಳು ಕಡಿಮೆಯಾಗುತ್ತಿವೆ. ನಾವೆಲ್ಲರೂ ಕೌಟುಂಬಿಕ ಮೌಲ್ಯಗಳ ರಕ್ಷಣೆ ಮಾಡುವಂತಾಗಬೇಕು. ವಿದೇಶಿ ಸಂಸ್ಕೃತಿಗೆ ಮಾರು ಹೋಗದೇ ದೇಶೀಯ ಸಂಸ್ಕೃತಿಯನ್ನು ಮೈಗೂಡಿಸಿಕೊಳ್ಳಬೇಕು. ಸಮಾಜದ ಸಮಾಜ ನಿರ್ಮಾಣಕ್ಕೆ ಸಾಮರಸ್ಯ ಅಗತ್ಯವಿದೆ. ಸ್ವದೇಶ ಜೀವನ ಚಿಂತನೆ, ಪರಿಸರ ಸಂರಕ್ಷಣೆ, ನಾಗರಿಕ ಶಿಷ್ಟಾಚಾರ, ಕರ್ತವ್ಯದ ನಿರ್ವಹಣೆ ಸೇರಿದಂತೆ ದೇಶದ ಹಿತಕ್ಕಾಗಿ ಅನೇಕ ಸಂಗತಿಯನ್ನು ಅರಿತು ನಡೆಯಬೇಕಿದೆ ಎಂದರು.

ಮುಖ್ಯ ಅತಿಥಿ ಸ್ಥಾನ ವಹಿಸಿದ್ದ ಮಾಜಿ ಸೈನಿಕ ಶಿವಾನಂದ ಅಡಗಿಮನಿ ಮಾತನಾಡಿ, ಆರ್.ಎಸ್.ಎಸ್. ಸಂಘವು ಶಿಸ್ತಿಗೆ ಹೆಸರಾಗಿದೆ. ಇದರಿಂದ ಜೀವನದಲ್ಲಿ ನಾವೆಲ್ಲರೂ ಉತ್ತಮ ಜೀವನ ಸಾಗಿಸುವದರೊಂದಿಗೆ ದೇಶದ ಹಿತಕ್ಕಾಗಿ ಚಿಂತನೆ ಮಾಡಲು ಪೂರಕವಾಗಿದೆ ಎಂದರು.

ಈಶ್ವರ ಹಳ್ಳಿ ಪ್ರಾರ್ಥಿಸಿದರು. ಅಮೃತ ವಚನವನ್ನು ಈಶ್ವರ ಪರಮಗೊಂಡ ವಾಚಿಸಿದರು. ಡಾ.ಬಸವರಾಜ ಚವ್ಹಾಣ ಸ್ವಾಗತಿಸಿ, ನಿರೂಪಿಸಿದರು. ಅಮೃತ ಯಾದವ ವಂದಿಸಿದರು.

## ಹೆಸರು ನೋಂದಣಿಗೆ ಅರ್ಜಿ ಸಲ್ಲಿಸಲು ನ. 6 ಕೊನೆಯ ದಿನ

**ಗದಗ:** ಮತದಾರರ ನೋಂದಣಿ ನಿಯಮಗಳು 1960 ರ 31 (4) ನೇ ನಿಯಮದ ಅನುಸಾರ ಸಂಬಂಧಿಸಿದ ಪದವೀಧರ ಮತಕ್ಷೇತ್ರದ ಮತದಾರರ ಪಟ್ಟಿಯಲ್ಲಿ ನೊಂದಾಯಿಸಿಕೊಳ್ಳಲು ಅರ್ಹರಿರುವ ಪ್ರತಿಯೊಬ್ಬರ ವ್ಯಕ್ತಿಯು ಮತದಾರರ ನೊಂದಣಿ ನಿಯಮ 1960 ರನ್ವಯ ಮತ್ತು ದಿನಪತ್ರಿಕೆಯಲ್ಲಿ ಪ್ರಕಟಿಸಲಾದ ಎರಡನೇ ಅನುಸೂಚಿಯಲ್ಲಿ ಪುನರುದ್ಧರಿಸಿರುವ ನಮೂನೆ –18 ರಲ್ಲಿ ಅರ್ಜಿಯನ್ನು 6 ನೇ ನವೆಂಬರ್ 2025 ಅಥವಾ ಅದಕ್ಕೂ ಮೊದಲು ಮತದಾರರ ನೋಂದಣಾಧಿಕಾರಿಗಳ/ ಸಂಬಂಧಪಟ್ಟ ಸಹಾಯಕ ಮತದಾರರ ನೊಂದಣಾಧಿಕಾರಿಗಳ/ ನಿಯೋಜಿತ ಅಧಿಕಾರಿಗಳ ಕಚೇರಿಗೆ ಕಳುಹಿಸಲು ಕರೆ ನೀಡಲಾಗಿದೆ.

ಪದವೀಧರ ವ್ಯಕ್ತಿಯು ತಮ್ಮ ಹೆಸರನ್ನು ಇದುವರೆಗೂ ಸೇರಿಸದೇ ಇದ್ದಲ್ಲಿ ಇದ್ದಲ್ಲಿ ನಿಗದಿತ ನಮೂನೆ –18 ರಲ್ಲಿ 2025 ರ ನವೆಂಬರ್ 6 ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳು ಮುಖ್ಯ ಚುನಾವಣಾಧಿಕಾರಿ, ಕರ್ನಾಟಕ ಇವರ ವೆಬ್‌ಸೈಟ್ ವಿಳಾಸ www.ceokarnataka.kar.nic.in ಇಲ್ಲಿ ಲಭ್ಯವಿದೆ ಎಂದು ಕರ್ನಾಟಕ ಪಶ್ಚಿಮ ಪದವೀಧರರ ಮತಕ್ಷೇತ್ರ ಮತದಾರರ ನೋಂದಣಾಧಿಕಾರಿಗಳು ಹಾಗೂ ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಸಾಪದಿಂದ ಕಲಾವಿದ ರಾಜು ತಾಳಿಕೋಟಿಗೆ ನುಡಿನಮನ

**ಮುದ್ದೇಬಿಹಾಳ:** ನಾಟಕ ಕಲೆಯ ಮೂಲಕ ಪ್ರಖ್ಯಾತಿಯನ್ನು ಹೊಂದಿದ್ದ ಉತ್ತರ ಕರ್ನಾಟಕದ ಪ್ರತಿಭಾವಂತ ನಾಟಕಕಾರ ಹಾಗೂ ಕಲಾವಿದ, ಧಾರವಾಡ ರಂಗಾಯಣದ ನಿರ್ದೇಶಕರು ಹಾಗೂ ಚಲನಚಿತ್ರ ಹಾಸ್ಯನಟ ರಾಜು ತಾಳಿಕೋಟಿ ಅವರ ಆಕಸ್ಮಿಕ ನಿಧನ ಇಡೀ ಜಾನಪದ ಸಾಹಿತ್ಯ ರಂಗಭೂಮಿಗೆ ತುಂಬಲಾರದ ನಷ್ಟವಾಗಿದೆ ಎಂದು ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ ಅವರು ನುಡಿದರು.

ಮಂಗಳವಾರರಂದು ಪಟ್ಟಣದ ಪ್ರವಾಸಿ ಮಂದಿರದಲ್ಲಿ ಕಸಾಪ ವತಿಯಿಂದ ಹಮ್ಮಿಕೊಂಡಿದ್ದ ನುಡಿನಮನ ಉದ್ದೇಶಿಸಿ ಮಾತನಾಡುತ್ತಿದ್ದ ಅವರು ರಾಜು ತಾಳಿಕೋಟಿ ಅವರ ಕಲಾ ಹಾಗೂ ರಂಗಭೂಮಿ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅಜರಾಮರವಾಗಿದೆ ಎಂದರು.

ಹಿರಿಯ ಸಾಹಿತಿಗಳಾದ ಅಶೋಕ ಮಣಿ, ವೈ ಎಚ್. ವಿಜಯಕರ ಅವರು ಅವರು ಮಾತನಾಡಿ ರಂಗಭೂಮಿಯಲ್ಲಿ ಮಾಸ್ಟರ್ ಹಿರಣ್ಯನವರಂತೆ ಉತ್ತರ ಕರ್ನಾಟಕದ ನಾಟಕಗಳ ಮೂಲಕ ಎಲ್ಲರ ಗಮನ ಸೆಳೆಯುತ್ತಿದ್ದರಲ್ಲದೇ ನಷ್ಟದಲ್ಲಿ ಇರುತ್ತಿದ್ದ ಅನೇಕ ನಾಟಕ ಕಂಪನಿಗಳಲ್ಲಿ ಉಚಿತವಾಗಿ ಅಭಿನಯಿಸುವ ಮೂಲಕ ನಷ್ಠವನ್ನು ಭರಿಸುವ ಕೆಲಸ ಅವರು ಮಾಡಿದ್ದಾರೆಂದರು. ಬಸವರಾಜ ನಾಲತವಾಡ, ಎಂ.ಎಂ. ಬೆಳಗಲ್ಲ, ಐ.ಬಿ. ಹಿರೇಮಠ, ಪರಶುರಾಮ ಚೌಡಿಕೇರ, ಸಂಗಮೇಶ ಶಿವಣಗಿ, ಎಸ್.ಎ. ಬೇವಿನಗಿಡದ ಅವರು ಮಾತನಾಡಿದರು. ನುಡಿನಮನದಲ್ಲಿ ರಾಜು ತಾಳಿಕೋಟೆ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮೌನಾಚರಣೆ ಮಾಡಲಾಯಿತು.

ಈ ಸಮಯದಲ್ಲಿ ಹುಸೇನ್ ಮುಲ್ಲಾ, ರಫೀಕ್ ಶಿರೋಳ, ಅಶೋಕ ವನಹಳ್ಳಿ, ಈರಣ್ಣ ಇಡ್ಲೂರ, ರಜಮಾನ ನಧಾಪ, ಮತ್ತಯ್ಯ ಹಿರೇಮಠ, ರಾಜು ಬಳ್ಳೊಳ್ಳಿ ಹಾಗೂ ಸಾಹಿತಿಗಳು, ಕಲಾವಿದರು, ಶಿಕ್ಷಕರು, ಗಣ್ಯರು ಭಾಗವಹಿಸಿದ್ದರು.





**ಗೋಕಾಕ್ ಇಲ್ಲಿ ಕ್ಯಾಂಪ್ ಮಾಡಿದ ವಿಶ್ವಜ್ಯೋತಿ ಪಂಚಾಕ್ಷರ ನಾಟ್ಯ ಸಂಘ ಜೇವರ್ಗಿ ಕಂಪನಿಯ ಕಲಾವಿದ ರಿಂದ ಸಂತಾಪ ಸೂಚಕಸಭೆ ಏರ್ಪಡಿಸಲಾಗಿತ್ತು. ಹಿರಿಯ ಕಲಾವಿದ ಪ್ರಕಾಶ್ ಮೂಡಿಗೆರೆ, ಸಿದ್ರಾಮ್ ತತ್ರಾಣಿ, ಮಾರುತಿ ಶೆಟ್ಟಿ, ಬಸವಲಿಂಗಪ್ಪ ಕೂಡ್ಲಿ, ಮುತ್ತು ದೊಡಮನಿ, ಪ್ರಭು ಹಿರೇಮಠ್, ಬಸು ಧಾರವಾಡ, ಸುಭಾಸ್ ಬೆಟಗೇರಿ, ನೀಲಾ ಜೇವರ್ಗಿ, ಅನ್ನಪೂರ್ಣ ಧಾರವಾಡ. ಕವಿತಾ ಬನ್ನೂರ್, ಪ್ರೇಮ ಇದ್ದರು**

## ಗದಗನಲ್ಲಿ ವಿಜಯ ಜ್ಯೋತಿಗೆ ಅದ್ದೂರಿ ಸ್ವಾಗತ




**ಗದಗ:** ಕಿತ್ತೂರು ಉತ್ಸವದ ಪ್ರಯುಕ್ತ ರಾಜ್ಯಾದ್ಯಂತ ಹಮ್ಮಿಕೊಂಡಿರುವ ವಿಜಯ ಜ್ಯೋತಿ ಯಾತ್ರೆಗೆ ಮಂಗಳವಾರ ನಗರದ ಪ್ರವಾಸಿ ಮಂದಿರದಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಸ್ವಾಗತಿಸಿ ಪೂಜೆ ಸಲ್ಲಿಸಿದರು.ಕಿತ್ತೂರ ಚೆನ್ನಮ್ಮಾ ವಿಜಯ ಜ್ಯೋತಿಗೆ ಸ್ವಾಗತಿಸಿ, ರಥದಲ್ಲಿದ್ದ ರಾಣಿ ಚೆನ್ನಮ್ಮ ಪುತ್ಥಳಿಗೆ ಪುಷ್ಪಹಾರ ಅರ್ಪಿಸಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ನಗರದ ಪ್ರವಾಸಿ ಮಂದಿರದಿಂದ ವೀರಜ್ಯೋತಿ ಮೆರವಣಿಗೆಯು ಆರಂಭವಾಗಿ ಮುಳಗುಂದ ನಾಕಾ, ಎಸಿ ಕಚೇರಿ ಮೂಲಕ ಕಲಾ ತಂಡಗಳೊಂದಿಗೆ ಸಾಗಿದ ವಿಜಯ ಜ್ಯೋತಿ ಯಾತ್ರೆ ಕಿತ್ತೂರ ಚನ್ನಮ್ಮ ವೃತ್ತ ತಲುಪಿ ಮುಂದೆ ಸಾಗಿತು.

ಬೆಳಗಾವಿ ಜಿಲ್ಲೆ ಕಿತ್ತೂರಿನಲ್ಲಿ ಅಕ್ಟೋಬರ್ 23 ರಿಂದ 25 ರವರೆಗೆ ನಡೆಯಲಿರುವ ಕಿತ್ತೂರು ಉತ್ಸವ ಪ್ರಯುಕ್ತ ರಾಜ್ಯದಾದ್ಯಂತ ಸಂಚರಿಸುವ ಈ ವಿಜಯ ಜ್ಯೋತಿ ಯಾತ್ರೆ ಹಾವೇರಿ ಜಿಲ್ಲೆಯಿಂದ ಗದಗ ಜಿಲ್ಲೆಗೆ ತಲುಪಿದ್ದು, ಲಕ್ಕುಂಡಿ ಮಾರ್ಗವಾಗಿ ಜಿಲ್ಲೆಯಿಂದ ಕೊಪ್ಪಳ ಜಿಲ್ಲೆಗೆ ಬಿಳ್ಕೊಡಲಾಯಿತು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರ್ ಸಾಬ್ ಬಬರ್ಜಿ, ಗಣ್ಯರಾದ ಸಿದ್ದಪ್ಪ ಪಲ್ಲೇದ, ಎಮ್. ಎಸ್. ಕರಿಗೌಡರ್,ವಿಜಯಕುಮಾರ್ ಗಡ್ಡಿ, ಈರಣ್ಣ ಕರಿಬಿಷ್ಟಿ, ನಾಗರಾಜ ತುಪ್ಪದ, ಹಿರೇಮನಿ ಪಾಟೀಲ, ಫಕೀರಪ್ಪ ಮರಿಗೌಡ್ರ, ಮಹೇಶ ಕರಿಬಿಷ್ಟಿ, ಜೀವನಗೌಡ್ರ, ಹಂಚಿನಾಳ, ಈರಮ್ಮ, ವಸಂತ ಪಡಗದ, ಅಶೋಕ ಸಂಕಣ್ಣವರ, ಅಯ್ಯಪ್ಪ ಅಂಗಡಿ, ಸಿದ್ದು ನಾಲ್ವಾಡ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ.ನಂದಾ ಹಣಬರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ಬಳ್ಳಾರಿ, ವಸಂತ ಮಡ್ಲೂರ, ತಹಶೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ರಾಜು ಕಂಟಿಗೊಣ್ಣವರ, ಶ್ರೀಧರ್ ಚಿನಗುಂಡಿ, ಪಾರ್ವತಿಮಠ, ರಾಜು ಸೋಪಡ್ಲ ಮತ್ತಿತರರು ಹಾಜರಿದ್ದರು.


### ಆರ್.ಎಸ್.ಎಸ್. ಬಗ್ಗೆ ಹೇಳಿಕೆ ನೀಡಿದ ಪ್ರಿಯಾಂಕ ಖರ್ಗೆ ವಿರುದ್ಧ ಬಿಜೆಪಿಯಿಂದ ಪ್ರತಿಭಟನೆ

## ಆರ್‌ಎಸ್‌ಎಸ್ ಒಂದು ರಾಷ್ಟ್ರಭಕ್ತಿ ಸಂಘಟನೆ

**ಬಾಗಲಕೋಟೆ:** ರಾಷ್ಟ್ರೀಯ ಸ್ವಯಂ ಸೇವಕ ಸಂಘ ರಾಷ್ಟ್ರಭಕ್ತಿ ಸಂಘಟನೆ, ವ್ಯಕ್ತಿ ನಿರ್ಮಾಣ, ರಾಷ್ಟ್ರ ನಿರ್ಮಾಣ ಕಾರ್ಯದಲ್ಲಿ ದೇಶಕ್ಕೆ ಆರ್.ಎಸ್.ಎಸ್.ತನ್ನದೆಯಾದ ರೀತಿಯಲ್ಲಿ ಕೋಡುಗೆ ನೀಡಿದ್ದು ಜನರಲ್ಲಿ ದೇಶಪ್ರೇಮವನ್ನು ತುಂಬುವ ಏಕೈಕ ರಾಷ್ಟ್ರಭಕ್ತ ಸಂಘಟನೆಯಾಗಿದೆ ಎಂದು ಮಾಜಿ ಶಾಸಕ ಡಾ. ವೀರಣ್ಣ ಚರಂತಿಮಠ ಹೇಳಿದರು.

ಅವರು ನಗರದ ಬಸವೇಶ್ವರ ವೃತ್ತದಲ್ಲಿ ಭಾರತೀಯ ಜನತಾ ಪಾರ್ಟಿ ಜಿಲ್ಲಾ ಹಾಗೂ ಬಾಗಲಕೋಟೆ ಮತಕ್ಷೇತ್ರದಿಂದ ಕಾಂಗ್ರೆಸ್ಸ ಸಚಿವ ಪ್ರಿಯಾಂಕ ಖರ್ಗೆ ಆರ್.ಎಸ್. ಎಸ್ ವಿರೂದ್ಧ ನೀಡಿದ ಹೇಳಿಕೆಯನ್ನು ಖಂಡಿಸಿ ಹಮ್ಮಿಕೊಂಡ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಆರ್. ಎಸ್.ಎಸ್. ದೇಶಕ್ಕೆ ಸಮರ್ಪಣೆಯಾದ ಸಂಘಟನೆಯಾಗಿದೆ.

ಯಾವುದೆ ಜಾತಿ ಧರ್ಮ ಬೇದಬಾವ ಇಲ್ಲ, ಇಲ್ಲಿ ಸಂತರು ಶರಣರು, ಲಕ್ಷಾಂತರ ದೇಶಭಕ್ತರು ಇದ್ದಾರೆ, ಪ್ರಿಯಾಂಕ ಖರ್ಗೆಯವರು ಹೈಕಾಂಡ ಮೆಚ್ಚಿಸಲು ಆರೆಸ್ಸಸ್ ವಿರೋಧಿಸುವು ಕೆಲಸ ಮಾಡುತ್ತಿದ್ದಾರೆ, ಸಿ.ಎಂ ಬದಲಾವಣೆ ಸಂಧರ್ಭದಲ್ಲಿ ಜನರ ಗಮನ ಬೇರೆಯೆಡೆ ಸೇಳೆಯಲು ಈ ರೀತಿ ಆರ್.ಎಸ್. ಎಸ್. ಬಗ್ಗೆ ಹಗುರವಾಗಿ ಮಾತನಾಡಿತ್ತಿದ್ದಾರೆ, ಜನರು ಇದಕ್ಕೆ ತಕ್ಕ ಪಾಠ ಕಲಿಸುತ್ತಾರೆ. ಸುಧಿರ್ಘ 100 ವರ್ಷಗಳಿಂದ ರಾಷ್ಟ್ರಸೇವೆ, ಸಮಾಜ ಸೇವೆಯಲ್ಲಿ ಆರ್.ಎಸ್.ಎಸ್‌ನ




ಪರಿಶ್ರಮ ಅಡಗಿದೆ, ಇನ್ನೂ 100 ವರ್ಷ ಕಳೆದರೂ ಬ್ಯಾನ ಮಾಡೋಕೆ, ನಿರ್ಬಂಧಿಸೋಕೆ ಯಾರಿಂದಲೂ ಸಾಧ್ಯವಿಲ ಎಂದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ ಪ್ರಿಯಾಂಕ ಖರ್ಗೆ ಕುಕ್ಕರ ನಂತಹ ಬಾಂಬ ಬ್ಲಾಸ್ಟ ಆದಾಗ, ಹಾದಿಬಿದಿಹಿಡಿದು ವಿಧಾನಸೌಧದವರೆಗೆ ಪಾಕಿಸ್ತಾನದ ಪರ ಘೋಷಣೆ ಕೂಗಿದಾಗ ಅವರು ಹಾಗೆ ಕೂಗಲೇ ಇಲ್ಲ ಅನ್ನುವ ಗೋಸುಂಭೆ, ಪ್ಯಾಲೇಸ್ತೈನ್ ಲೆಬನಾನ್ ನಂತಹ ಉಗ್ರವಾದಿಗಳ ಭಾವಚಿತ್ರ ಹಾಗೂ ಧ್ವಜ ಹಿಂಡಿದು ಉಗ್ರವಾದಿಗಳ ಪರ ಘೋಷಣೆ ಕೂಗಿದಾಗ ಮುಖ್ಯಮಂತ್ರಿಗಳಿಗೆ ತನಿಖೆ ಮಾಡಿ ಎಂದು ಪತ್ರ ಬರಿಯೋಕೆ ಭಯದ ಇದೆ ಎಂದು ವಾಗ್ದಾಳಿ ನಡೆಸಿದರು. ಪ್ರಿಯಾಂಕ ಖರ್ಗೆ ಹೆಸರೂ ಗಂಡೋ ಹೆಣ್ಣೋ ಎಂಬುವುದನ್ನು ಸಾಭಿತು ಪಡಿಸಲಿ ಆಮೇಲೆ ನೋಡೋಣ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಶಾಂತಗೌಡ ಪಾಟೀಲ ಮಾತನಾಡಿ ಸರ್ಕಾರಿ ಜಾಗೆಗಳಲ್ಲಿ ಆರ್. ಎಸ್.ಎಸ್. ಕಾರ್ಯ ನಿಷೇಧಿಸಬೇಕು ಎಂದು ಸಚಿವ ಪ್ರಿಯಾಂಕ ಖರ್ಗೆ ಸಿ.ಎಂ ಗೆ ಪತ್ರ ಬರೆದಿರುವುದು ಹಾಸ್ಯಾಸ್ಪದವಾಗಿದೆ, ತಮ್ಮ ಸ್ವಂತ ಜಿಲ್ಲೆಯಾದ ಕಲಬುರಗಿಯಲ್ಲಿ ಶೈಕ್ಷಣಿಕ ರಂಗದಲ್ಲಿ ಮೂಲಸೌಕರ್ಯ, ಅಭಿವೃದ್ಧಿ ವಿಚಾರ, ಸಂಪೂರ್ಣ ಹಿಂದಿರುವ ಜಿಲ್ಲೆಯಾಗಿದ್ದು, ರೈತರು ಬರಗಾಲ ಪರಿಹಾರಕ್ಕೆ ಬೀದಿ ಮೇಲೆ ಹೋರಾಟ ಮಾಡುತ್ತಿದ್ದಾರೆ ಎಂದರು.

ಪ್ರತಿಭಟಣೆಯಲ್ಲಿ ಜಿಲ್ಲಾ ಪ್ರದಾನ ಕಾರ್ಯದರ್ಶಿ ರಾಜು ನಾಯ್ಕರ, ಬಸವರಾಜ ಯಂಕಂಚಿ, ನಗರಸಭೆ ಉಪಾಧ್ಯಕ್ಷ ಶೋಭಾ ರಾವ, ಶಶಿಕಲಾ ಮಜ್ಜಗಿ, ಸರಸ್ವತಿ ಕುರುಬರ, ಉಮೇಶ ಹಂಚಿನಾಳ, ಶ್ರೀಧರ ನಾಗರಬೆಟ್ಟ, ಸುರೇಶ ಮಜ್ಜಗಿ ಸೇರಿದಂತೆ ಅನೇಕ ಜನ ಕಾರ್ಯಕರ್ತರು ಭಾಗವಹಿಸಿದ್ದರು.

## ದಾಖಲೆ ಸಲ್ಲಿಸಿ

**ಗೋಕಾಕ:** 2006–07 ನೇ ಸಾಲಿನಲ್ಲಿ ಜನಿಸಿ ಭಾಗ್ಯಲಕ್ಷ್ಮೀ ಯೋಜನೆಗೆ ಒಳಪಟ್ಟ ಪರಿಪಕ್ವ ಮೊತ್ತ ಪಡೆಯಲು ಅಕ್ಟೋಬರ–31 2025 ಕೊನೆಯ ದಿನಾಂಕವಾಗಿರುತ್ತದೆ.

ಆದ್ದರಿಂದ ಇನ್ನು ಪರಿಪಕ್ವ ಮೊತ್ತ ಪಡೆಯಲು ಬಾಕಿ ಇರುವ ಫಲಾನುಭವಿಗಳು ನಿಗದಿತ ದಿನಾಂಕದೊಳಗೆ ಅವಶ್ಯ ದಾಖಲೆಗಳೊಂದಿಗೆ ಕಚೇರಿಯನ್ನು ಸಂಪರ್ಕಿಸಿ ಪ್ರಸ್ತಾವಣೆ ಸಲ್ಲಿಸಲು ಕೋರಲಾಗಿದೆ. ನಿಗದಿತ ದಿನಾಂಕದೊಳಗೆ ಪ್ರಸ್ತಾವಣೆ ಸಲ್ಲಿಸದಿದ್ದಲ್ಲಿ ಯೋಜನೆಯಿಂದ ವಂಚಿತರಾಗುತ್ತೀರಿ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಈ ಪ್ರಕಟಣೆ ಮೂಲಕ ತಿಳಿಸಲಾಗಿದೆ.

## ಇಂದು ಪೂರ್ವಭಾವಿ ಸಭೆ

**ಗದಗ:** ಸರ್ಕಾರದ ಆದೇಶದನ್ವಯ ಪ್ರತಿ ವರ್ಷದಂತೆ ಈ ವರ್ಷವು ಅಕ್ಟೋಬರ್ 23 ರಂದು ಆಚರಿಸಲಾಗುವ ಕಿತ್ತೂರು ರಾಣಿ ಚನ್ನಮ್ಮ ಜಯಂತಿ ನಿಮಿತ್ಯ ಅಕ್ಟೋಬರ್ 16 ರಂದು ಗುರುವಾರ ಬೆಳಿಗ್ಗೆ:11.00 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು, ಗದಗ ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ. ಸಭೆಗೆ ಆಗಮಿಸಿ ಸಲಹೆ/ಅಭಿಪ್ರಾಯ ನೀಡಬೇಕೆಂದು ತಿಳಿಸಿದ್ದಾರೆ

### ಯುವಜನೋತ್ಸವ: ಯುವಕರಲ್ಲಿ ಎಚ್.ಐ.ವಿ/ಏಡ್ಸ್ ಜಾಗೃತಿ

## ರೆಡ್ ರಿಬ್ಬನ್ ರನ್ ಮ್ಯಾರಥಾನ್‌ಗೆ ಸಿಇಒ ಕುರೇರ ಚಾಲನೆ

**ಬಾಗಲಕೋಟೆ:** ಎಚ್.ಐವಿ, ಏಡ್ಸ್ ಜಾಗೃತಿಗಾಗಿ ಕಾಲೇಜು ವಿದ್ಯಾರ್ಥಿಗಳಿಗೆ ಹಮ್ಮಿಕೊಂಡ ರಾಜ್ಯ ಮಟ್ಟದ 5 ಕಿ.ಮೀ ರೆಡ್ ರಿಬ್ಬನ್ ರನ್ ಮ್ಯಾರಥಾನ್ ಸ್ಪರ್ಧೆಗೆ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ್ ಮಂಗಳವಾರ ಚಾಲನೆ ನೀಡಿದರು.

ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ರಾಜ್ಯ ಏಡ್ಸ್ ಪ್ರವೆನ್ಷನ್ ಸೊಸೈಟಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಮ ಜಿಲ್ಲಾ ಏಡ್ಸ್ ಪ್ರತಿಬಂಧಕ ಹಾಗೂ ನಿಯಂತ್ರಣ ಘಟಕ ಹಾಗೂ ಜಿಲ್ಲಾ ಯುವಜನ ಸೇವಾ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಮ್ಯಾರಥಾನ್ ಸ್ಪರ್ಧೆಗೆ ಚಾಲನೆ ನೀಡಿ ಮಾತನಾಡಿದ ಅವರು ಯುವಕರಲ್ಲಿ ಎಚ್.ಐ.ವಿ. ಏಡ್ ಬಗ್ಗೆ ಜಾಗೃತಿ ಮೂಡಿಸಲು ಯುಜನೋತ್ಸವ ಅಂಗವಾಗಿ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಈಗಾಗಲೇ ಜಿಲ್ಲಾ ಮಟ್ಟದಲ್ಲಿ ಮ್ಯಾರಥಾನ್ ಸ್ಪರ್ಧೆ ನಡೆದಿದ್ದು, ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಕಾಲೇಜು ವಿದ್ಯಾರ್ಥಿಗಳು ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಿದ್ದಾರೆ. ರಾಜ್ಯ ಮಟ್ಟದ ಮ್ಯಾರಥಾನ್ ಸ್ಪರ್ಧೆ ಬಾಗಲಕೋಟೆಯಲ್ಲಿ ಜರಗುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಯುಥ ಜಿಲ್ಲಾ ಏಡ್ಸ್ ನಿಯಂತ್ರಣ ಘಟಕ ಐಇಸಿ ವಿಭಾಗದ ಉಪನಿರ್ದೇಶಕ ಗೋವಿಂದ ರಾಜು, ಯುಥ ಕಸಾಪ್ಸನ ಸಹಾಯಕ



ನಿರ್ದೇಶಕ ನಂಜೇಗೌಡ, ಯುಥ ಜಿಲ್ಲಾ ಏಡ್ಸ್ ನಿಯಂತ್ರಣ ಅಧಿಕಾರಿ ಡಾ.ಸುವರ್ಣ ಕುಲಕರ್ಣಿ, ಸೇರಿದಂತೆ ಏಡ್ಸ್ ನಿಯಂತ್ರಣ ಘಟಕ ಸಿಬ್ಬಂದಿ ವರ್ಗದವರು ಇದ್ದರು.

ಮ್ಯಾರಥಾನ್ ಸ್ಪರ್ಧೆ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ಎ.ಪಿ.ಎಂ.ಸಿ, ಬಜಾಜ್ ಶೋರೂಮ್ ಮೂಲಕ ಮರಳಿ ಅಗ್ನಿಶಾಮಕ ಕಚೇರಿಗೆ ಮುಕ್ತಾಯಗೊಂಡಿತು. ಮ್ಯಾರಥಾನ್ ಸ್ಪರ್ಧೆಯಲ್ಲಿ ಪ್ರತಿ ಜಿಲ್ಲೆಯಿಂದ ಪ್ರಥಮ ಸ್ಥಾನ ಪಡೆದ ಕಾಲೇಜ ವಿದ್ಯಾರ್ಥಿ ವಿದ್ಯಾರ್ಥಿನಿಯರು ಭಾಗವಹಿಸಿದ್ದರು. ಪುರುಷರ ವಿಭಾಗದಲ್ಲಿ ಪ್ರಭು ಲಮಾಣಿ (ಪ್ರಥಮ), ಸಂಗಮೇಶ ಹಳ್ಳಿ (ದ್ವಿತೀಯ), ವೈಭವ ಪಾಟೀಲ (ತೃತೀಯ) ಸ್ಥಾನ ಪಡೆದುಕೊಂಡರೆ, ಮಹಿಳಾ ವಿಭಾಗದಲ್ಲಿ ಎಚ್.ವಿ.ದೀಕ್ಷಾ (ಪ್ರಥಮ), ಸಾಕ್ಷಿ (ದ್ವಿತೀಯ), ಯುವರಾಣಿ (ತೃತೀಯ) ಸ್ಥಾನ ಪಡೆದುಕೊಂಡರು. ವಿಜೇತರಾದವರಿಗೆ ತಲಾ ಪ್ರಥಮ 25 ಸಾವಿರ ರೂ, ದ್ವಿತೀಯ 20 ಸಾವಿರ ರೂ, ತೃತೀಯ 15 ಸಾವಿರ ರೂ.ಗಳ ನಗದು, ಪ್ರಶಸ್ತಿ ಪತ್ರ ಹಾಗೂ ಮೆಡಲ್ ನೀಡಲಾಯಿತು. ಸಮಾಧಾನಕರ ಬಹುಮಾನವನ್ನು ಪುರುಷ ವಿಭಾಗದಲ್ಲಿ ಬಾಲು ಹೆಗ್ಗಿ, ಬೈರು ನಾಯಕ, ರಮೇಶ, ಮಹಿಳಾ ವಿಭಾಗದಲ್ಲಿ ಶ್ರೇಯಾ ಎಂ, ಅಕ್ಷರಾ ಮಾಜುಕರ, ಯಲ್ಲಮ್ಮ ಪಡೆದುಕೊಂಡರು.

## ಉತ್ಸವ ಮೂರ್ತಿಗೆ ಅದ್ದೂರಿ ಸ್ವಾಗತ

**ಮುದ್ದೇಬಿಹಾಳ:** ಕಲಿಯುಗದ ಭಾವಬೋಧರು, ಚಿಂತಾಮಣಿಗಳೆಂದೇ ಪ್ರಖ್ಯಾತಿಯನ್ನು ಪಡೆದ ಪಿನಾಕಿ ತೀರದಲ್ಲಿ ವಿರಾಜಮಾನರಾದ ಶ್ರೀ ರಘೋತ್ತಮತೀರ್ಥ ಶ್ರೀಪಾದಂಗಳವರ ದಿವ್ಯಪಾದುಕೆ ಹಾಗೂ ಉತ್ಸವ ಮೂರ್ತಿಯನ್ನು ಪಟ್ಟಣದಲ್ಲಿ ಸೋಮವಾರರಂದು ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಶ್ರೀ ಮಹಾಗಣಪತಿ ದೇವಸ್ಥಾನದಿಂದ ಶ್ರೀ ರಾಘವೇಂದ್ರ ಮಠದ ವರೆಗೆ ಮಹಿಳೆಯರ ಕುಂಭಮೇಳದೊಂದಿಗೆ ಶ್ರೀಗಳ ಉತ್ಸವ ಮೂರ್ತಿಯನ್ನು ಅದ್ದೂರಿಯಾಗಿ ಪಟ್ಟಣದಲ್ಲಿ ಬರಮಾಡಿಕೊಳ್ಳಲಾಯಿತು.

ತಮಿಳುನಾಡಿನ ತಿರಕೊಯಲೂರಿನಿಂದ ವೇ॥ ಪುರಂದರಾಚಾರ್ಯ ಹಯಗ್ರೀವ ಮತ್ತು ವೇ॥ ಸಮೀರಣಾಚಾರ್ಯ ಪಾಂಗ್ರಿ ಹಾಗೂ ಅರ್ಚಕರ ತಂಡ ಅನೇಕ ಕಡೆ ಸಂಚರಿಸುತ್ತಾ ಎಲ್ಲರ ಮನೆ ಮನೆಗೆ ಸಾಗಿ ಪಾದಪೂಜೆಯನ್ನು ನೆರವೇರಿಸಿ ಸಾಗಿಬಂದ ಅವರು ಕೆಂಬಾವಿಯಿಂದ ಮುದ್ದೇಬಿಹಾಳದ ಶ್ರೀ ರಾಘವೇಂದ್ರ ಮಠಕ್ಕೆ ಆಗಮಿಸಿ ಎಲ್ಲರ ಮನೆಗಳಿಗೆ ತೆರಳಿ ಉತ್ಸವಮೂರ್ತಿಗೆ ಮಹಾಪೂಜೆಗೈಯುವದರೊಂದಿಗೆ ಪಾದಪೂಜೆಯನ್ನು ನೆರವೇರಿಸಿ ಮಠದ ವತಿಯಿಂದ ತೀರ್ಥ ಪ್ರಸಾದ ಸ್ವೀಕರಿಸಿ ಮುಂದೆ ನಾರಾಯಣಪೂರಕ್ಕೆ ತೆರಳಿತು.

ಈ ಸಮಯದಲ್ಲಿ ಎಸ್.ಆರ್. ಕುಲಕರ್ಣಿ, ವ್ಹಿ.ಜಿ. ಪಾಟೀಲ, ಶ್ರೀನಿವಾಸ ಗಜೇಂದ್ರಗಡ, ಸುದೀಂದ್ರ ಗಿಂಡಿ, ವಿಠ್ಠಲ ಗಿಂಡಿ, ಆರ್.ಬಿ. ಪಾಟೀಲ, ರವಿ ಪಾಟೀಲ, ಪುಟ್ಟು ಕುಲಕರ್ಣಿ, ಅನೀಲ ಕುಲಕರ್ಣಿ, ರಾಮಚಂದ್ರ ಗಜೇಂದ್ರಗಡ, ಅಣ್ಣಪ್ಪ ನಾಡಗೌಡ, ಕೆ.ಬಿ. ದೇಶಪಾಂಡೆ, ಅನೀಲ ಕುಲಕರ್ಣಿ, ಸುಭಾಸ ಇಟಗಿ ಮೊದಲಾದವರು ಭಾಗವಹಿಸಿದ್ದರು.



## ವಿಜಯಪುರದಲ್ಲಿ ಆರ್‌ಎಸ್‌ಎಸ್ ಅಭಿಯಾನಕ್ಕೆ ಚಾಲನೆ



**ವಿಜಯಪುರ:** ಯಾರು ಭಾರತವನ್ನು ಪ್ರೀತಿಸುತ್ತಾರೋ ಅವರು ಆರ್‌ಎಸ್‌ಎಸ್ ಪ್ರೀತಿಸುತ್ತಾರೆ ಎಂಬ ಅಭಿಯಾನದ ಅಂಗವಾಗಿ ಈ ಸಂದೇಶವುಳ್ಳ ಪೋಸ್ಟರ್ ಅಂಟಿಸುವ ಕಾರ್ಯಕ್ಕೆ ಬಿಜೆಪಿ ನಗರ ಮಂಡಳ ವತಿಯಿಂದ ಅಧ್ಯಕ್ಷರಾದ ಸಂದೀಪ್ ಪಾಟೀಲ್ (ಝಳಕಿ) ನೇತೃತ್ವದಲ್ಲಿ ವಿಜಯಪುರದ ವಾರ್ಡ್ ನಂ.7 ರಲ್ಲಿ ವಿದ್ಯುಕ್ತ ಚಾಲನೆ ನೀಡಲಾಯಿತು.

ಅಭಿಯಾನದಲ್ಲಿ ಪಾಲ್ಗೊಂಡ ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಮಾತನಾಡಿ, ಆರ್‌ಎಸ್‌ಎಸ್ ನಿಷೇಧ ಮಾಡುವ ಹೇಳಿಕೆ ನೀಡಿರುವ ಸಚಿವ ಪ್ರಿಯಾಂಕ್ ಖರ್ಗೆ ಅವರ ಹೇಳಿಕೆ ಬಾಲಿಷತನದಿಂದ ಕೂಡಿದೆ, ಈ ದೇಶದಲ್ಲಿ ಸ್ವತಂತ್ರವಾಗಿ ಮಾತನಾಡುವ, ಸಂಘ–ಸಂಸ್ಥೆಗಳ ಚಟುವಟಿಕೆಗಳನ್ನು ನಡೆಸುವ, ಸಂಘ–ಸಂಸ್ಥೆ ಸ್ಥಾಪಿಸುವ ಅಧಿಕಾರವನ್ನು ಭಾರತೀಯ ಸಂವಿಧಾನ ಕರುಣಿಸಿದೆ, ಆದರೆ ಜವಾಬ್ದಾರಿಯುತ ಸ್ಥಾನದಲ್ಲಿರುವ ಸಚಿವ ಪ್ರಿಯಾಂಕ್ ಖರ್ಗೆ ಸಂಘ ಸಂಸ್ಥೆ ನಿಷೇಧ ಮಾಡಿ ಎಂದು ಹೇಳುವ ಮೂಲಕ ಭಾರತೀಯ ಸಂವಿಧಾನ ನೀಡಿರುವ ಹಕ್ಕುಗಳನ್ನೇ ಕಸಿದುಕೊಳ್ಳಲು ಹೊರಟಿರುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸುಖದ ಸುಪ್ಪತ್ತಿಗೆಯಲ್ಲಿ ಬೆಳೆದಿರುವ ಪ್ರಿಯಾಂಕ್ ಅವರಿಗೆ ಜನರ ನೋವು ಗೊತ್ತಿಲ್ಲ, ಹೀಗಾಗಿಯೇ ಈ ಬೇಜವಾಬ್ದಾರಿ ಹೇಳಿಕೆ ನೀಡುತ್ತಿದ್ದಾರೆ, ಸಂಘ ಪರಿವಾರದ ಜನಪರ ಕಾರ್ಯವನ್ನು, ದೇಶಭಕ್ತಿಯ ಅದಮ್ಯ ಭಾವನೆಯನ್ನು ಅವರು ಮೊದಲು ತಿಳಿದುಕೊಳ್ಳಲಿ, ಈ ರೀತಿ ಒಂದು ಜನಪರ, ದೇಶಭಕ್ತಿಯ ಸಂಘಟನೆಯ ಮೇಲೆ ಆರೋಪ ಮಾಡಿರುವ ಪ್ರಿಯಾಂಕ್ ಖರ್ಗೆ ಅವರನ್ನು ಕೂಡಲೇ ಸಚಿವ ಸಂಪುಟದಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ಮುಖಂಡರಾದ ಚಂದ್ರಶೇಖರ್ ಕವಟಗಿ, ಶ್ರೀಶೈಲ ಬಿರಾದಾರ, ರಾಹುಲ ಜಾಧವ, ರಾಜಶೇಖರ ಮಗಿಮಠ, ಪಾಪುಸಿಂಗ್ ರಜಪೂತ, ಚಿನ್ನು ಚಿನ್ನುಗುಂಡಿ, ವಿಜಯ ಜೋಶಿ ಸಚಿನ್ ಬೊಂಬಳೆ, ಆನಂದ ಮುಚ್ಚಂಡಿ, ಜಗದೀಶ್ ಮುಚ್ಚಂಡಿ, ಮಂಥನ್ ಗಾಯಕವಾಡ, ನಿಖಿಲ್ ಮ್ಯಾಗೇರಿ, ಹನುಮಂತ ಭಜಂತ್ರಿ, ಅಪ್ಪು ಕುಂಬಾರ್, ಸದಾಶಿವ್ ಪೂಜಾರಿ, ಪ್ರವೀಣ್ ಕಟ್ಟಿಮನಿ, ವಿಕಾಸ ಚವ್ಹಾಣ, ಕಿಶೋರ್ ದೊಕಡೆ, ಅಪ್ಪು ಮಸ್ಕಿ, ಕಿರಣ್ ಮೋರೆ, ದತ್ತಾ ಗೋಲಾಂಡೆ, ರಾಯಪ್ಪ ಹಳ್ಳಿ, ಬಸವರಾಜ್ ರೆಡ್ಡಿ, ಸುಹಾಸ್ ವಲ್ಯಾಪುರ ಉಪಸ್ಥಿತರಿದ್ದರು.

## ಕಿತ್ತೂರು ಚೆನ್ನಮ್ಮ ಜಯಂತ್ಯೋತ್ಸವಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ

**ಕೊಪ್ಪಳ:** ಜಿಲ್ಲಾಡಳಿತ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಈ ವರ್ಷ ಆಚರಿಸಲಾಗುವ ಕಿತ್ತೂರು ರಾಣಿ ಚೆನ್ನಮ್ಮ ಜಯಂತ್ಯುತ್ಸವ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಹೇಳಿದರು.

ಅವರು ಮಂಗಳವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಸಮಾಜದ ಮುಖಂಡರ ಕೋರಿಕೆಯ ಮೇರೆಗೆ ಕಿತ್ತೂರುರಾಣಿ ಚೆನ್ನಮ್ಮ ಜಯಂತಿಯನ್ನು ಅಕ್ಟೋಬರ್ 23ರ ಬದಲಿಗೆ ನವೆಂಬರ್ 3 ರಂದು ಜಿಲ್ಲಾ ಕೇಂದ್ರದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಎಲ್ಲ ಗಣ್ಯರಿಗೆ ಆಹ್ವಾನ ನೀಡಬೇಕು. ಕೆಲಸ ಹಂಚಿಕೆ ಮಾಡಿದಂತೆ ಆಯಾ ಇಲಾಖೆಗಳ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಮೆರವಣಿಗೆ ಸಾಗುವ ಮಾರ್ಗದಲ್ಲಿ ಶುಚಿತ್ವ ಕಾರ್ಯವಾಗಬೇಕು. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಹಾಗೂ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಶಾಲಾ ಕಾಲೇಜುಗಳಲ್ಲಿ ಅಕ್ಟೋಬರ್ 23 ರಂದು ಕಡ್ಡಾಯವಾಗಿ ಕಿತ್ತೂರು ರಾಣಿ ಚೆನ್ನಮ್ಮ ಜಯಂತಿಯನ್ನು ಆಚರಿಸಬೇಕು ಎಂದರು.



ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಅವರು ಮಾತನಾಡಿ, ನ. 3 ರಂದು ಕಿತ್ತೂರು ರಾಣಿ ಚೆನ್ನಮ್ಮ ಅವರ ಭಾವಚಿತ್ರದ ಮೆರವಣಿಗೆಯು ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಿಂದ ಪ್ರಾರಂಭವಾಗಿ ಅಂಬೇಡ್ಕರ್ ಸರ್ಕಲ್, ಶಾರದಾ ಟಾಕೀಸ್, ಗಡಿಯಾರ ಕಂಬ ಮಾರ್ಗವಾಗಿ ಸಾಹಿತ್ಯಭವನದವರೆಗೆ ನಡೆಯಲಿದೆ. ನಂತರ ನಗರದ ಸಾಹಿತ್ಯ ಭವನದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.

ಪ್ರೌಢಶಾಲಾ ಮಕ್ಕಳಿಗೆ ಕಿತ್ತೂರು ರಾಣಿ ಚನ್ನಮ್ಮ ಅವರ ಕುರಿತು ಪ್ರಬಂಧ ಏರ್ಪಡಿಸಿ, ವಿಜೇತರಿಗೆ ಕಾರ್ಯಕ್ರಮದಲ್ಲಿ ಬಹುಮಾನ ವಿತರಿಸಲಾಗುವುದು ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧಿಕಾರಿ ಹಿರೇಮಠ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಪುಷ್ಪ ಲತಾ, ಆರೋಗ್ಯ ಇಲಾಖೆಯ ಶಿವಾನಂದ ಪೂಜಾರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾಮಟ್ಟದ ಅಧಿಕಾರಿಗಳು, ಕಿತ್ತೂರು ರಾಣಿ ಚೆನ್ನಮ್ಮ ಸಮಾಜದ ರಾಜ್ಯ ಅಧ್ಯಕ್ಷರಾದ ಸೋಮನಗೌಡ ಪಾಟೀಲ, ತಾಲೂಕು ಅಧ್ಯಕ್ಷರಾದ ಕರಿಯಪ್ಪ ಮೇಟಿ ಹಾಗೂ ಮುಖಂಡರಾದ ದೇವರಾಜ ಹಾಲಸಮುದ್ರ, ಮಲ್ಲಿಕಾರ್ಜುನ ಸಿಳಿನ್, ಶರಣಪ್ಪ ಶೀಲವಂತರ, ಮಾರ್ಕಂಡಪ್ಪ ಅಜಗಾರ, ಉಮೇಶ್ ಎತ್ತಿನಮನಿ, ರೇಖಾ ಸಂಗಲ್, ನಿರ್ಮಲಾ ಲಿಂಗಣ್ಣನವರ, ಶಿವಲೀಲಾ ಎಲ್. ಪಾಟೀಲ, ಸುಮಂಗಲಾ ಹಂಚಿನಾಳ, ಗೀತಾ ಪಾಟೀಲ ಸೇರಿದಂತೆ ಇನ್ನೀತರರು ಉಪಸ್ಥಿತರಿದ್ದರು.

## ಅ. 18ರಂದು ವಿದ್ಯುತ್ ಗ್ರಾಹಕರ ಸಭೆ

**ಕೊಪ್ಪಳ:** ಕೊಪ್ಪಳ ಉಪ ವಿಭಾಗದ ವ್ಯಾಪ್ತಿಯಲ್ಲಿ ಬರುವ ವಿದ್ಯುಚ್ಛಕ್ತಿ ಬಳಕೆ ಗ್ರಾಹಕರಿಗಾಗಿ ವಿದ್ಯುತ್‌ಚ್ಛಕ್ತಿಗೆ ಸಂಬಂಧಿಸಿದ ಅಹವಾಲುಗಳು ಮತ್ತು ಗ್ರಾಹಕರ ಕುಂದು ಕೊರತೆಗಳನ್ನು ಪರಿಹರಿಸಲು ಗ್ರಾಹಕರ ಸಭೆಯನ್ನು ಅಕ್ಟೋಬರ್ 18 ಶನಿವಾರರಂದು ಬೆಳಿಗ್ಗೆ 11 ಗಂಟೆಗೆ ಕಾರ್ಯ ಮತ್ತು ಪಾಲನಾ ಉಪ ವಿಭಾಗ ಕಛೇರಿಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದು, ಈ ಸಭೆಗೆ ಗ್ರಾಹಕರು ಹಾಜರಾಗಲು ಎಂದು ಕೊಪ್ಪಳ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ರಫ್ತು ಕುರಿತು ಅರಿವು ಕಾರ್ಯಕ್ರಮ

**ಕೊಪ್ಪಳ:** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕೊಪ್ಪಳ ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿ.ಟಿ.ಪಿ.ಸಿ) ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವ ಉದ್ದೇಶದಿಂದ ರ‍್ಯಾಂಪ್ ಯೋಜನೆಯಡಿಯಲ್ಲಿ ಝಡ್.ಇಡಿ–ಲೀನ್ ಯೋಜನೆ ಹಾಗೂ ರಫ್ತು ಕುರಿತು ಅರಿವು ಕಾರ್ಯಕ್ರಮವನ್ನು ಅಕ್ಟೋಬರ್ 16ರ ಗುರುವಾರ ಬೆಳಿಗ್ಗೆ 10.30 ಗಂಟೆಗೆ ಕೊಪ್ಪಳ ಬಸವೇಶ್ವರ ವೃತ್ತದ ಹತ್ತಿರದ ಫಾರ್ಚೂನ್ ಹೋಟೇಲ್‌ನಲ್ಲಿ ಅಯೋಜಿಸಲಾಗಿದೆ.ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ್ ಬಿ. ಇಟ್ನಾಳ ಅವರು ಕಾರ್ಯಕ್ರಮ ಉದ್ಘಾಟಿಸುವರು. ಗೌರವಾನ್ವಿತ ಅತಿಥಿಗಳಾಗಿ ಕೊಪ್ಪಳ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಮನ್ಸೂರ್ ಹಾಗೂ ವಿಟಿಪಿಸಿ ಧಾರವಾಡ ಶಾಖಾ ಕಚೇರಿಯ ಉಪನಿರ್ದೇಶಕ ಟಿ.ಎಸ್. ಮಲ್ಲಿಕಾರ್ಜುನ ಅವರು ಭಾಗವಹಿಸಲಿದ್ದಾರೆ. ಕಾಸಿಯಾ ಅಧ್ಯಕ್ಷರಾದ ಗಣೇಶ್ ರಾವ್ ಬಿ.ಆರ್ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕಾರ್ಯಕ್ರಮದಲ್ಲಿ ಕಾಸಿಯಾ ಉಪಾಧ್ಯಕ್ಷರು, ಸರ್ವಸದಸ್ಯರು ಹಾಗೂ ಮತ್ತಿತರರು ಉಪಸ್ಥಿತರಿರುವರು.



## ಹಿರಿಯ ಸಾಹಿತಿ ಅಶೋಕ ಮಣಿಗೆ ಸನ್ಮಾನ

**ಮುದ್ದೇಬಿಹಾಳ:** ಮುದ್ದೇಬಿಹಾಳ ತಾಲೂಕಿನ 5 ನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷತೆಯನ್ನು ವಹಿಸಿ ಸಮ್ಮೇಳನವನ್ನು ಯಶಸ್ವಿಗೊಳಿಸಿದ್ದಕ್ಕಾಗಿ ತಾಲೂಕಿನ ಬಿದರಕುಂದಿ ಗ್ರಾಮಸ್ಥರು ಹಿರಿಯ ಸಾಹಿತಿ ಅಶೋಕ ಮಣಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಬಿದರಕುಂದಿ ಗ್ರಾಮದಲ್ಲಿ ಇತ್ತೀಚೆಗೆ ದಿ. ಎನ್ ಎಲ್ ನಾಯ್ಕೋಡಿ ಪ್ರತಿಷ್ಠಾನದ ವತಿಯಿಂದ ಏರ್ಪಡಿಸಲಾದ ಗಾಂಧಿ ಜಯಂತಿ, ಶಾಸ್ತ್ರೀಜೀ ಜಯಂತಿ ಹಾಗೂ ಅಪ್ಪನ ಸ್ಮರಣೆಯಲ್ಲಿ ಅವ್ವನ ನೆನಪು ಎಂಬ ವಿನೂತನ ಕಾರ್ಯಕ್ರಮದಲ್ಲಿ ಸನ್ಮಾನಿಸಿನ ಗೌರವಿಸಲಾಯಿತು.

ಇದೇ ಸಮಯದಲ್ಲಿ ಖ್ಯಾತ ಖ್ಯಾತ ತತ್ವಪದ ಹಾಡುಗಾರ್ತಿ ಇಮಾಂಬಿ ದೊಡಮನಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಮಯದಲ್ಲಿ ಹಿರಿಯ ಸಾಹಿತಿಗಳಾದ ಪ್ರೋ. ಬಿ.ಎಂ ಹಿರೇಮಠ, ಡಾ. ಶ್ಯಾಮಸುಂದರ ಬಿದರಕುಂದಿ, ಎಸ್.ಡಿ ಗಾಂಜಿ, ಸಿದ್ದಲಿಂಗ ಬೀಳಗಿ, ಸೋಹೆಲ್ ಅಹ್ಮದ ವರೂರ, ಬಿ.ಜಿ. ಕೊಂತಿಕಲ್, ಸಾಹೇಬಗೌಡ ಬಿರಾದಾರ ಹಾಗೂ ಗಣ್ಯರಾದ ಚೆನ್ನಬಸಪ್ಪಗೌಡ ಪಾಟೀಲ, ಶಂಕ್ರಪ್ಪ ಸಜ್ಜನ, ಕೆ.ವಾಯ್. ಬಿರಾದಾರ, ಉಮಾ ಸಾಲಂಕಿ, ನಾಯ್ಕೋಡಿ ಪ್ರತಿಷ್ಠಾನದ ಅಧ್ಯಕ್ಷರಾದ ಅಬ್ದುಲ್ ರಹಿಮಾನ್ ಬಿದರಕುಂದಿ, ಇಬ್ರಾಹಿಂ ಬಿದರಕುಂದಿ, ಎಸ್.ಬಿ. ಗುಡಗುಂಟಿ ಹಾಗೂ ವಚನ ಸಾಹಿತ್ಯ, ಸಾಂಸ್ಕೃತಿಕ ಪರಿಷತ್ತು, ಮಹಾಮನೆ ಬಳಗ, ಪ್ರಗತಿಶೀಲ ಗೆಳೆಯರ ಬಳಗದ ಪದಾಧಿಕಾರಿಗಳು ಸಾಹಿತಿಗಳು, ಕಲಾವಿದರು, ಶಿಕ್ಷಕರು ಉಪಸ್ತಿತರಿದ್ದರು.

## ಭೈರಪ್ಪನವರಿಗೆ ನುಡಿ ನಮನ ಕಾರ್ಯಕ್ರಮ

**ಬೆಳಗಾವಿ:** ಖ್ಯಾತ ಕಾದಂಬರಿಕಾರ ಭೈರಪ್ಪನವರು ಕನ್ನಡಕ್ಕಿಂತ ಮರಾಠಿ ಓದುಗ ಬಳಗ ಹೊಂದಿದ್ದು ಅವರ ಪ್ರೀತಿಗೆ ಪಾತ್ರರಾದವರು. ಭೈರಪ್ಪನವರ ಕೃತಿಗಳು ಕನ್ನಡಕ್ಕಿಂತ ಹೆಚ್ಚು ಮರಾಠಿ ಭಾಷೆಯಲ್ಲಿ ಮಾರಾಟವಾಗತ್ತವೆ. ಅದಕ್ಕೆ ಭೈರಪ್ಪನವರನ್ನು ಕನ್ನಡದಲ್ಲಿ ಬರೆಯುವ ಮರಾಠಿ ಲೇಖಕರೆಂದು ಕರೆಯುತ್ತಾರೆ. ಎಂದು ಹಿರಿಯ ಪತ್ರಕರ್ತ, ಲೇಖಕ ಡಾ. ಸರಜು ಕಾಟ್ಕರ್ ಇಂದಿಲ್ಲಿ ಹೇಳಿದರು.

ನಗರದ ಅಕಾಡಮಿ ಆಫ್ ಕಂಪರೇಟಿವ್ ಫಿಲಾಸಫಿ ಆಂಡ್ ರಿಲಿಜನ್ ಸಂಘಟನೆಯವರು ಹಿಂದವಾಡಿಯ ಗುರುದೇವ ರಾನಡೆದಲ್ಲಿ ಇದೇ ದಿ.13 ಸೋಮವಾರದಂದು ಖ್ಯಾತ ಕಾದಂಬರಿಕಾರ ಡಾ. ಎಸ್. ಎಲ್. ಭೈರಪ್ಪನವರ ನುಡಿ ನಮನ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು. ಅಧ್ಯಕ್ಷತೆಯನ್ನು ವಹಿಸಿದ್ದ ಡಾ. ಕಾಟ್ಕರ್ ಮೇಲಿನಂತೆ ಅಭಿಪ್ರಾಯ ಪಟ್ಟರು.

ಮುಂದೆ ಮಾತನಾಡುತ್ತ ಅವರು ರಾಷ್ಟ್ರದ 23 ಭಾಷೆಗಳಲ್ಲಿ ಭೈರಪ್ಪನವರ ಎಲ್ಲ ಕೃತಿಗಳು ಭಾಷಾಂತರಗೊಂಡಿವೆ. ಇವರ ಪ್ರಸಿದ್ಧ ಕಾದಂಬರಿ ಪರ್ವ ರಷಿಯನ್, ಇಂಗ್ಲೀಷ ಅಲ್ಲದೇ ಚೀನಿ ಭಾಷೆಗೆ ಅನುವಾದಗೊಂಡಿವೆ. ಇವರೊಬ್ಬ ವಿಶ್ವ ಮಟ್ಟದ ಕಾದಂಬರಿಕಾರರು ಎಂದು ಹೇಳಿದರು. ಡಾ. ರಾಮಕೃಷ್ಣ ಮರಾಠೆಯವರು ಮಾತನಾಡಿದರು. ಗುಂಡೇನಟ್ಟಿ ಮಧುಕರ ಮಾತನಾಡಿ ಭೈರಪ್ಪನವರು ಬೆಳಗಾವಿಗೆ ಬಂದಿದ್ದಾಗ ನಾನು ಅವರೊಂದಿಗೆ ಎರಡು ದಿನಗಳ ಕಾಲ ಇದ್ದೆ. ಅವರ ಪ್ರಶ್ನೆಗಳು ನನಗೆ ಹಲವಾರು ಹೊಸ, ಹೊಸ ವಿಷಗಳನ್ನು ತಿಳಿಸಿಕೊಟ್ಟಿದ್ದವು. ಅವರು ವಿಕ್ಷುಬ್ಧ ಸ್ವಭಾವದವರೆಂದು ಹೇಳುತ್ತಾರೆ ಆದರೆ ಆ ಅನುಭವ ನನಗೇನೂ ಆಗಲಿಲ್ಲ ಎಂದು ಹೇಳಿ ಅವರೊಂದಿಗೆ ಕಳೆದ ಕೆಲ ಪ್ರಸಂಗಗಳನ್ನು ಹಂಚಿಕೊಂಡರು.

ರಾ.ಚೆ. ವಿಶ್ವವಿದ್ಯಾಲಯ ಉಪಕುಲಪತಿಗಳಾದ ಪ್ರೊ. ಸಿ. ಎಂ. ತ್ಯಾಗರಾಜ, ಆರ್.ಎಸ್. ಎಸ್. ಪ್ರಾಂತ ಕಾರ್ಯನಿರ್ವಾಹಕ, ಕರ್ನಾಟಕ ಉತ್ತರ ಪ್ರಾಂತದ ರಾಘವೇಂದ್ರ ಕಾಗವಾಡ ಮಾತನಾಡಿದರು. ದಿ. ಎಸ್.ಎಲ್. ಭೈರಪ್ಪನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ರವಿ ಕೊಟಾರಗಸ್ತಿ, ಆರ್. ಜಿ. ಮುತಾಲಿಕ, ಸುಬ್ರಮಣ್ಯ ಭಟ್ಟ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಮಾರುತಿ ಝಿರಲಿ ವಂದಿಸಿದರು. ಆಶಾ ಯಮಕನಮರಡಿ ನಿರೂಪಿಸಿದರು.




### ಸೂಡಿ ಗ್ರಾಪಂ ಸಿಬ್ಬಂದಿಗಳ ಸಭೆಯಲ್ಲಿ ಇಒ ಚಂದ್ರಶೇಖರ ಕಂದಕೂರ ಎಚ್ಚರಿಕೆ

## ಗ್ರಾಮಸ್ಥರ ಸಮಸ್ಯೆಗೆ ಧ್ವನಿಯಾಗಿ ಕೆಲಸ ಮಾಡಿ



**ಗಜೇಂದ್ರಗಡ:** ಸೂಡಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಮೂಲಭೂತ ಸೌಲಭ್ಯಗಳ ಕುರಿತು ಸಾರ್ವಜನಿಕರು ನೀಡುವ ಯಾವುದೇ ದೂರಿಗೆ ಗ್ರಾಪಂ ಸಿಬ್ಬಂದಿ ವರ್ಗ ತಕ್ಷಣ ಸ್ಪಂದಿಸಬೇಕು ಎಂದು ಗಜೇಂದ್ರಗಡ ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಚಂದ್ರಶೇಖರ ಬಿ, ಕಂದಕೂರು ಗ್ರಾಪಂ ಸಿಬ್ಬಂದಿಗಳಿಗೆ ಸೂಚಿಸಿದರು.

ತಾಲೂಕಿನ ಸೂಡಿ ಗ್ರಾಪಂ ಕಚೇರಿಯಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳ ಜೊತೆ ನಡೆಸಿದ ಸಭೆಯಲ್ಲಿ ಸಾರ್ವಜನಿಕ ಸ್ನೇಹಿಯಾಗಿ ಸಿಬ್ಬಂದಿಗಳು ಕೆಲಸ ಮಾಡಬೇಕು ಎಂದು ತಾಕೀತು ಮಾಡಿದರು.

ಸೂಡಿ ಮತ್ತು ದ್ಯಾಮಹುಣಸಿ ಗ್ರಾಮಗಳಲ್ಲಿ ಗ್ರಾಮಸ್ಥರಿಗೆ ಸರಿಯಾಗಿ ಕುಡಿಯುವ ನೀರು ಪೂರೈಕೆಯಾಗಬೇಕು. ಮಲಪ್ರಭಾ ನೀರು ಬಿಡುಗಡೆ ಸಂದರ್ಭದಲ್ಲಿ ಗ್ರಾಮಸ್ಥರಿಗೆ ಸರಿಯಾದ ಮಾಹಿತಿ ನೀಡಬೇಕು. ಕುಡಿಯುವ ನೀರು ಎಲ್ಲೂ ಪೋಲಾಗದಂತೆ ನಿಗಾವಹಿಸಿ ಜನರಿಗೆ ಶುದ್ಧ ಕುಡಿಯುವ ನೀರನ್ನು ಗ್ರಾಪಂ ಸಿಬ್ಬಂದಿ ಒದಗಿಸಬೇಕು. ಸರಿಯಾಗಿ ಕುಡಿಯುವ ನೀರು ಬಿಡದೇ ಸಾರ್ವಜನಿಕರಿಗೆ ಸ್ಪಂದಿಸದೇ ಇದ್ದರೆ ವಾಟರ್ ಮೆನ್ ಸಂಗಯ್ಯ ಅವರನ್ನು ಕೆಲಸದಿಂದ ತಗೆದುಹಾಕಿ ಅಂತ ಪಿಡಿಒ ಅವರಿಗೆ ಸೂಚಿಸಿದರು.

ಸಭೆಯಲ್ಲಿದ್ದ ಉಪವಿಭಾಗ ರೋಣ ಮತ್ತು ಗಜೇಂದ್ರಗಡದ ಶಾಖಾಧಿಕಾರಿಗಳಾದ ಮಹದೇವಪ್ಪ ಅವರಿಗೆ ಸೂಡಿ ಗ್ರಾಮಕ್ಕೆ ಸರಬರಾಜಾಗುವ ಕುಡಿಯುವ ನೀರನ್ನು ವಿಳಂಬ ಮಾಡದೇ ಬಿಡಬೇಕು ಅಂತ ಸೂಚಿಸಿದರು.ಗ್ರಾಪಂ ವ್ಯಾಪ್ತಿಯಲ್ಲಿ ರಾತ್ರಿ ವೇಳೆ ಬೀದಿ ದೀಪ ಬೆಳಗುವಂತಿರಬೇಕು. ಬೀದಿ ದೀಪದ ಕಂಬಗಳಲ್ಲಿ ಸಮರ್ಪಕ ವಿದ್ಯುತ್ ಸಂಪರ್ಕ, ವಿದ್ಯುತ್ ಬಲ್ಬಗಳ ಅಳವಡಿಕೆಗೆ ಕ್ರಮವಹಿಸಿಬೇಕೆಂದರು.

ಸಭೆಯಲ್ಲಿ ಸೂಡಿ ಗ್ರಾಪಂ ಪಿಡಿಒ ಬಸವರಾಜ ವಡ್ಡರ, ತೆರಿಗೆ ಸಂಗ್ರಹಕಾರ ದುರ್ಗಪ್ಪ, ಪಂಚಾಯತ ಕಾರ್ಯದರ್ಶಿ ಮುಕ್ತಾಬಾಯಿ ಜಾದವ್, ವಾಟರ್ ಮ್ಯಾನ್ ಸಂಗಯ್ಯ ಮತ್ತು ಗ್ರಾಪಂ ಸಿಬ್ಬಂದಿ ವರ್ಗ ಹಾಜರಿದ್ದರು.

### ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ

## ಅರ್ಜಿ ಸಲ್ಲಿಸಲು ಅ.31 ರವೆಗೆ ಅವಧಿ ವಿಸ್ತರಣೆ

**ಧಾರವಾಡ:** ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದಿಂದ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆಯನ್ನು ಸೆಪ್ಟೆಂಬರ್ 15, 2025 ರಿಂದ ಪ್ರಾರಂಭವಾಗಿ ನವೆಂಬರ 21, 2025 ರವರೆಗೂ ನಡೆಯಲಿದ್ದು, ಜಿಲ್ಲೆಯಲ್ಲಿರುವ ಮಾಜಿ ದೇವದಾಸಿ ಮಹಿಳೆಯರು ಮರು ಸಮೀಕ್ಷೆಯಲ್ಲಿ ಭಾಗವಹಿಸಿ ಮಹಿಳೆಯರು ಮತ್ತು ಕುಟುಂಬಗಳಿಂದ ಸಮೀಕ್ಷೆ ನಡೆಸಲು ನಿಗಧಿತ ನಮೂನೆಯಲ್ಲಿ ಅರ್ಜಿಯನ್ನು ಅಕ್ಟೋಬರ್ 09, 2025 ರವರೆಗೆ ಸಲ್ಲಿಸಲು ನಿಗಧಿಪಡಿಸಲಾಗಿತ್ತು. ಯಾರು ಅರ್ಜಿ ಸಲ್ಲಿಸದೆ ಇರುವ ಕಾರಣ ಅಕ್ಟೋಬರ್ 31, 2025 ರವರೆಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಿಸಲಾಗಿದೆ.

ಧಾರವಾಡ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ನೆಡೆಸಲಾಗುತ್ತಿರುವ ಮಾಜಿ ದೇವದಾಸಿ ಮಹಿಳೆಯರ ಮರುಸಮೀಕ್ಷೆಯಲ್ಲಿ ಭಾಗವಹಿಸಲು ಬಯಸುವ ಮಹಿಳೆಯರು ಮತ್ತು ಕುಟುಂಬಗಳಿಂದ ನಿಗಧಿತ ನಮೂನೆಗಳಲ್ಲಿ ಅರ್ಜಿ ಆಹ್ವಾನಿಸಲಾಗಿದೆ.

ಧಾರವಾಡ ಜಿಲ್ಲೆಯಲ್ಲಿ ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ–2025ಯನ್ನು ಕೈಗೊಂಡಿದ್ದು, ಈಗಾಗಲೇ ಸರ್ಕಾರದಿಂದ 1993–94 ಮತ್ತು 2007–08 ರಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಇದ್ದು, ಮರಣ ಹೊಂದಿರುವ ಮಹಿಳೆಯ ಕುಟುಂಬದ ಅಧೀಕೃತ ಸದಸ್ಯರು ನಮೂನೆ–1 ರಲ್ಲಿ ಅರ್ಜಿ ಸಲ್ಲಿಸಬೇಕು.

ಈ ಹಿಂದೆ 1933–94 ಮತ್ತು 2007–08 ರಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಹೊರಗುಳಿದ ಹಾಲಿ ಜೀವಂತವಿರುವ ಹೊಸದಾಗಿ ಪಟ್ಟಿಗೆ ಸೇರ್ಪಡೆ ಬಯಸುವ ಮಾಜಿ ದೇವದಾಸಿ ಮಹಿಳೆಯರು ನಮೂನೆ–2 ರಲ್ಲಿ ಸಲ್ಲಿಸಬೇಕು.

ಈ ಹಿಂದೆ 1933–94 ಮತ್ತು 2007–08 ರಲ್ಲಿ ನಡೆಸಲಾದ ಸಮೀಕ್ಷೆಯಲ್ಲಿ ಹೊರಗುಳಿದ ಮತ್ತು ಪ್ರಸ್ತುತ ಮರಣ ಹೊಂದಿರುವ ಮಹಿಳೆಯರ ಕುಟುಂಬದ ಅಧೀಕೃತ ಸದಸ್ಯರು ನಮೂನೆ–3 ರಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಲು ದಾಖಲೆಗಳಾದ ಮಹಿಳೆಯ ಆಧಾರ ಕಾರ್ಡ್, ಮಹಿಳೆಯ ಮರಣ ಪ್ರಮಾಣ ಪತ್ರ, ವಂಶವೃಕ್ಷ, ಕುಟುಂಬದ ಅಧೀಕೃತ ಸದಸ್ಯರ ಆಧಾರ ಕಾರ್ಡ್ ಮತ್ತು ಹೊಸ ಸೇರ್ಪಡೆ ಬಯಸುವ ಮಹಿಳೆಯರ ವಯಸ್ಸಿನ ದೃಢೀಕರಣ ಪತ್ರಗಳೊಂದಿಗೆ ಅರ್ಜಿಯನ್ನು ಸಂಬಂಧಪಟ್ಟ ಆಯಾ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಅಥವಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಅಕ್ಟೋಬರ್ 31, 2025 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:0836–2447850 ಗೆ ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅ. 23ರಂದು ರಾಣಿ ಚನ್ನಮ್ಮ ಜಯಂತಿ




**ಧಾರವಾಡ:** ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಅಕ್ಟೋಬರ್ 23 ರಂದು ಬೆಳಿಗ್ಗೆ 11 ಗಂಟೆಗೆ ಕಿತ್ತೂರು ರಾಣಿ ಚನ್ನಮ್ಮ ಜಯಂತಿಯನ್ನು ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು.

ಅವರು ಬುಧವಾರ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಜಯಂತಿ ಕಾರ್ಯಕ್ರಮವನ್ನು ನಾವೆಲ್ಲರೂ ವಿಜೃಂಭಣೆಯಿಂದ ಪ್ರತಿವರ್ಷದಂತೆ ಆಚರಿಸೋಣ ಎಂದು ತಿಳಿಸಿದರು.

ಕಿತ್ತೂರು ಉತ್ಸವದ ಜ್ಯೋತಿ ರಥಯಾತ್ರೆಯು ಧಾರವಾಡ ಜಿಲ್ಲೆಗೆ ಅಕ್ಟೋಬರ್ 19 ರಂದು ಬೆಳಿಗ್ಗೆ 11:30 ಗಂಟೆಗೆ ಆಗಮಿಸಲಿದ್ದು, ಜಿಲ್ಲಾಧಿಕಾರಿಗಳ ಕಚೇರಿಯ ಮುಂಭಾಗದಲ್ಲಿ ಕಿತ್ತೂರು ಉತ್ಸವ ಜ್ಯೋತಿಯನ್ನು ಜಿಲ್ಲಾಡಳಿತದಿಂದ ಸ್ವಾಗತಿಸಲಾಗುವುದು ಎಂದು ಹೇಳಿದರು. ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಭೆಯಲ್ಲಿ ಸಮಾಜದ ಹಿರಿಯ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಆರ್‌ಎಸ್‌ಎಸ್ ಬಗ್ಗೆ ಮಾತನಾಡುವದನ್ನು ಬಿಟ್ಟು ಸಂಸ್ಕಾರ ಕಲಿಯಲಿ

**ಬೆಳಗಾವಿ:** ಬಿಟ್ಟಿ ಪ್ರಚಾರದ ಗೀಳಿನಿಂದ, ನವೆಂಬರ್ ಕ್ರಾಂತಿಯವರೆಗೆ ಮಂತ್ರಿ ಪದವಿ ಉಳಿವಿಗಾಗಿ ಹೈಕಮಾಂಡ ಮೆಚ್ಚಿಸಲು ಅಪ್ರಸ್ತುವಾಗಿ ಮಾತನಾಡುವ ಮರಿ ಪ್ರಿಯಾಂಕಾ ಖರ್ಗೆ ರಾಷ್ಟಸೇವಿಗೆ ಸಮರ್ಪಣೆಯಾಗಿರುವ ಅರ್ ಎಸ್ ಎಸ್ ಬಗ್ಗೆ ನಾಲಿಗೆಯನ್ನು ಹರಿಬಿಡುವದನ್ನ ಬಿಟ್ಟು ಸಂಸ್ಕಾರ ಕಲಿಯಲಿ ಎಂದು ಮಾಜಿ ಶಾಸಕ ಸಂಜಯ ಪಾಟೀಲ ಟೀಕಿಸಿದ್ದಾರೆ.



ಮಂಗಳವಾರ ಮಾಧ್ಯಮ ಪ್ರಕಟಣೆ ಮೂಲಕ ತಿಳಿಸಿದ ಅವರು, ಪ್ರಿಯಾಂಕಾ ಖರ್ಗೆಯವರ ಬುದ್ಧಿ ಒಂದು ರೀತಿ ಓಡಿದರೆ ಮನಸ್ಥಿತಿ ಇನ್ನೊಂದು ರೀತಿಯಲ್ಲಿದ್ದು ಎರಡಕ್ಕು ಸಂಬಂಧವಿಲ್ಲದ ಅಸಂಬದ್ಧ ಮಾತು ಬಾಯಿಮೂಲಕ ಆಡುವದೆ ಇವರ ಬಾಯಿಚಪಲಕ್ಕಾಗಿ ಏನೆನೊಮಾತನಾಡುತ್ತಾರೆ. ಆರೆಸ್ಸೆಸ್ ಎಂದರೆ ರಾಷ್ಟ್ರ ನಿರ್ಮಾಣ ಮಾಡುವ ಸಂಘಟನೆ. ಇಂಥ ದೇಶಭಕ್ತ ಸಂಘಟನೆಯ ಚಟುವಟಿಕೆಗಳ ಮೇಲೆ ನಿಷೇಧ ಹೇರುವ ಪತ್ರ ಬರೆದಿರುವದನ್ನ ನೋಡಿದರೆ ಸಮಾಜಕ್ಕೆ ಒಳಿತಾಗಬಾರದು, ವ್ಯಕ್ತಿ ನಿರ್ಮಾಣ ಆಗಬಾರದು ಎಂಬ ದುರುದ್ದೇಶದ ಪತ್ರವನ್ನು ಮುಖ್ಯಮಂತ್ರಿಗೆ ಬರೆದಿದ್ದಾರೆ ಎಂದು ಟೀಕಿಸಿದರು. ಈ ವ್ಯಕ್ತಿ ಯಾವಾಗಲೂ ಅಪ್ರಸ್ತುತ ಮಾತುಗಳ ಮೂಲಕ ತಮ್ಮ ದಿನದ ಕೆಲಸಗಳನ್ನು ಪ್ರಾರಂಭ ಮಾಡುತ್ತಾರೆ. ಜವಾಬ್ದಾರಿಯುತ ಸ್ಥಾನದಲ್ಲಿರುವ ಅವರು, ಗ್ರಾಮೀಣಾಭಿವೃದ್ಧಿಯಲ್ಲಿ ಕ್ರಾಂತಿಕಾರಿಯಾದ ಕೆಲಸ ಮಾಡಲು ಅವಕಾಶವಿದೆ. ಐಟಿ, ಬಿಟಿ, ಎಲೆಕ್ಟ್ರಾನಿಕ್ಸ್ ಇಲಾಖೆಯಲ್ಲೂ ಕ್ರಾಂತಿಕಾರಿ ಕೆಲಸ ಮಾಡಬಹುದು, ಇವತ್ತು ನಮ್ಮ ಕರ್ನಾಟಕ, ನಮ್ಮ ಬೆಂಗಳೂರು ಇಡೀ ವಿಶ್ವದ ಗಮನ ಸೆಳೆದ ನಗರ. ಅಂಥ ಇಲಾಖೆಗಳನ್ನು ನಿರ್ವಹಿಸುವ ಈ ಮಹಾನುಭಾವರು ಸಚಿವರಾಗಿ ಈಗ ಎರಡೂವರೆ ವರ್ಷ ಆಗಿದೆ. ಇದರ ಮುಂಚೆಯೂ 2 ಬಾರಿ ಸಚಿವರಾಗಿದ್ದರು.

ಮಲ್ಲಿಕಾರ್ಜುನ ಖರ್ಗೆಯವರ ಮಗ ಎಂಬುದೇ ಇವರ ಅರ್ಹತೆ ಬಿಟ್ಟರೆ ಕಾರ್ಯಕ್ಷಮತೆ ಇಲ್ಲದ ಅಸಮರ್ಥ ಸಚಿವರಾಗಿದ್ದಾರೆ ಎಂದು ವ್ಯಂಗ್ಯವಾಗಿ ನುಡಿದರು. ಅನುಭವ, ಜ್ಞಾನ, ಅರ್ಹತೆ ಇದೆಯೋ ಇಲ್ಲವೋ ಅವರಿಗೆ ಕೂತಲ್ಲೇ ಅಧಿಕಾರ ಲಭಿಸಿದೆ

ವಂಶಪಾರಂಪರ್ಯ ಆಧಾರದಿಂದ ನೀವು ಬಂದಿದ್ದೀರಿ. ನಿಮಗೆ ಯಾವ ನೈತಿಕತೆ ಇದೆ ಸಂಘದ ಬಗ್ಗೆ ಮಾತನಾಡಲು, ಜನರು ಅಧಿಕಾರ ಕೊಟ್ಟಿದ್ದಾರೆ ರಾಜ್ಯದ ಜನತೆಗೆ ವಿಶಿಷ್ಟವಾದ ಸೇವೆ ಮಾಡುವ ಮೂಲಕ ನಿಮ್ಮ ಸಾಧನೆ ಮಾತನಾಡಲಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿದೆ, ರಸ್ತೆ ಗುಂಡಿಗಳನ್ನು ಮುಚ್ಚುತ್ತಿಲ್ಲ, ನೆರೆಹಾವಳಿಯಿಂದ ರೈತರ ಬೆಳೆ ಹಾಳಾಗಿದ್ದು ಪರಿಹಾರ ಇಲ್ಲದೆ ರೈತರು ಆತ್ಮಹತ್ಯೆ ಹಾದಿ ಹಿಡದಿದ್ದಾರ ಇದನ್ನು ಮೊದಲು ಸರಿಮಾಡಲು ಪತ್ರ ಬರೆಯಿರಿ ಖರ್ಗೆಯವರೆ ಎಂದು ಸವಾಲೆಸೆದರು.

ಹಿರಿಯ ಕಾಂಗ್ರೆಸ್ ನಾಯಕ ಬಿ.ಕೆ.ಹರಿಪ್ರಸಾದ ಅಧಿಕಾರದ ದಾಹಕ್ಕೆ ತಮ್ಮ ಪಕ್ಷದ ಹಿರಿಯರನ್ನ ಮೆಚ್ಚಿಸುವ ಉದ್ದೇಶಕ್ಕಾಗಿ ಸಂಘವನ್ನು ಉಗ್ರ ಸಂಘಟನೆಗೆ ಹೊಲಿಸುವದು ಅವರಿಗೆ ಗೌರವ ತಂದುಕೊಡದು ಅವರ ಅವನತಿಗೆ ದಾರಿಯಾಗಿದೆ. ಮುಳಗಿದ ಕಾಂಗ್ರೆಸ್ ಪಕ್ಷದ ಹಡಗಿನ ಕುರುಹುಗಳನ್ನು ಸಿಗದ ರೀತಿಯಲ್ಲಿ ವರ್ತಿಸುತ್ತಿದ್ದಾರೆ ಎಂದು ಟಿಕಿಸಿದರು.

## ಸರಕಾರಿ ಶಾಲೆಯ ನೂತನ ಕೊಠಡಿ ನಿರ್ಮಾಣಕ್ಕೆ ಚಾಲನೆ

**ತೇರದಾಳ:** ಯಾವುದೇ ಸರಕಾರ ಇರಲಿ, ಜನಪ್ರತಿನಿಧಿಗಳಿರಲಿ ಶೈಕ್ಷಣಿಕ ಪ್ರಗತಿಗೆ ಜ್ಯಾತ್ಯಾತೀತ ಹಾಗೂ ಪಕ್ಷಾತೀತವಾಗಿ ನಡೆದುಕೊಳ್ಳಬೇಕು. ಅವಾಗಲೇ ಹಿಂದುಳಿದ ಸಮುದಾಯದಿಂದ ಹಿಡಿದು ಪ್ರತಿಯೊಬ್ಬರು ಆರ್ಥಿಕವಾಗಿ ಮುಂದೆ ಬರಲು ಸಾಧ್ಯ ಎಂದು ಶಾಸಕ ಸಿದ್ದು ಸವದಿ ಹೇಳಿದರು.

ಇಲ್ಲಿನ ದಾಸರಟ್ಟಿಯಲ್ಲಿನ ಸರಕಾರಿ ಎಲ್‌ಪಿಎಸ್ ಶಾಲೆಯಲ್ಲಿ 14.5 ಲಕ್ಷ ವೆಚ್ಚದಲ್ಲಿ ನೂತನ ಕೊಠಡಿ ನಿರ್ಮಾಣಕ್ಕೆ ಚಾಲನೆ ನೀಡಿ ಮಾತನಾಡಿದರು.

ಕ್ಷೇತ್ರದಲ್ಲಿ ಶಿಥಲಗೊಂಡಿರುವ ಶಾಲೆಗಳ ಕುರಿತು ಸಿಆರ್‌ಪಿಗಳು ಸರಿಯಾಗಿ ಮತ್ತು ಅವಶ್ಯ ಇರುವ ಕಡೆಗೆ ಬಿಇಒ ಅವರಿಗೆ ಮಾಹಿತಿ ನೀಡಬೇಕು. ಕೊಳಚೆ ಪ್ರದೇಶ ಹಾಗೂ ಹಿಂದುಳಿದ ಸಮುದಾಗಳ ಮಕ್ಕಳು ಓದುವ ಶಾಲೆಗಳಿಗೆ ಮೊದಲು ಆಧ್ಯತೆ ನೀಡಬೇಕು. ಬರುವ ದಿನಗಳಲ್ಲಿ ಶಾಲೆಯ ಅಭಿವೃದ್ಧಿಗೆ ಕೈಜೋಡಿಸುವುದಾಗಿ ಭರವಸೆ ನೀಡಿದರು.

ವಿಧಾನ ಪರಿಷತ್ ಸದಸ್ಯೆ ಉಮಾಶ್ರೀ ಮಾತನಾಡಿ, ದಾಸರಟ್ಟಿ ಶಾಲೆಯ ಸ್ಥಿತಿಯನ್ನು ನೋಡಿ ಬಹಳಷ್ಟು ಆತಂಕವಾಗಿತ್ತು. ಉಭಯ ಶಾಸಕರು ಸರಕಾರದ ಮೇಲೆ ಒತ್ತಡ ಹೇರಿ ಅನುದಾನ ಬಿಡುಗಡೆ ಮಾಡಿಸಿದ್ದೇವೆ. ತೇರದಾಳ ಜನತೆಯ ಬಹುದಿನಗಳ ಬೇಡಿಕೆಯಾಗಿದ್ದ ಸರಕಾರಿ ಪ್ರೌಢಶಾಲೆ ಮಂಜುರಾಗಿದ್ದು, ಶೀಘ್ರದಲ್ಲಿ ಪ್ರಾರಂಭಗೊಳಿಸುವ ಕೆಲಸ ಇಲಾಖೆ ಮಾಡಲಿದೆ ಎಂದು ಹೇಳಿದ ಅವರು, ದೇವರಾಜ ನಗರದ ಎಚ್‌ಪಿಎಸ್ ಹಾಗೂ ದಾಸರಟ್ಟಿ ಶಾಲೆಯ ಕಂಪೌಂಡ ಹಾಗೂ ಶೌಚಾಲಯ ನಿರ್ಮಾಣಕ್ಕೆ ಹತ್ತು ಲಕ್ಷ ಅನುದಾನ ನೀಡಲು ಶಿಫಾರಸ್ಸು ಮಾಡಲಾಗಿದೆ ಎಂದು ತಿಳಿಸಿದರು.




ಬಿಇಒ ಎ.ಕೆ. ಬಸಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿದರು. ವಾರ್ಡ್ ಸದಸ್ಯ ಶೆಟ್ಟೆಪ್ಪ ಸುಣಗಾರ ಮಾತನಾಡಿದರು. ಎಸ್ಡಿಎಂಸಿ ಅಧ್ಯಕ್ಷ ಯಲ್ಲಪ್ಪ ಬೋಧೆನ್ನವರ, ಬಿಜೆಪಿ ನಗರ ಘಟಕ ಅಧ್ಯಕ್ಷ ಮಹಾವೀರ ಕೊಕಟನೂರ, ಕಾಂಗ್ರೆಸ್ ಅಧ್ಯಕ್ಷ ಅಶೋಕ ಆಳಗೊಂಡ, ಗ್ಯಾರಂಟಿ ಸಮಿತಿ ಅಧ್ಯಕ್ಷ ನೇಮಣ್ಣ ಸಾವಂತನವರ, ಕವಿತಾ ಕೊಣ್ಣೂರ, ಗೌತಮ ರೋಡಕರ, ರಾಜೇಸಾಬ ನಗಾರ್ಜಿ, ಧಶರಥ ಅಕ್ಕೆನ್ನವರ, ರಮೇಶ ಧರೆನ್ನವರ, ಶಿಕ್ಷಣ ಇಲಾಖೆಯ ಬಿ.ಎಂ. ಹಳೇಮನಿ, ಎ.ಆರ್. ಮುಧೋಳ, ಆಧಿನಾತ ಸಪ್ತಸಾಗರ, ಪಿ.ಎಸ್. ಮಾಸ್ತಿ ಇನ್ನಿತರಿದ್ದರು.

### ಮುದ್ದೇಬಿಹಾಳ ತಾಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರ ಸಂಘದ ಚುನಾವಣೆ

# 12ಜನ ಸದಸ್ಯರು ಅವಿರೋಧವಾಗಿ ಆಯ್ಕೆ

**ಮುದ್ದೇಬಿಹಾಳ:** ಪಟ್ಟಣದ ಎಪಿಎಂಸಿ ಅವರಣದಲ್ಲಿ ಬರುವ ತಾಲೂಕು ಹುಟ್ಟುವಳಿ ಮಾರಾಟ ಸಹಕಾರ ಸಂಘದ ಐದು ವರ್ಷದ ಅವಧಿಯ ಆಡಳಿತ ಮಂಡಳಿ (2025–30) ನಿರ್ದೇಶಕರ ಸ್ಥಾನಕ್ಕೆ ನಡೆದ ಚುನಾವಣೆ ಯಲ್ಲಿ 12 ಜನ ಸದಸ್ಯರು ಅವಿರೋಧವಾಗಿ ಆಯ್ಕೆ ಯಾದರು. ಚುನಾವಣಾಧಿಕಾರಿ ರವೀಂದ್ರ ಆಳೂರ ಸೋಮವಾರ ಅಧಿಕೃತವಾಗಿ ಘೋಷಣೆ ಮಾಡಿದರು. ಸಹಾಯಕ ಚುನಾವಣೆ ಅಧಿಕಾರಿ ಎಆರ್‌ಓ ಸಂತೋಷ ಇಲಕಲ್ಲ, ಟಿಎಪಿಸಿಎಂಎಸ್ ವ್ಯವಸ್ಥಾಪಕ ಜಿ ಎಸ್ ಕೊನರಡ್ಡಿ, ಚುನಾವಣೆಯ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರು.

ತಾಲೂಕಿನ ಕೃಷಿ ಪತ್ತಿನ ಸಹಕಾರ ಸಂಘಗಳಿಂದ ಅ ವರ್ಗದಲ್ಲಿ ಒಟ್ಟು 4 ಸ್ಥಾನಕ್ಕೆ 16 ಜನ ಅಭ್ಯರ್ಥಿಗಳು ಸಲ್ಲಿದ್ದರು. ಇದರಲ್ಲಿ 12 ಜನ ನಾಮಪತ್ರ ಹಿಂಪಡೆಯಲಾಯಿತು.ಬಸವರಾಜ ಮಲ್ಲಪ್ಪ ಇಸ್ಲಾಂಪೂರ, ಸುರೇಶಕಲ್ಲಪ್ಪ ಹಳಿಮನಿ, ಮಲ್ಲನಗೌಡ ನಿಂಗನಗೌಡ ಬಿರಾದಾರ, ನೀಲಕಂಠಗೌಡ ಕಲ್ಲನಗೌಡ ಗೌಡರ 4 ಜನ ಅವಿರೋಧವಾಗಿ ಆಯ್ಕೆಗೊಂಡರು.

ಬ ವರ್ಗದಿಂದ 8 ನಿರ್ದೇಶಕರ ಸ್ಥಾನಕ್ಕೆ ಸಾಮಾನ್ಯ ಸದಸ್ಯರ ಎರಡು ಸ್ಥಾನಕ್ಕೆ ಗುರಲಿಂಗಪ್ಪ ಶಂಕ್ರಪ್ಪ ಹಡ್ಲ ಗೇರಿ ಹಾಗೂ ಚನ್ನಪ್ಪ ಬಗಲಿ. ಮಹಿಳಾ ಮೀಸಲು 2 ಕ್ಷೇತ್ರಕ್ಕೆ ಮಲ್ಲಮ್ಮ ಶಿವನಗೌಡ ಪಾಟೀಲ ಹಾಗೂ ವನಮಾಲಾ ಸಾಹೇಬಗೌಡ ಮೇಟಿ, ಹಿಂದು ಳಿದ ವರ್ಗ ಅ ದಿಂದ ಮುತ್ತಪ್ಪ ಕರಬಸಪ್ಪ ಮುತ್ತಣ್ಣವರ ಹಾಗೂ ಹಿಂದುಳಿದ ವರ್ಗದ ಬ ದಿಂದ



ಮನೋಹರ ಸೋಮಪ್ಪ ಮೇಟಿ, ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡದ ಕ್ಷೇತ್ರದಿಂದ ಚಿದಾನಂದ ಮಂಗಳಪ್ಪ ಸೀತಿಮನಿ ಹಾಗೂ ಗುರಣ್ಣಬಿಹತ್ತೂರಅವಿರೋಧವಾಗಿ ಆಯ್ಕೆಗೊಂಡರು. ಅ.4ರಿಂದ 11ರವರೆಗೆ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಅ.12ರಂದು ನಾಮಪತ್ರ ಪರಿಶೀಲನೆ, ಅ.13ರಂ ದು ಮಧ್ಯಾಹ್ನ 3ರವರಿಗೂ ನಾಮಪತ್ರ ಹಿಂಪಡೆ ಯುವ ಅವಕಾಶ ನೀಡಲಾಗಿತ್ತು. ಒಟ್ಟು 12 ಸ್ಥಾಕ್ಕೆ 42 ಜನ ಅಭ್ಯರ್ಥಿಗಳು ನಾಮಪತ್ರ ಸಲ್ಲಿದ್ದರು.

**ಮನವೊಲಿಸಿದ ಶಾಸಕರು:** ಜಿದ್ದಾಜಿದ್ದಿಗೆ ಕಾರಣವಾಗಿ ಚುನಾವಣೆಯ ವಿಷಯ ತಿಳಿದು ಕರ್ನಾಟಕ ರಾಜ್ಯ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ,ಶಾಸಕ ಸಿ.ಎಸ್.ನಾಡಗೌಡ (ಅಪ್ಪಾಜಿ) ಇದೇ ಮೊದಲ ಬಾರಿ ಟಿಎಪಿಸಿಎಂಎಸ್ ಚುನಾವಣೆ ಯಲ್ಲಿ ಮಧ್ಯಸ್ಥಿಕೆ ವಹಿಸಿ ಪಕ್ಷಾತೀತ ಹಾಗೂ ಜಾತ್ಯಾತೀ ತವಾಗಿ ಎಲ್ಲ ಅಭ್ಯರ್ಥಿಗಳ ಮನವೊಲಿಸಿದರು. ಪರಿಣಾಮ 30 ಜನ ಅಭ್ಯರ್ಥಿಗಳು ನಾಮಪತ್ರ ಹಿಂಪಡೆದ ಕಾರಣ 12 ಜನ ಅಭ್ಯರ್ಥಿಗಳು ಅವಿರೋ ಧವಾಗಿ ಆಯ್ಕೆಗೊಂಡರು. ಬಳಿಕ ಆಯ್ಕೆಗೊಂಡ ಎಲ್ಲ ನೂತನ ಆಡಳಿತ ಮಂಡಳಿ ನಿರ್ದೇಶಕರನ್ನು ಸನ್ಮಾನಿಸಿ ಶಾಸಕ ಸಿ.ಎಸ್.ನಾಡಗೌಡ (ಅಪ್ಪಾಜಿ) ಮಾದ್ಯಮ ರೊಂದಿಗೆ ಮಾತನಾಡಿದರು.

ಈ ಸಂದರ್ಭದಲ್ಲಿ ಡಿಡಿಸಿ ಬ್ಯಾಂಕ್ ನಿರ್ದೇಶಕ ಬಿ.ಎಸ್. ಪಾಟೀಲ (ಯಾಳಗಿ), ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಬಿ.ಕೆ.ಬಿರಾದಾರ, ಸಂಗನಗೌಡ ಪಾಟೀಲ (ಕವಡಿಮಟ್ಟಿ), ಪ್ರಭುಗೌಡ ಮದರಕಲ್ಲ, ಕಾಂಗ್ರೆಸ್ ಮುಖಂಡ ಸಿ.ಬಿ.ಅಸ್ಕಿ, ಬಾಪುಗೌಡ ಪೀರಾಪೂರ, ಸಂತೋಷ ಚವ್ಹಾಣ,ಅಪ್ಪುಗೌಡ ನಾಡಗೌಡ, ರಾಜುಗೌಡ ಕೊಂಗಿ,ಶ್ರೀ ಶೈಲ್ ಮರೋಳ,ಸುರೇಶಗೌಡ ಪಾಟೀಲ ಇಂಗಳಗೇರಿ, ಸಿಬ್ಬಂದಿಗಳು ಸೇರಿದಂತೆ ಉಪಸ್ಥಿತರಿದ್ದರು

# ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ

**ಧಾರವಾಡ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಪೋಲಿಸ್ ಇಲಾಖೆ ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ 2025 ರ ಅಂಗವಾಗಿ ಜಾಥಾ ಕಾರ್ಯಕ್ರಮವನ್ನು ಇಂದು (ಅ.14) ಬೆಳಿಗ್ಗೆ 9 ಧಾರವಾಡ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಆವರಣದಿಂದ ಹಮ್ಮಿಕೊಳ್ಳಲಾಯಿತು.

ತುರ್ತು ಪರಿಸ್ಥಿತಿ ಮತ್ತು ವಿಪತ್ತುಗಳಲ್ಲಿ ಮಾನಸಿಕ ಆರೋಗ್ಯ ಸೇವೆಗಳ ಲಭ್ಯತೆ ಈ ವರ್ಷದ ಘೋಷವಾಕ್ಯದೊಂದಿಗೆ ಜಾಥಾ ಕಾರ್ಯಕ್ರಮವನ್ನು ಹಿರಿಯ ಸಿವಿಲ್ ನ್ಯಾಯಾಧೀಶರಾದ ಘರಶುರಾಮ ಎಫ್. ದೊಡ್ಡಮನಿ ಅವರು ಉದ್ಘಾಟಿಸಿ ಮಾತನಾಡಿ, ಶಾಲಾ– ಕಾಲೇಜುಗಳಲ್ಲಿ ಮತ್ತು ಸಮುದಾಯಗಳಲ್ಲಿ ಮಾನಸಿಕ ಸ್ವಾಸ್ಥ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಹೇಳಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್. ಎಮ್ ಹೊನಕೇರಿ ಅವರು ಮಾತನಾಡಿ, ಮಾನಸಿಕ ಆರೋಗ್ಯದ ಕುರಿತು ಸಮುದಾಯದಲ್ಲಿ ಹೆಚ್ಚಿನ ಅರಿವು ಮೂಡಿಸುವುದು ಅಗತ್ಯವಿದೆ ಎಂದು ತಿಳಿಸಿದರು.

ಜಾಥಾ ಕಾರ್ಯಕ್ರಮದಲ್ಲಿ ಡಾ. ಎಸ್. ಬಿ. ಕಳಸೂರಮಠ, ಡಾ. ಸುಜಾತಾ ಹಸವಿಮಠ, ಡಾ. ಮಂಜುನಾಥ ಎಸ್., ಡಾ. ಮಹೇಶ ಚಿತ್ತರಗಿ, ಡಾ. ರವೀಂದ್ರ ಬೋವೇರ, ಡಾ. ಫರಶರಾಮ ಎಫ್. ಕೆ., ಡಾ. ತನುಜಾ ಕೆ. ಎನ್., ಬಿ. ಆರ್ ಪಾತ್ರೋಟ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಸಿಬ್ಬಂದಿಯವರು ಹಾಗೂ ಶ್ರೇಯಾ ನರ್ಸಿಂಗ್ ಮತ್ತು ಪ್ಯಾರಾ ಮೆಡಿಕಲ್ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.




### ಗುರುವಂದನಾ ಕಾರ್ಯಕ್ರಮದಲ್ಲಿ ಹದಿನೆಂಟು ವರ್ಷಗಳ ನಂತರ ಒಂದಾದ ಸ್ನೇಹಿತರು

# ಭಾರತೀಯ ಗುರು-ಶಿಷ್ಯ ಪರಂಪರೆ ಶ್ರೇಷ್ಠವಾದದ್ದು

**ಬಾಗಲಕೋಟೆ:** ಭಾರತೀಯ ಗುರು–ಶಿಷ್ಯ ಪರಂಪರೆ ಶ್ರೇಷ್ಠವಾದುದು. ಜಗತ್ತಿನ ಪ್ರತಿಯೊಬ್ಬ ಶ್ರೇಷ್ಠ ವ್ಯಕ್ತಿಯ ಹಿಂದೆಯೂ ಗುರುಗಳೇ ಮೂಲ ಶಕ್ತಿಯಾಗಿರುತ್ತಾರೆ. ಕೆಲವರ ಜೀವನದಲ್ಲಿ ಅರಿವೇ ಗುರುವಾಗುತ್ತದೆ ಎಂದು ನಿವೃತ್ತ ಮುಖ್ಯೋಪಾಧ್ಯಾಯರಾದ ಶ್ರೀಮತಿ ಆರ್.ಎಚ್. ಬಟಕುರ್ಕಿ ರವರು ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಕಂಠಿ ಸಭಾ ಭವನದಲ್ಲಿ ಸನ್ 2007–08ನೇ ಸಾಲಿನ ಎಸ್‌ಎಸ್‌ಎಲ್ಸಿ ವಿದ್ಯಾರ್ಥಿಗಳು ಹದಿನೆಂಟು ವರ್ಷಗಳ ಬಳಿಕ ಒಂದುಗೂಡಿ, ತಮ್ಮ ಹಳೆಯ ಗುರುಗಳಿಗೆ ಕೃತಜ್ಞತೆ ಸಲ್ಲಿಸುವ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ಹಮ್ಮಿಕೊಂಡಿದ್ದರು.

ಕಾರ್ಯಕ್ರಮವನ್ನು ಸಸಿಗೆ ನೀರುಣ್ಣಿಸುವ ಮೂಲಕ ಉದ್ಘಾಟಿಸಿ, 'ಗೋ ಗ್ರೀನ್' ತತ್ವವನ್ನು ಅಳವಡಿಸಿಕೊಂಡು ಪರಿಸರ ಸಂರಕ್ಷಣೆಯ ಸಂದೇಶವನ್ನೂ ನೀಡಲಾಯಿತು. ಗುರುಗಳಿಗೆ ಗೌರವ ಸೂಚಕವಾಗಿ ಜೀವಂತ ಸಸ್ಯಗಳನ್ನು ಉಡುಗೊರೆಯಾಗಿ ನೀಡುವುದು ಈ ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿತ್ತು.

ಕಾರ್ಯಕ್ರಮದಲ್ಲಿ ಮಾತನಾಡಿದ ಮತ್ತೊಬ್ಬ ಶಾಲೆಯ ನಿವೃತ್ತ ಶಿಕ್ಷಕರಾದ ಮಾನಪ್ಪ ನಂದಿ ರವರು, "ಆ ದಿನಗಳಲ್ಲಿ ವಿದ್ಯಾರ್ಥಿಗಳು ಬಿಳಿ ಬಣ್ಣದ ಉಡುಪಿನಲ್ಲಿ ಶಾಲಾ ಆವರಣದಲ್ಲಿ ಕಾಣಿಸಿದಾಗ, ಶಾಂತಿಯ ಸಂಕೇತವಾದ ಪಾರಿವಾಳಗಳಂತೆ ತೋರುತ್ತಿದ್ದರು. ಆ ಕ್ಷಣಗಳು ಇನ್ನೂ ಮನದಲ್ಲಿ ತಾಜಾ" ಎಂದು ಸಂತಸ ವ್ಯಕ್ತಪಡಿಸಿದರು.

ಶಿಕ್ಷಕರಾದ ಅಶೋಕ ನಾವಲಗಿ ಹಾಗೂ




ಮಹಾಂತೇಶ ನಿಡಗುಂದಿ ರವರು ತಮ್ಮ ಶಾಲಾ ದಿನಗಳನ್ನು ನೆನೆದು, "ನಾವು ಸಹ ಇದೇ ಶಾಲೆಯ ವಿದ್ಯಾರ್ಥಿಗಳು. ಇಂದಿನ ಗುರುವಂದನಾ ಕಾರ್ಯಕ್ರಮದಲ್ಲಿ ಭಾಗಿಯಾಗುವುದು ನಮಗೆ ಗೌರವದ ವಿಷಯ" ಎಂದು ಹೇಳಿದರು.

ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ತಮಗೆ ಕಲಿಸಿದ ಗುರುಗಳಾದ ಮಾನಪ್ಪ ನಂದಿ, ಆರ್.ಎಚ್. ಬಟಕುರ್ಕಿ ಹಾಗೂ ಸೈರಾಬಾನು ಧನ್ನೂರ ಅವರಿಗೆ ಕೃತಜ್ಞತೆ ಸಲ್ಲಿಸಿದರು.

ಶಿಕ್ಷಕರಾದ ಸಿಂಕಂದರ ಅಥಣಿ ರವರು ವಿದ್ಯಾರ್ಥಿ ಸಮುದಾಯವನ್ನು ಉದ್ದೇಶಿಸಿ ಮಾತನಾಡಿ, "ಗುರುಗಳು ಯಾವಾಗಲೂ ಶಿಷ್ಯರ ಒಳಿತನ್ನೇ ಬಯಸುತ್ತಾರೆ. ನಿಮ್ಮಲ್ಲಿ ಪ್ರತಿಯೊಬ್ಬರೂ ಭವಿಷ್ಯದಲ್ಲಿ ಉತ್ತಮ ಶಿಕ್ಷಣ ನೀಡಿ ಸಮಾಜಕ್ಕೆ ಮಾದರಿಯಾಗಬೇಕು" ಎಂದು ಸಂದೇಶ ನೀಡಿದರು.

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಆರ್. ಎಚ್. ಬಟಕುರ್ಕಿ, ಮಾನಪ್ಪ ನಂದಿ, ರಾಜೇಶ್ವರಿ ಪವಾರ, ಸೈರಾಬಾನು ಧನ್ನೂರ, ಟಿ. ನರಸಿಂಹರೆಡ್ಡಿ, ಮಹಾಂತೇಶ ನಿಡಗುಂದಿ, ಜಗನ್ನಾಥ ಹೊಸೂರ, ಸಿಂಕಂದರ ಅಥಣಿ, ಅಶೋಕ ನಾವಲಗಿ, ಅರುಣ ಶಂಭೋಜಿ, ರಾಜು ಯಾದವ, ಮುರಳೀಧರ ಮಹೇಂದ್ರಕರ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದ ಉಸ್ತುವಾರಿಯನ್ನು ರಶಂತಸಿಂಗ ರಾಜಪೂತ, ಶರತ ಪವಾರ, ಶೃತಿ ಗೋಡಿ, ತ್ರಿವೇಣಿ ಪಟ್ಟಣಶೆಟ್ಟಿ, ಭಾಗ್ಯ ಜಾಧವ, ಮಹಮ್ಮದಗೌಸ ಗದ್ದನಕೇರಿ, ರಾಹುಲ್ ಚವ್ಹಾಣ, ಸಚಿನ್ ದಾದನಟ್ಟಿ, ಸಂಜಯ ಸಕ್ರಿ, ವಿಕ್ರಮ್ ಶಿರೂರ, ರಮೇಶ್ ಬಯ್ಯಾಪುರ, ಬಸವರಾಜ ಮಲಘಾಣ ಚೇತನ್ ನಾಗರಾಳ ವಹಿಸಿ ಯಶಸ್ವಿಗೊಳಿಸಿದರು.

ಈ ಕಾರ್ಯಕ್ರಮದಲ್ಲಿ 2007–08ನೇ ಸಾಲಿನ ಎಸ್‌ಎಸ್‌ಎಲ್ಸಿ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿನಿಯರು ಉತ್ಸಾಹದಿಂದ ಪಾಲ್ಗೊಂಡು ಹಳೆಯ ನೆನಪುಗಳನ್ನು ಹಂಚಿಕೊಂಡರು. ಗುರು–ಶಿಷ್ಯ ಬಾಂಧವ್ಯವನ್ನು ಮತ್ತೊಮ್ಮೆ ಜೀವಂತಗೊಳಿಸಿದ ಈ ಸಮ್ಮಿಲನ ಭಾವನಾತ್ಮಕ ವಾತಾವರಣದಲ್ಲಿ ನೆರವೇರಿತು.

# ಪ್ರತಿ ಎಕರೆಗೆ 50 ಸಾವಿರ ಪರಿಹಾರಕ್ಕೆ ಆಗ್ರಹ

**ಚಡಚಣ:** ಕಳೆದ ಐದು ತಿಂಗಳಿಂದ ವಿಜಯಪುರ ಜಿಲ್ಲೆಯ ಚಡಚಣ ತಾಲೂಕಿನ ಪ್ರತಿ ಹಳ್ಳಿಯಲ್ಲಿ ಸುರಿಯುತ್ತಿರುವ ವಿಪರೀತ ಮಳೆಯಿಂದಾಗಿ ಎಲ್ಲ ಬೆಳೆಗಳು ಸಂಪೂರ್ಣ ನೀರಲ್ಲಿ ನಿಂತು ಹಾಳಾಗಿವೆ.

ಜಂಟಿ ಸಮೀಕ್ಷೆ ನೆಪದಲ್ಲಿ ಯಾವುದೇ ಸಮಯವನ್ನು ಹಾಳು ಮಾಡದೆ ತಾಲೂಕಿನ ಪ್ರತಿಯೊಂದು ಗ್ರಾಮದ ಪ್ರತಿಯೊಬ್ಬ ರೈತರಿಗೂ ಒಣ ಬೇಸಾಯಕ್ಕೆ 50,000 ಹಾಗೂ ನೀರಾವರಿ ಭೂಮಿಗೆ ಒಂದು ಲಕ್ಷ ರೂಪಾಯಿ ಹಾಗೆ ಬಹು ವಾರ್ಷಿಕ ಬೆಳೆಗಳಿಗೆ 2ಲಕ್ಷ ಪರಿಹಾರವನ್ನು ಕೊಡಬೇಕೆಂದು ಈ ಮೂಲಕ ಜಿಲ್ಲಾಡಳಿತಕ್ಕೆ ಹಾಗೂ ರಾಜ್ಯ ಸರ್ಕಾರಕ್ಕೆ ಒತ್ತಾಯ ಮಾಡುತ್ತಿದ್ದೇವೆ ಎಂದು ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಅಗ್ರಹ ಮಾಡಿದರು

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಚಡಚಣ ತಾಲೂಕು ದಂಡಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿ ಅವರು ಮಾತನಾಡಿದರು.

ವಿಪರೀತ ಮಳೆಯಿಂದಾಗಿ ತಾಲೂಕಿನ ಕೃಷಿ ಬೆಳೆಗಳಾದ ತೊಗರಿ ಹತ್ತಿ ಮೆಕ್ಕೆಜೋಳ ಸಜ್ಜೆ ಸೇರಿದಂತೆ ಸಮಸ್ತ ಬೆಳೆಗಳು ಹಾಳಾಗಿವೆ ದ್ರಾಕ್ಷಿ ದಾಳಿಂಬ್ರಿ ಲಿಂಬೆ, ಬಾಳೆ ಸೇರಿದಂತೆ ಎಲ್ಲ ಬೆಳೆಗಳಲ್ಲಿ ನೀರು ನಿಂತು ಹಾಳಾಗಿವೆ ಆದ್ದರಿಂದ ಯಾವುದೇ ಜಂಟಿ ಸಮೀಕ್ಷೆ ವೈಮಾನಿಕ ಸಮೀಕ್ಷೆ ಎಂದು ನೆಪ ಹೇಳದೆ 15 ದಿನದ ಒಳಗಾಗಿ ಜಿಲ್ಲೆಯ ಎಲ್ಲರಿಗೂ ಪರಿಹಾರ ಬರಲೇಬೇಕೆಂದು ಒತ್ತಾಯ ಮಾಡಲಾಯಿತು

ಸಮಸ್ತ ಬೆಳೆಗಳು ಕೂಡ ನಷ್ಟಗೊಂಡಿರುವ ಹಿನ್ನೆಲೆಯಲ್ಲಿ ಯಾರಿಗೂ ತಾರತಮ್ಯ ಮಾಡದೆ ಎಲ್ಲರಿಗೂ ನಷ್ಟ ಪರಿಹಾರವನ್ನು ಹಾಕಬೇಕು ಅದೇ ರೀತಿಯಾಗಿ ಫಸಲು ಭೀಮಾ ಯೋಜನೆಯ ವಿಮೇವೂ ಕೂಡ ಆದಷ್ಟು



ಬೇಗನೆ ಕೊಡಬೇಕೆಂದರು.

ತಾಲೂಕ ಅಧ್ಯಕ್ಷರಾದ ವಸಂತ ಬೈರಾಮಡಿ ಅವರು ಮಾತ್ನಾಡುತ್ತಾ ಭೀಮೆ, ಕೃಷ್ಣಾ ಹಾಗೂ ದೋಣಿಯ ಪ್ರವಾಹದಿಂದಾಗಿ ಸಾಕಷ್ಟು ರೈತರ ಕೃಷಿ ಭೂಮಿಗಳ ಬೆಳೆಗಳು ಹಾಳಾಗಿರುವ ಜೊತೆಗೆ ಮನೆ ಮಠಗಳು ಕೂಡ ಬಿದ್ದು ಹಲವಾರು ಪ್ರಾಣಿಗಳು ಕೂಡ ನೀರಿನಲ್ಲಿ ಕೊಚ್ಚಿಕೊಂಡು ಹೋಗಿವೆ ಇದಕೆಲ್ಲ ಪರಿಹಾರ ನೀಡಬೇಕೆಂದು ಆಗ್ರಹ ಮಾಡುತ್ತಿದ್ದೇವೆ ಒಂದು ವೇಳೆ ತಡವಾದರೆ ಉಗ್ರ ಹೋರಾಟ ಮಾಡಲಾಗುವುದು ಎಂದರು.

ಜಿಲ್ಲಾ ಕಾರ್ಯದರ್ಶಿ ಯಾದ ಮಹದೇವ್ ಬನಸೋಡೆ ಅವರು ಮಾತನಾಡುತ್ತ ನೆಪ ಮಾತ್ರಕ್ಕೆ ಸಮೀಕ್ಷೆ ಮಾಡಿ ಕಣ್ಣಿಗೆ ಕಾಣಬರುವ ಕೆಲವೇ ರೈತರಿಗೆ ನಷ್ಟ ಪರಿಹಾರ ಕೊಡುವುದಾಗಿ ವರದಿ ತಯಾರಿಸಿದ್ದೀರಿ ಆದರೆ ತಾಲೂಕಿನ ಎಲ್ಲಾ ಹಳ್ಳಿಯ ರೈತರಿಗೆ ಮಳೆಯಿಂದ ನಷ್ಟವಾಗಿದೆ. ಅವರೆಲ್ಲರಿಗೂ ಮತ್ತೊಮೆ ಸಮೀಕ್ಷೆ ಮಾಡಿ ಅವರಿಗೂ ಪರಿಹಾರ ಕೊಡಿ ಎಂದರು.

ಮನವಿ ಸ್ವೀಕರಿಸಿ ಮಾತನಾಡಿದ ತಹಸೀಲ್ದಾರ್ ಎಸ್. ಬಿ. ಇಂಗಳೇ ಅವರು ಈಗಾಗಲೇ ಮೊದಲೇ ಹಂತದಲ್ಲಿ ನಷ್ಟಗೊಂಡ ರೈತರಿಗೆ ಪರಿಹಾರಕ್ಕೆ ಗುರುತಿಸಲಾಗಿತ್ತು, ಮತ್ತೆ ಇತ್ತೀಚಿಗೆ ಹೆಚ್ಚಿನ ಮಳೆ ಉಂಟಾಗಿ ಅನೇಕ ರೈತರ ಜಮೀನುಗಳಲ್ಲಿ ನೀರು ನಿಂತು ನಷ್ಟಗೊಂಡಿರುವ ಕುರಿತು ಪ್ರಥಮ ವರದಿಯನ್ನು ಆಯಾ ಗ್ರಾಮ ಪಂಚಾಯತ್ ಅಥವಾ ತಲಾಟಿ ಕಚೇರಿ ಮುಂದೆ ಅಂಟಿಸಲಾಗಿದೆ. ಇನ್ನು ಯಾವ್ ರೈತರು ನಷ್ಟಗೊಂಡು ಉಳಿದಿದ್ದರೆ ಅಂಥವರು ದಾಖಲೆಗಳನ್ನು ಕೊಡುವಂತೆ ತಿಳಿಸಿದರು.

ಈ ವೇಳೆ ಗೌರವಾಧ್ಯಕ್ಷರಾದ ಮುರಗೇಂದ್ರ ಸಿಂಪಿ, ಗೇನಪ್ಪ ಬಿರಾದಾರ, ಶಿವಾನಂದ ಬಿರಾದಾರ, ಉಜ್ವಲ ಡೊಳ್ಳಿ, ಚನ್ನಪ್ಪ ಕುರ್ಲೆ, ರವೀಂದ್ರ ಕೇಶೆಟ್ಟಿ, ಮಹಾದೇವ ಕರಮಳ, ಲಾಯಪ್ಪ ವಾಘಮೋರೆ, ಭೀಮು ಕಡಮನಿ, ಪ್ರಕಾಶ್ ಬತಗುಣಕಿ, ಭೀಮಾಶಂಕರ ಉಮ್ರಾಣಿ, ಭಾಗಣ್ಣ ಕೋಳಿ, ಖಾನಗೊಂಡ ಪಾಟೀಲ್, ರಮೇಶ್ ಕೋಳಿ, ಸಿದ್ರಾಮ್ ಕೋಳಿ, ಬಸವರಾಜ್ ಹೂಗಾರ, ಪುಟ್ಟು ತೇಲಿ ಸೇರಿದಂತೆ ರೈತರು ಇದ್ದರು

# ವಕ್ಫ್ ಆಸ್ತಿಗಳ ದಾಖಲೆ ಅಪ್ಲೋಡ್ ಮಾಡುವುದು ಕಡ್ಡಾಯ

**ಹಾವೇರಿ:** ಜಿಲ್ಲೆಯ ಎಲ್ಲಾ ವಕ್ಸ್ ಸಂಸ್ಥೆಗಳ ಅಧ್ಯಕ್ಷರು, ಮುತವಲ್ಲಿಗಳು, ಆಡಳಿತಾಧಿಕಾರಿಗಳು,ಕೇರಟೇಕರಗಳು ಮೇಕರ ಆಗಿ ನೋಂದಣೆ ಮಾಡಿ ತಮ್ಮ ಸಂಬಂಧಪಟ್ಟ ವಕ್ಸ್ ಸಂಸ್ಥೆಯ ವಕ್ಸ್ ಆಸ್ತಿಗಳ ದಾಖಲೆಗಳನ್ನು ಅಪ್ಲೋಡ ಮಾಡುವುದು ಕಡ್ಡಾಯವಾಗಿದೆ ಎಂದು ಜಿಲ್ಲಾ ವಕ್ಫ್ ಅಧಿಕಾರಿ ಮಖಬೂಲ ಪಾಶಾ ತಿಳಿಸಿದ್ದಾರೆ.

ತಕ್ಷಣವೇ UWMEED ಪೋರ್ಟಲನಲ್ಲಿ ಮೇಕರ ಆಗಿ ನೋಂದಾಯಿಸಕೊಳ್ಳಬೇಕು. UWMEED ಕಾಯ್ದೆ 2025 ಮತ್ತು ಅದರ ನಿಯಮಗಳ ಅಡಿಯಲ್ಲಿ ನಿಗದಿಪಡಿಸಿದ ದಾಖಲೆಗಳನ್ನು 30 ದಿನಗಳ ಒಳಗಾಗಿ ಅಪ್ಲೋಡ ಮಾಡಬೇಕು. ಎಲ್ಲಾ ಅಪ್ಲೋಡಗಳು ಪೋರ್ಟಲನಲ್ಲಿ ಲಭ್ಯವಿರುವ ಸ್ವರೂಪ ಮತ್ತು ಫೈಲ್ ಗಾತ್ರದ ಮಾರ್ಗಸೂಚಿಗಳ ಅನುಗುಣವಾಗಿವೆ ಎಂದು ಖಚಿತಪಡಿಸಿಕೊಂಡು ದಾಖಲಿಸಬೇಕು.ಆದ ಕಾರಣ ಹಾವೇರಿ ಜಿಲ್ಲೆಯ ಎಲ್ಲಾ ವಕ್ಸ್ ಸಂಸ್ಥೆಗಳ ಅಧ್ಯಕ್ಷರು, ಕಾರ್ಯದರ್ಶಿ, ಮುತವಲ್ಲಿಗಳು,ಆಡಳಿತಾಧಿಕಾರಿಗಳು, ಕೇರಟೇಕರಗಳು UWMEED ಪೋರ್ಟಲನಲ್ಲಿ ಮೇಕರ ಆಗಿ ನೋಂದಣೆ ಮಾಡಿ ತಮ್ಮ ಸಂಬಂಧಪಟ್ಟ ವಕ್ಸ್ ಸಂಸ್ಥೆಯ ವಕ್ಫ್ ಆಸ್ತಿಗಳ ದಾಖಲೆಗಳನ್ನು (https://umeed.minorityaffairs.gov.in/signin)ಅಪ್ಲೋಡ್ ಮಾಡಲು ಸೂಚಿಸಿದೆ. ಪೋರ್ಟಲ್‌ನ ಹೆಚ್ಚಿನ ಮಾಹಿತಿಗಾಗಿ ಹಾವೇರಿ ಜಿಲ್ಲಾ ವಕ್ಸ್ ಕಚೇರಿ ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೀಪಾವಳಿ ಹಬ್ಬದ ಪ್ರಯುಕ್ತ ಹೆಚ್ಚುವರಿ ಸಾರಿಗೆಗಳ ಕಾರ್ಯಾಚರಣೆ

**ಗದಗ:** 2025 ನೇ ಸಾಲಿನ ದೀಪಾವಳಿ ಹಬ್ಬದ ಪ್ರಯುಕ್ತ ಸಾರ್ವಜನಿಕರು ತಮ್ಮ ಸ್ವಂತ ಊರುಗಳಿಗೆ ತೆರಳುವುದರಿಂದ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವ್ಯಾಪ್ತಿಯ ಹುಬ್ಬಳ್ಳಿ, ಧಾರವಾಡ, ಗದಗ, ಬೆಳಗಾವಿ, ಉತ್ತರ ಕನ್ನಡ, ಹಾವೇರಿ, ಚಿಕ್ಕೋಡಿ ಮತ್ತು ಬಾಗಲಕೋಟೆ ವಿಭಾಗಗಳಿಂದ ಸುಮಾರು 310 ಹೆಚ್ಚುವರಿ ವಿಶೇಷ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.

ದಿ: 20–10–2025 ಮತ್ತು ದಿ: 22–10–2025 ರಂದು ಕ್ರಮವಾಗಿ ನರಕ ಚತುರ್ಥಿ ಹಾಗೂ ದೀಪಾವಳಿ ಅಂಗವಾಗಿ ಸರ್ಕಾರಿ ರಜೆ ಹಾಗೂ ದಿ: 18–10–2025 ಹಾಗೂ 19–10–2025 ರಂದು ವಾರಾಂತ್ಯ ದಿನಗಳಾಗಿದ್ದರಿಂದ ಬೆಂಗಳೂರು ಮತ್ತು ಇತರೇ ಪ್ರಮುಖ ಸ್ಥಳಗಳಿಂದ ಹೆಚ್ಚಿನ ಪ್ರಯಾಣಿಕರು ತಮ್ಮ ಊರುಗಳಿಗೆ ತೆರಳಲು ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುವುದು. ಬೆಂಗಳೂರಿನಿಂದ ರಾಜ್ಯ/ಅಂತರರಾಜ್ಯ ವಿವಿದ ಸ್ಥಳಗಳಿಗೆ ತೆರಳಲು ದಿನಾಂಕ: 17–10–2025 ರಿಂದ 19–10–2025 ರಂದು ಹೆಚ್ಚುವರಿ ವಿಶೇಷ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ. ಹಬ್ಬ ಮುಗಿದ ನಂತರ ದಿನಾಂಕ: 22–10–2025 ಮತ್ತು ನಂತರ ದಿನಗಳಂದು ಪ್ರಮುಖ ಸ್ಥಳಗಳಿಗೆ ಜನದಟ್ಟಣೆಗೆ ಅನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುವುದು.

ಹೆಚ್ಚುವರಿ ಸಾರಿಗೆಗಳ ಸದುಪಯೋಗ ಪಡಿಸಿಕೊಳ್ಳುವದರೊಂದಿಗೆ, ಸುಖಕರ ಹಾಗೂ ಸುರಕ್ಷಿತ ಪ್ರಯಾಣಕ್ಕಾಗಿ ಸಂಸ್ಥೆಯ ಬಸ್ಸುಗಳಲ್ಲಿ ಪ್ರಯಾಣಿಸುವಂತೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಿದೆ.

# ಅಂಬೇಡ್ಕರ್ ಪುತ್ಥಳಿ ನಿರ್ಮಾಣ ಕಾಮಗಾರಿ ವೀಕ್ಷಿಸಿದ ಶಾಸಕ ಸವದಿ

**ತೇರದಾಳ:** ಇಲ್ಲಿನ ಅಂಬೇಡ್ಕರ್ ವೃತ್ತದಲ್ಲಿ ಅಂದಾಜು ಒಂದು ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡುತ್ತಿರುವ ನೂತನ ಪುತ್ಥಳಿ ಕಾಮಗಾರಿಯನ್ನು ಶಾಸಕ ಸಿದ್ದು ಸವದಿ ವೀಕ್ಷಣೆ ಮಾಡಿದರು.

2022ರಲ್ಲಿ ಮಂಜುರಾದ ಕಾಮಗಾರಿ ಯನ್ನು ಲೋಕೋಪಯೋಗಿ ಇಲಾಖೆ ವಹಿಸಿಕೊಂಡಿದ್ದು, ಕಲ್ಲು ಕೆತ್ತನೆಯ ಕೆಲಸ ಹಾಗೂ ಪ್ರತಿಷ್ಠಾಪಿಸುವ ಜಾಗದ ಕುರಿತು ದಲಿತ ಮುಖಂಡ ರಮೇಶ ಧರೆನ್ನವರ ಅವರಿಂದ ಮಾಹಿತಿ ಪಡೆದುಕೊಂಡರು. ದೇಶದ ಸಂವಿಧಾನ ರಚಿಸುವ ಮೂಲಕ ಪ್ರತಿಯೊಬ್ಬ ನಾಗರಿಕನಿಗೆ ಅವರ ಹಕ್ಕು ನೀಡಿದ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿ ನಿರ್ಮಾಣಕ್ಕೆ ಕೈ ಜೋಡಿಸುತ್ತಿರುವುದೆ ಒಂದು ಪುಣ್ಯದ



ಕೆಲಸ ಎಂದು ಶಾಸಕ ಸವದಿ ಅಭಿಮತ ವ್ಯಕ್ತಪಡಿಸಿದರು. ಕಾಮಗಾರಿಯನ್ನು ತ್ವರಿತ ಗತಿಯಲ್ಲಿ ನಡೆಸಿ ಬೇಗನೆ ಪೂರ್ಣಗೊಳಿಸುವಂತೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿ ಎಂದು ಶಾಸಕ ಸವದಿ ಅವರಿಗೆ ದಲಿತ ಮುಖಂಡರು ಮನವಿ ಮಾಡಿಕೊಂಡರು. ಬಿಜೆಪಿ ನಗರ ಘಟಕ ಅಧ್ಯಕ್ಷ ಮಹಾವೀರ ಕೊಕಟನೂರ, ಪುರಸಭೆ ಸದಸ್ಯ ಸಚಿನ ಕೊಡತೆ, ಪಿಕೆಪಿಎಸ್ ನಿರ್ದೇಶಕ ಅಲ್ಲಪ್ಪ ಬಾಬಗೊಂಡ, ಎಪಿಎಂಸಿ ಮಾಜಿ ಅಧ್ಯಕ್ಷ ವರ್ಧಮಾನ ಕಡಹಟ್ಟಿ, ಶಂಕರ ಕುಂಬಾರ, ವಿದ್ಯಾಧರ ಧರೆನ್ನವರ, ಪ್ರಕಾಶ ಹೊಸಮನಿ, ವಿಠ್ಠಲ ಹಾಡಕರ ಇದ್ದರು.

# ಮುಳಗುಂದ: ಅರ್ಜಿ ಆಹ್ವಾನ

**ಗದಗ:** ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ ಡೇ ಯೋಜನೆಯ ಸ್ವ ಸಹಾಯ ಸದಸ್ಯರುಗಳನ್ನು ಕಮ್ಯುನಿಟಿ ಮೊಬೈಲೈಜರ್ ಹುದ್ದೆಗೆ ಮಾಸಿಕ ಗೌರವ ಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದ್ದು ಅರ್ಜಿ ಆಹ್ವಾನಿಸಲಾಗಿದೆ.ಅಭ್ಯರ್ಥಿ ಕನಿಷ್ಟ ಎಸ್‌ಎಸ್‌ಎಲ್‌ಸಿ ಪಾಸ್ ಆಗಿರಬೇಕು. ಕನ್ನಡ ಭಾಷೆ ಓದು ಬರಹ ಜ್ಞಾನ ಹೊಂದಿರಬೇಕು. ಅರ್ಜಿಯೊಂದಿಗೆ ಇತ್ತೀಚಿನ 4 ಭಾವಚಿತ್ರಗಳು, ಆಧಾರ ಕಾರ್ಡ , ಮತದಾರರ ಗುರುತಿನ ಚೀಟಿ, ಪಡಿತರ ಚೀಟಿ, ಪಾನ್ ಕಾರ್ಡ , ವಿದ್ಯಾರ್ಹತೆ ಸಂಬಂಧಿಸಿದ ದಾಖಲಾತಿಗಳು, ಕಂಪ್ಯೂಟರ್ ತರಬೇತಿ ಹೊಂದಿದ ಬಗ್ಗೆ ಪ್ರಮಾಣ ಪತ್ರ , ಡೇ ನಲ್ಮ ಯೋಜನೆಯ ಸ್ವ ಸಹಾಯ ಸಂಘದ ಸದಸ್ಯರಾಗಿರುವ ಬಗ್ಗೆ ಸಂಘದ ಪ್ರಮಾಣ ಪತ್ರ , ರಾಷ್ಟ್ರೀಕೃತ ಬ್ಯಾಂಕ್ ಪಾಸ್ ಬುಕ್ ಪ್ರತಿ , ಅನುಭವ ಪ್ರಮಾಣ ಪತ್ರ ಇವುಗಳನ್ನು ಲಗತ್ತಿಸಬೇಕು. ಅರ್ಜಿ ಸಲ್ಲಿಸಲು ಅಕ್ಟೋಬರ್ 24 ಕೊನೆಯ ದಿನವಾಗಿದ್ದು, ನಿಗದಿತ ಅರ್ಜಿ ನಮೂನೆ, ಹೆಚ್ಚಿನ ಮಾಹಿತಿಗಾಗಿ ಮುಳಗುಂದ ಪಟ್ಟಣ ಪಂಚಾಯತ್ ಮುಖ್ಯಾಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

### ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸೂಚನೆ

# ಕಾಮಗಾರಿ ಕಳಪೆಯಾದಲ್ಲಿ ಗುತ್ತಿಗೆದಾರರನ್ನು ಬ್ಲಾಕ್‌ಲಿಸ್ಟ್‌ಗೆ ಸೇರಿಸಿ

**ಕಾರವಾರ:** ಜಿಲ್ಲೆಯಲ್ಲಿ ಪ್ರಸ್ತುತ ನಡೆಯುತ್ತಿರುವ ರಾಷ್ಟ್ರೀಯ ಹೆದ್ದಾರಿ, ಲೋಕೋಪಯೋಗಿ ಇಲಾಖೆ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕಾಮಗಾರಿಗಳಲ್ಲಿ ಕಳಪೆ ಗುಣಮಟ್ಟ ಕಂಡುಬಂದಲ್ಲಿ ಮತ್ತು ಕಾಮಗಾರಿಯಲ್ಲಿ ನಿರ್ಲಕ್ಷ್ಯತನ ತೋರುವ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸುವಂತೆ ಮತ್ತು ಈ ರಸ್ತೆ ಕಾಮಗಾರಿಯ ಗುತ್ತಿಗೆ ಪಡೆದವರಿಂದ ಸಂಬಂಧಪಟ್ಟ ಅಧಿಕಾರಿಗಳು ಉತ್ತಮ ಗುಣಮಟ್ಟದ ಕಾಮಗಾರಿಯನ್ನು ಮಾಡಿಸುವಂತೆ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಸೂಚಿಸಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಜಿಲ್ಲಾ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು ಜಿಲ್ಲೆಗೆ ಶಾಪವಾಗಿ ಪರಿಣಮಿಸಿವೆ, ಕಾಮಗಾರಿ ಆರಂಭಗೊಂಡು ಇಷ್ಟು ವರ್ಷಗಳು ಕಳೆದರೂ ಇನ್ನೂ ಸಂಪೂರ್ಣವಾಗದೇ ಇದ್ದು, ರಸ್ತೆ ಅಪಘಾತಗಳಿಂದ ಜನರು ಸಾವಿಗೀಡಾಗುತ್ತಿದ್ದಾರೆ. ಇದರಿಂದಾಗಿ ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಸಾರ್ವಜನಿಕರಿಂದ ನಿರಂತರ ಟೀಕೆಗಳನ್ನು ಎದುರಿಸುವಂತಾಗಿದೆ ಎಂದು ತೀವ್ರ ಅಸಮಧಾನ ವ್ಯಕ್ತಪಡಿಸಿದ ಸಂಸದರು, ಕಾಶ್ಮೀರದ ಚಿನಾಬ್ ನಂತಹ ದುರ್ಗಮ ಪ್ರದೇಶದಲ್ಲಿ ವಿಶ್ವದ ಅತ್ಯಂತ ಎತ್ತರದ ರೈಲ್ವೆ ಸೇತುವೆಯನ್ನು ನಿಗಧಿತ ಅವಧಿಯೊಳಗೆ ಮುಕ್ತಾಯಗೊಳಿಸಲಾಗುತ್ತಿದೆ ಆದರೆ ಜಿಲ್ಲೆಯಲ್ಲಿನ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳು ಕಾಲಮಿತಿ ಮೀರಿದರೂ ಮುಕ್ತಾಯಗೊಳ್ಳದೇ ಇರುವುದು



ಅತ್ಯಂತ ವಿಪರ್ಯಾಸದ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

ಅರಬೈಲ್ ಘಾಟ್‌ನ ತಿರುವಿನಲ್ಲಿ ಪದೇ ಪದೇ ಅಪಘಾತವಾಗುತ್ತಿದ್ದು, ಈ ಕುರಿತು ಗಮನ ಹರಿಸದ ರಾಷ್ಟ್ರೀಯ ಹೆದ್ದಾರಿ ಅಧಿಕಾರಿಗಳು ಅಪಘಾತ ವಲಯವನ್ನು ಬಿಟ್ಟು ಬೇರೆ ಕಡೆ ದುರಸ್ತಿ ಕಾರ್ಯ ಮಾಡಿ ಏನು ಪ್ರಯೋಜನ ಎಂದು ಪ್ರಶ್ನಿಸಿದ ಸಂಸದರು, ಅಪಘಾತವಾಗುವ ಸ್ಥಳಗಳಲ್ಲಿನ ರಸ್ತೆ ತಿರುವನ್ನು ಅಗಲೀಕರಣ ಮಾಡುವಂತೆ ಹಾಗೂ ಸೂಚನಾ ಫಲಕ ಮತ್ತು ರಿಫ್ಲೆಕ್ಟರ್‌ಗಳನ್ನು ಅಳವಡಿಸುವಂತೆ ಸೂಚಿಸಿದರು.

ರಾಷ್ಟ್ರೀಯ ಹೆದ್ದಾರಿ, ಆರ್‌ಬಿಐ ಸಂಸ್ಥೆಯ ಅಧಿಕಾರಿಗಳು ಮತ್ತು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ರಾಷ್ಟ್ರೀಯ ಹೆದ್ದಾರಿ 66ರ ಕಾಮಗಾರಿಯನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕು ಚಿಕ್ಕ ಪುಟ್ಟ ಸಮಸ್ಯೆಗಳಿದ್ದರೆ ಜಿಲ್ಲಾಧಿಕಾರಿಗಳ ಗಮನಕ್ಕೆ ತರಬೇಕು. ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ವಹಿಸಬಾರದು ಎಂದರು.

ಹೆಚ್ಚು ಅಪಘಾತ ಸಂಭವಿಸುವ ಸ್ಥಳಗಳನ್ನು ಗುರುತಿಸಿ, ಅಪಘಾತಗಳಿಗೆ ಕಾರಣಗಳ ಕುರಿತ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸುವಂತೆ ಪೊಲೀಸ್ ಇಲಾಖೆಗೆ ಸೂಚಿಸಿದ ಅವರು, ಪೊಲೀಸ್ ಇಲಾಖೆಯಿಂದ ಗುರುತಿಸಿರುವ ಸ್ಥಳಗಳಲ್ಲಿ ಸ್ಪಷ್ಟವಾಗಿ ಗೋಚರಿಸುವಂತೆ ಸೂಚನಾ ಫಲಕ ಮತ್ತು ರಿಫ್ಲೆಕ್ಟರ್‌ಗಳನ್ನು ಅಳವಡಿಸುವಂತೆ ರಾಷ್ಟ್ರೀಯ ಹೆದ್ದಾರಿ ಮತ್ತು ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದ ಅವರು ರಸ್ತೆ ಅಪಘಾತದ ಸಂದರ್ಭದಲ್ಲಿ ಗೋಲ್ಡನ್ ಅವರ್‌ನಲ್ಲಿ ಗಾಯಳುಗಳಿಗೆ ಸೂಕ್ತ ಚಿಕಿತ್ಸೆ ದೊರೆಯುವಂತೆ ನೋಡಿಕೊಳ್ಳುವ ಮೂಲಕ ಜೀವಹಾನಿಯಾಗದಂತೆ ನೋಡಿಕೊಳ್ಳಿ ಎಂದರು. ಹೆದ್ದಾರಿಗಳಲ್ಲಿ ಬೀಡಾಡಿ ದನಗಳಿಂದ ಅಪಘಾತಗಳಾಗುವುದನ್ನು ತಡೆಯುವ ನಿಟ್ಟಿನಲ್ಲಿ ಮುಂಜಾಗ್ರತ್ತಾ ಕ್ರಮವಾಗಿ ವಾರಸುದಾರರು ಇಲ್ಲದಿರುವ ಬೀಡಾಡಿ ದನಗಳನ್ನು ನಿಯಂತ್ರಿಸುವ ಬಗ್ಗೆ ಪಶುಪಾಲನಾ ಇಲಾಖೆ ಹಾಗೂ ನಗರ ಸ್ಥಳೀಯ ಸ್ಥಳೀಯ ಸಂಸ್ಥೆಗಳು ಸೂಕ್ತ ಕ್ರಮಕೈಗೊಳುವಂತೆ ತಿಳಿಸಿದರು.

## ಬಹುತೇಕ ರಸ್ತೆಗಳು ಗುಂಡಿಮಯ

ಜಿಲ್ಲೆಯ ಬಹುತೇಕ ರಸ್ತೆಗಳು ಗುಂಡಿಮಯವಾಗಿದ್ದು, ವಾಹನಗಳ ಸುಗಮ ಸಂಚಾರಕ್ಕೆ ಅಡಚಣೆಯಾಗಿವೆ, ರಸ್ತೆ ಗುಂಡಿಗಳಿಗೆ ಕೇವಲ ಜಲ್ಲಿಕಲ್ಲು ಹಾಕಿ ಬಿಡದೇ ರಸ್ತೆಗಳಿಗೆ Recarpet ಮಾಡುವಂತೆ ಸೂಚಿಸಿದ ಅವರು, ಜಿಲ್ಲೆಯ ರಸ್ತೆಗಳ ಬಗ್ಗೆ ಇರುವ ಜನಸಾಮಾನ್ಯರ ಅಭಿಪ್ರಾಯವು ಆಡಳಿತ ವರ್ಗಕ್ಕೆ ಕಪ್ಪು ಚುಕ್ಕೆಯಾಗಿದೆ, ಇದನ್ನು ಗಂಭೀರವಾಗಿ ಪರಿಗಣಿಸಿ ಶೀಘ್ರವಾಗಿ ರಸ್ತೆಗಳ ದುರಸ್ತಿ ಕಾರ್ಯಗಳನ್ನು ಪೂರ್ಣಗೊಳಿಸಬೇಕು, ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಜನರ ಜೀವದ ಜತೆ ಆಟವಾಡದೇ ರಸ್ತೆ ಗುಂಡಿಗಳನ್ನು ಮುಚ್ಚುವ, ರಸ್ತೆಯ ತಿರುವುಗಳಲ್ಲಿ ಸೂಚನಾ ಫಲಕ/ರಿಫ್ಲೆಕ್ಟರ್ ಅಳವಡಿಸುವ ಮೂಲಕ ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ದಿಲೀಷ್ ಶಶಿ, ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್, ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಶಿವಕುಮಾರ್ ಹಾಗೂ ರಾಷ್ಟ್ರೀಯ ಹೆದ್ದಾರಿ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಮತ್ತಿತರರು ಇದ್ದರು.

# ಜಾರಕಿಹೊಳಿ ಸಹೋದರರಿಗೆ ಸನ್ಮಾನ



**ಬೆಳಗಾವಿ:** ಬೆಳಗಾವಿ ಜಿಲ್ಲಾ ಮಧ್ಯವರ್ತಿ ಸಹಕಾರಿ ಬ್ಯಾಂಕಿಗೆ ನೂತನ ನಿರ್ದೇಶಕರಾಗಿ ಆಯ್ಕೆಯಾದ ಗೋಕಾಕ್ ಮತಕ್ಷೇತ್ರದ ಶಾಸಕರಾದ ರಮೇಶ ಜಾರಕಿಹೊಳಿ ಅವರ ಪುತ್ರರಾದ ಯುವ ಮುಖಂಡ ಅಮರನಾಥ ಜಾರಕಿಹೊಳಿ ಅವರನ್ನು ಮತ್ತು ಲೋಕೋಪಯೋಗಿ ಸಚಿವರು ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರ ಪುತ್ರರಾದ ಹಾಗೂ ಕಾಂಗ್ರೆಸ್ ಯುವ ಘಟಕದ ಪ್ರಧಾನ ಕಾರ್ಯದರ್ಶಿಯಾದ ರಾಹುಲ ಜಾರಕಿಹೊಳಿ ಅವರನ್ನು ಘಟಪ್ರಭಾ ಪುರಸಭೆ ವತಿಯಿಂದ ಸತ್ಕರಿಸಿ, ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಮುಖ್ಯ ಅಧಿಕಾರಿಯಾದ ಶ್ರೀಮತಿ ಎಂ. ಎಸ್ ಪಾಟೀಲ, ಹಿರಿಯರಾದ ಡಿ .ಎಂ ದಳವಾಯಿ, ಕರವೇ ರಾಜ್ಯಾಧ್ಯಕ್ಷರಾದ ಡಾ.ಕೆಂಪಣ್ಣ ಚೌಕಶಿ, ಶಿವಪುತ್ರ ಕೋಗನೂರ, ಮಲ್ಲಿಕಾರ್ಜುನ ತುಕ್ಕಾನಟ್ಟಿ, ಪ್ರವೀಣ ಮಟಗಾರ, ಮಲ್ಲು ಕೋಳಿ, ಸುರೇಶ ಪೂಜೇರಿ, ಮಾರುತಿ ಹುಕ್ಕೇರಿ,ಇಮ್ರಾನ ಬಟಕುರ್ಕಿ, ಲಕ್ಷ್ಮಣ ಮೇತ್ರಿ, ಲಗಮಣ್ಣ ನಾಗಣ್ಣವರ, ರಾಜಶೇಖರ ರಜಪೂತ, ರೆಹಮಾನ ಮುಕಾಶಿ, ರವಿ ನಾವಿ, ಶೇಟ್ಯಪ್ಪ ಗಾಡಿವಡ್ಡರ, ಸಿದ್ದಪ್ಪ ತಳಗೇರಿ, ಎಂ ಐ ಕೋತ್ವಾಲ, ಸುನಿಲ ಕೋಟವಾಗಿ, ಆನಂದ ಗಾಡಿ ವಡ್ಡರ ,ಹಾಗೂ ಪುರಸಭೆ ಸಿಬ್ಬಂದಿ ವರ್ಗದವರು ಮತ್ತು ಘಟಪ್ರಭಾ ನಗರದ ಹಿರಿಯರು ಉಪಸ್ಥಿತರಿದ್ದರು.

# ನಾಳೆ ಕೊಪ್ಪಳ ಜಿಲ್ಲಾ ಮಟ್ಟದ ಯುವಜನೋತ್ಸವ

**ಕೊಪ್ಪಳ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕೊಪ್ಪಳ ಹಾಗೂ ರಾಜ್ಯ ಯುವ ಸಂಘಗಳ ಒಕ್ಕೂಟ (ರಿ), ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಕೊಪ್ಪಳ ಜಿಲ್ಲಾ ಮಟ್ಟದ ಯುವಜನೋತ್ಸವ 2025-26 ಕಾರ್ಯಕ್ರಮವನ್ನು ಅಕ್ಟೋಬರ್ 17ರ ಶುಕ್ರವಾರ ಬೆಳಿಗ್ಗೆ 10.30 ಗಂಟೆಗೆ ನಗರದ ಸಾಹಿತ್ಯ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಹಿಂದುಳಿದ ವರ್ಗಗಳ ಕಲ್ಯಾಣ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವವರು. ವಿರೋಧ ಪಕ್ಷದ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ಶಾಸಕರಾದ ದೊಡ್ಡನಗೌಡ ಹನುಮಗೌಡ ಪಾಟೀಲ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಮತ್ತು ಯಲಬುರ್ಗಾ ಶಾಸಕರಾದ ಬಸವರಾಜ ರಾಯರೆಡ್ಡಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಬಕೊವಿ ಜಿಲ್ಲಾ ಸಹಕಾರ ಹಾಲು ಒಕ್ಕೂಟ ನಿಯಮಿತ, ಬಳ್ಳಾರಿಯ ಅಧ್ಯಕ್ಷರು ಹಾಗೂ ವಿಧಾನಸಭೆ ಸದಸ್ಯರು ಮತ್ತು ಕೊಪ್ಪಳ ಶಾಸಕರಾದ ಕೆ. ರಾಘವೇಂದ್ರ ಹಿಟ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸುವರು.

ಮುಖ್ಯ ಅತಿಥಿಗಳಾಗಿ ಕೊಪ್ಪಳ ಲೋಕಸಭಾ ಸಂಸದ ಕೆ. ರಾಜಶೇಖರ ಬಸವರಾಜ್ ಹಿಟ್ನಾಳ, ಗಂಗಾವತಿ ಶಾಸಕ ಜಿ. ಜನಾರ್ಧನ ರೆಡ್ಡಿ, ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ. ನಮೋಶಿ, ಡಾ. ಚಂದ್ರಶೇಖರ ಬಿ. ಪಾಟೀಲ್, ಶರಣಗೌಡ ಅನ್ನದಾನಗೌಡ ಪಾಟೀಲ ಬಯ್ಯಾಪೂರ, ಹೇಮಲತಾ ನಾಯಕ, ಮುನಿರಾಬಾದ್ ತುಂಗಭದ್ರಾ ಯೋಜನೆ ಮುನಿರಾಬಾದ್‌ನ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಹಸನಸಾಬ ನಬೀಸಾಬ ದೋಟಿಹಾಳ, ನಗರಸಭೆ ಅಧ್ಯಕ್ಷ ಅಮ್ಜದ್ ಪಟೇಲ್ ಎಸ್.ಎಂ. ಪಟೇಲ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ. ಶ್ರೀನಿವಾಸ ಗುಪ್ತಾ ಹಾಗೂ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ರೆಡ್ಡಿ ಶ್ರೀನಿವಾಸ ಅವರು ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನ್‌ರಾಜ್ ಸಿಂಗ್, ವಸತಿ ಇಲಾಖೆಯ ಕಾರ್ಯದರ್ಶಿ ಮತ್ತು ಕೃಷ್ಣಭಾಗ್ಯ ಜಲ ನಿಗಮದ ವ್ಯವಸ್ಥಾಪಕ ನಿರ್ದೇಶಕರು, ಭೂಸ್ವಾಧೀನ, ಪುನರ್ವಸತಿ ಮತ್ತು ಪುನರ್ ನಿರ್ಮಾಣ, ಕೃಷ್ಣಾ ಮೇಲ್ದಂಡೆ ಯೋಜನೆ, ಬಾಗಲಕೋಟೆಯ ಆಯುಕ್ತರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಕೆ.ಪಿ. ಮೋಹನ್‌ರಾಜ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ಚೇತನ್ ಆರ್. ಆಗಮಿಸುವರು.

ವಿಶೇಷ ಅತಿಥಿಗಳಾಗಿ ಕೊಪ್ಪಳ ವಿಶ್ವವಿದ್ಯಾಲಯದ ಕುಲಪತಿ ಡಾ. ಬಿ.ಕೆ. ರವಿ ಹಾಗೂ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ (ರಿ) ಹಾಗೂ ಕನ್ನಡ ಜಾನಪದ ಪರಿಷತ್‌ನ ರಾಜ್ಯಾಧ್ಯಕ್ಷ ಡಾ. ಎಸ್. ಬಾಲಾಜಿ ಆಗಮಿಸುವರು. ಕಾರ್ಯಕ್ರಮದಲ್ಲಿ ಕೊಪ್ಪಳ ಜಿಲ್ಲೆಯ ತೊಗಲುಗೊಂಬೆಯಾಟದ ಸಾಧನೆಗಾಗಿ 2025-26ನೇ ಸಾಲಿನ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೇಕ್ಯಾತರ್ ಅವರನ್ನು ಸನ್ಮಾನಿಸಲಾಗುವುದು.

ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿಠ್ಠಲ್ ಬಿ. ಜಾಬಗೌಡರ ಹಾಗೂ ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ಜಿಲ್ಲಾ ಅಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಜಿಲ್ಲೆಯ ಎಲ್ಲ ತಾಲ್ಲೂಕುಗಳ ಸಹಾಯಕ ಕ್ರೀಡಾಧಿಕಾರಿಗಳು, ರಾಜ್ಯ ಹಾಗೂ ಜಿಲ್ಲಾ ಯುವ ಪ್ರಶಸ್ತಿ ಪುರಸ್ಕೃತರು, ಯುವ ಸಂಘಗಳ ಒಕ್ಕೂಟಗಳು ಹಾಗೂ ನೋಂದಾಯಿತ ಯುವ ಮಂಡಳಿಗಳು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಇಂದು ತರಗತಿ ಪ್ರಾರಂಭೋತ್ಸವ

**ಕೊಪ್ಪಳ:** ಕೊಪ್ಪಳ ವಿಶ್ವವಿದ್ಯಾಲಯದಲ್ಲಿ ನೂತನವಾಗಿ ಪ್ರಾರಂಬಿಸಲಾದ ಪ್ರದರ್ಶನ ಕಲೆ-ನಾಟಕ ವಿಭಾಗದ ತರಗತಿ ಪ್ರಾರಂಭೋತ್ಸವ ಕಾರ್ಯಕ್ರಮವನ್ನು ಅ.16 ರಂದು ಬೆಳಿಗ್ಗೆ 10.30 ಗಂಟೆಗೆ ವಿವಿಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ನಂತರ ಎಲ್ಲ ಸ್ನಾತಕೋತ್ತರ ವಿಭಾಗಗಳ ವಿದ್ಯಾರ್ಥಿಗಳಿಗೆ ಕೆ-ಸೆಟ್ ಪರೀಕ್ಷೆಯ ಮೊದಲ ಪತ್ರಿಕೆಯ ಪರೀಕ್ಷಾ ಪೂರ್ವ ಸಿದ್ದತೆ ಕುರಿತು ವಿವಿ ಕುಲಪತಿಗಳು ವಿಶೇಷ ತರಗತಿ ನಡೆಸುವರು ಎಂದು ವಿವಿ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಳೆಯಿಂದ ನಷ್ಟಗೊಂಡ ರೈತರಿಗೆ ಪರಿಹಾರ ನೀಡುವಂತೆ ಆಗ್ರಹ

**ಬಸವನ ಬಾಗೇವಾಡಿ:** 2025-26 ನೇ ಸಾಲಿನ ಜೂನ ತಿಂಗಳಿನಿಂದ ಇಲ್ಲಿಯವರೆಗೆ ಸುರಿದಿರುವ ಮಳೆಯಿಂದಾಗಿ ಇಡೀ ಜಿಲ್ಲೆಯಲ್ಲಿ ಸಾಕಷ್ಟು ರೈತರ ಬೆಳೆಗಳು ಸಂಪೂರ್ಣ ನಷ್ಟಗೊಂಡಿವೆ ಜೊತೆಗೆ ಜಿಲ್ಲೆಯ ಭೀಮಾ, ಕೃಷ್ಣಾ ಹಾಗೂ ಡೋಣಿ ನದಿಯ ಪ್ರವಾಹದಿಂದಾಗಿಯೂ ಸಾಕಷ್ಟು ಬೆಳೆ ನಷ್ಟಗೊಂಡಿವೆ, ಕೂಡಲೇ ತಾಲೂಕಿನ ಎಲ್ಲಾ ರೈತರಿಗೆ ಪರಿಹಾರ ನೀಡುವಂತೆ ಆಗ್ರಹಿಸಿ ಮನವಿ ಸಲ್ಲಿಸಲಾಯಿತು.

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಬಾಗೇವಾಡಿ ತಹಶಿಲ್ದಾರರಾದ ವಾಯ್.ಎಸ್. ಸೋಮನಕಟ್ಟಿ ಅವರಿಗೆ ನಗರದ ಬಸವೇಶ್ವರ ವೃತ್ತದಲ್ಲಿ ಜಮಾಯಿಸಿದ ರೈತರು ಮನವಿ ಸಲ್ಲಿಸಿ ಜಿಲ್ಲಾಡಳಿತಕ್ಕೂ ಹಾಗೂ ರಾಜ್ಯ ಸರ್ಕಾರಕ್ಕೆ ಒತ್ತಾಯ ಮಾಡಿ ಕೂಡಲೇ ಪರಿಹಾರ ಮತ್ತು ಫಸಲ್ ಭೀಮಾ ಯೀಜನೆಯಡಿ ವಿಮೆ ನೀಡಬೇಕು ಎಂದರು.

ಜಿಲ್ಲಾಧ್ಯಕ್ಷರಾದ ಸಂಗಮೇಶ ಸಗರ ಅವರು ಮನವಿ ಸಲ್ಲಿಸಿ ಮಾತನಾಡುತ್ತಾ ಜಿಲ್ಲೆಯ 13 ತಾಲೂಕಿನಲ್ಲಿ ಯಾವುದೇ ಸಮೀಕ್ಷೆ ಹೆಸರಲ್ಲಿ ವಿಳಂಭ ಮಾಡದೇ ಪ್ರತಿಯೊಂದು ಹಳ್ಳಿಯ ಸರ್ವ ರೈತರಿಗೂ ಒಣ ಬೇಸಾಯಕ್ಕೆ 50 ಸಾವಿರ , ನೀರಾವರಿಗೆ 1 ಲಕ್ಷ ಹಾಗೂ ಬಹು ವಾಷಿಕ ಬೆಳೆಗಳಿಗೆ 2 ಲಕ್ಷ ನಷ್ಟ ಪರಿಹಾರ ನೀಡಬೇಕು, ಜಂಟಿ ಸಮೀಕ್ಷೆ, ವೈಮಾನಿಕ ಸಮೀಕ್ಷೆ ಹೆಸರಲ್ಲಿ ತಡ ಮಾಡದೇ ಕೂಡಲೆ ಪರಿಹಾರ ನೀಡುವಂತೆ ಆಗ್ರಹ ಮಾಡಿದರು.



ರಾಜ್ಯ ಉಪಾಧ್ಯಕ್ಷರಾದ ಕಲ್ಲು ಸೋನ್ನದ ಅವರು ಮಾತನಾಡುತ್ತಾ ಈ ವರ್ಷ ಹಿಂದೆಂದೂ ಕಂಡು ಕಾಣರಿಯದಂತಹ ಮಳೆ ಹಾಗೂ ಪ್ರವಾಹ ಉಂಟಾಗಿ ಬಾಗೇವಾಡಿ ತಾಲೂಕಿನ ಎಲ್ಲಾ ರೈತರ ತೊಗರಿ, ಹತ್ತಿ, ಸೆಂಗಾ ಸೇರಿದಂತೆ ತೋಟಗಾರಿಕಾ ಬೆಳೆಗಳಾದ ದ್ರಾಕ್ಷಿ, ದಾಳಿಂಬೆ, ಲಿಂಬೆ ಸೇರಿದಂತೆ ಎಲ್ಲಾ ಬೆಳೆಗಳು ಮಳೆ ನೀರಿನಿಂದ ನಷ್ಟ ಉಂಟಾಗಿ ಆತ್ಮಹತ್ಯೆ ಮಾಡಿಕೊಳ್ಳುವ ಪ್ರಸಂಗ ಬಂದಿದೆ, ಕೂಡಲೇ ಎಲ್ಲಾ ರೈತರಿಗೂ ಪರಿಹಾರ ನೀಡಬೇಕು ಎಂದರು.

ಈ ವೇಳೆ ತಾಲೂಕಾ ಅಧ್ಯಕ್ಷರಾದ ಮುದಕನ್ನ ಹೋರ್ತಿ, ಮುತ್ತು ಹಾಲ್ಯಾಳ, ರೇವಣಸಿದ್ಧ ಮಣೂರ, ಜಿಲ್ಲಾ ಸಂಚಾಲಕರಾದ ಜಕರಾಯ ಪೂಜಾರಿ, ಕೋಲಾರ ಅಧ್ಯಕ್ಷರಾದ ಸೋಮು ಬಿರಾದಾರ ಮಾತನಾಡುತ್ತಾ ಈ ವರ್ಷ ರೈತರ ಪರಿಸ್ಥಿತಿ ಗಂಭೀರವಾಗಿ ನಷ್ಟದ ಸ್ಥಿತಿಯಲ್ಲಿ ಮುಂದಿನ ಬದುಕಿನ ಚಿಂತೆ ಮಾಡುವಂತಾಗಿದೆ ಎಂದರು.

ಜಂಟಿ ಸಮೀಕ್ಷೆ ಮಾಡಿರುವ ಕುರಿತು ಆಯಾ ಗ್ರಾಮ ಪಂಚಾಯಿತಿಗಳಲ್ಲಿ ಪಟ್ಟಿ ಹಚ್ಚಿ ಈ ಕುರಿತು ಪತರಿಕಾ ಹೇಳಿಕೆ ನೀಡಿ ಇನ್ನು ಯಾರಾದರು ಉಳಿದ್ದಿದರೆ ಅಂತವರು ನಿಮ್ಮ ಗ್ರಾಮ ಲೆಕ್ಕಾಧಿಕಾರಿಗಳ ಹತ್ತಿರ ಮನವಿ ಸಲ್ಲಿಸಬಹುದು, ನಷ್ಟಗೊಂಡ ರೈತರಿಗೆ ಪರಿಹಾರವನ್ನು ಸಿಗುವಂತೆ ನಾವೂ ಎಲ್ಲಾ ಅಧಿಕಾರಿಗಳೊಂಡನೆ ಸಭೆ ಮಾಡಿ ವರದಿ ತಯಾರಿಸಿದ್ದೆವೆ ಎಂದು ಮನವಿ ಸ್ವೀಕರಿಸಿದ ತಾಹಶಿಲ್ದಾರರು ಮಾತನಾಡಿದರು.

ಈ ವೇಳೆ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ರಾಮನಗೌಡ ಪಾಟೀಲ, ಜಿಲ್ಲಾ ಸಂಚಾಲಕಲರಾದ ಸಂಗಪ್ಪ ಟಕ್ಕೆ, ನಗರ ಘಟಕದ ಅಧ್ಯಕ್ಷರಾದ ಸಚೀನ ಸವನಳ್ಳಿ, ತಾಲೂಕಾ ಉಪಾಧ್ಯಕ್ಷರಾದ ನಾಮದೇವ ರಾಠೋಡ, ಶಶಿಕಾಂತ ಬಿರಾದಾರ, ಬಸವರಾಜ ಅಂಬಲಿ, ಪರಶುರಾಮ ಗೊಳಸಂಗಿ, ರಾವುತ್ ಬರಗಿ, ಸಿದ್ದು ಕುಂಬಾರ, ಬಸವರಾಜ ಬಿಜಾಪುರ, ಬಸಪ್ಪ ಕಾರಜೋಳ, ಅಲ್ಲಾಭಕ್ಷ ಚಪ್ಪರಬಂದ, ದರೇಪ್ಪ ಹೊಸಮನಿ, ಕಾಶಿನಾಥ ಹಾರಿವಾಳ, ಮಲ್ಲಿಕಾರ್ಜುನ ಮೇಲ್ದಾಪುರ, ಕಲ್ಲಪ್ಪ ಉಳ್ಳಾಗಡ್ಡಿ, ದುಂಡಪ್ಪ ಗೊಳಸಂಗಿ, ಭೀರಪ್ಪ ಸಂಕನಾಳ, ಮುತ್ತಪ್ಪ ಶಟ್ಟೆಪ್ಪಗೋಳ,ವೀರಭದ್ರ ಬಡಿಗೇರ, ಮಾಳು ಬಸ್ತಾಳ, ಹಣಮಂತ ಹೊಸಮನಿ, ಶೇಕಪ್ಪ ಮಾದರ ಸೇರಿದಂತೆ ಅನೇಕ ರೈತರು ಭಾಗವಹಿಸಿದ್ದರು.

## ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಗದಗ:** ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರ, ಬೆಂಗಳೂರು ಇವರ ನಿರ್ದೇಶನದ ಮೇರೆಗೆ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಡಿಯಲ್ಲಿ ಸ್ಥಾಪಿಸಿದ ಕಾನೂನು ನೆರವು ಅಭಿರಕ್ಷಕರ ಕಚೇರಿಯಲ್ಲಿ ಖಾಲಿ ಇರುವ ಉಪ ಕಾನೂನು ನೆರವು ಅಭಿರಕ್ಷಕರ 03 ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ. 7 ವರ್ಷ ವಕೀಲ ವೃತ್ತಿಯನ್ನು ಹೊಂದಿದ ಅರ್ಹ ವಕೀಲರು ಅರ್ಜಿ ಸಲ್ಲಿಸಬಹುದಾಗಿದೆ.

ಪದವಿ ಹೊಂದಿದ ಹಾಗೂ ಕನ್ನಡ ಮತ್ತು ಇಂಗ್ಲೀಷ್ ಬೆರಳಚ್ಚು ಹಾಗೂ ಕಂಪ್ಯೂಟರ್ ಜ್ಞಾನವುಳ್ಳ ಅಭ್ಯರ್ಥಿಗಳಿಗೆ ಕಚೇರಿ ಸಹಾಯಕ/ಗುಮಾಸ್ತ 01 ಹುದ್ದೆ ಮತ್ತು ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದವರಿಗೆ ದಲಾಯತ್ (office peon) 01 ಹುದ್ದೆ ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಅಕ್ಟೋಬರ್ 25 ರ ಸಂಜೆ 5 ಗಂಟೆಯೊಳಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಲಯದ ಸಂಕೀರ್ಣ . ಗದಗ ಇಲ್ಲಿ ಸಲ್ಲಿಸಬಹುದಾಗಿದೆ.ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://gadag.dcourts.gov.in ಮೂಲಕ ಅಥವಾ ಗದಗ ಜಿಲ್ಲಾ ನ್ಯಾಯಾಲಯದ ಆವರಣದಲ್ಲಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ವಿಶ್ವವಿದ್ಯಾಲಯ ಮಟ್ಟದ ವಾಲಿಬಾಲ್ ಪಂದ್ಯಾವಳಿ

# ವಿದ್ಯಾರ್ಥಿಗಳ ಉತ್ತಮ ಸಾಧನೆ



**ಬೆಳಗಾವಿ:** ಇತ್ತೀಚಿಗೆ ನಗರದ ಗೋಗಟೆ ಕಾಲೇಜಿನಲ್ಲಿ ಜರುಗಿದ ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ ಮಟ್ಟದ ವಾಲಿಬಾಲ್ ಪಂದ್ಯಾವಳಿಯಲ್ಲಿ ಶಿವಬಸವ ನಗರದ ಸಿದ್ಧರಾಮೇಶ್ವರ ಪದವಿ ಕಾಲೇಜಿನ ವಿದ್ಯಾರ್ಥಿನಿಯರು ಭಾಗವಹಿಸಿ ವಿಶ್ವವಿದ್ಯಾಲಯ ಮಟ್ಟದಲ್ಲಿ ದ್ವಿತೀಯ ಸ್ಥಾನವನ್ನು ಪಡೆದಿದ್ದಾರೆ.

ಇವರಿಗೆ ಗದುಗಿನ ಜಗದ್ಗುರು ತೋಂಟದಾರ್ಯ ಮಠದ ಡಾ. ತೋಂಟದ ಸಿದ್ಧರಾಮ ಸ್ವಾಮಿಗಳು, ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳು, ಸಂಸ್ಥೆಯ ಕಾರ್ಯದರ್ಶಿ ಎಸ್. ಪಿ. ಹಿರೇಮಠ, ಕಾಲೇಜಿನ ಪ್ರಾಚಾರ್ಯ ಸಿದ್ದರಾಮ ರೆಡ್ಡಿ ಹಾಗೂ ದೈಹಿಕ ನಿರ್ದೇಶಕ ಶ್ರೀಧರ ಎಸ್ ನೇಮಗೌಡ ಸೇರಿದಂತೆ ಕಾಲೇಜಿನ ಸಿಬ್ಬಂದಿ ವರ್ಗದವರು ಶುಭ ಕೋರಿದ್ದಾರೆ.

ಪಂದ್ಯಾವಳಿಯಲ್ಲಿ ಕಾಲೇಜಿನ ಪರವಾಗಿ ವಿದ್ಯಾರ್ಥಿಗಳಾದ ಅಕ್ಷತಾ ಚಿಕಡೊಳ್ಳಿ, ಕಲ್ಯಾಣಿ ನಾಯ್ಕ, ಲಕ್ಷ್ಮೀ ಲಮಾಣಿ, ಅಂಬಿಕಾ ಲಮಾಣಿ ಹಾಗೂ ಶಿವಾಣಿ ತುಬಾಕಿ ಭಾಗವಹಿಸಿದ್ದರು.

# ಅ.18 ರಂದು ಅಹವಾಲು ಸ್ವೀಕಾರ ಸಭೆ

**ಕೊಪ್ಪಳ:** ಜೆಸ್ಕಾಂ ಕೊಪ್ಪಳ ಉಪ ವಿಭಾಗ ವ್ಯಾಪ್ತಿಯಲ್ಲಿನ ವಿದ್ಯುತ್ ಗ್ರಾಹಕರ ಕುಂದು ಕೊರತೆಗಳನ್ನು ಪರಿಹರಿಸಲು ಅ.18 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕಾರ್ಯ ಮತ್ತು ಪಾಲನಾ ಉಪವಿಭಾಗ ಕಚೇರಿಯಲ್ಲಿ ವಿದ್ಯುತ್ ಗ್ರಾಹಕರ ಸಭೆಯನ್ನು ಹಮ್ಮಿಕೊಳ್ಳಲಾಗಿದೆ.

ಸಂಬಂಧಿಸಿದ ವ್ಯಾಪ್ತಿಯ ವಿದ್ಯುತ್ ಗ್ರಾಹಕರು ಸಭೆಯಲ್ಲಿ ಪಾಲ್ಗೊಂಡು ವಿದ್ಯುತ್‌ಗೆ ಸಂಬಂಧಿಸಿದ ತಮ್ಮ ದೂರು, ಅಹವಾಲುಗಳಿಗೆ ಪರಿಹಾರ ಪಡೆದುಕೊಳ್ಳಬಹುದು ಎಂದು ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ರಾಯಬಾಗ: ಅಖಿಲ ಕರ್ನಾಟಕ ಸಾಂಸ್ಕೃತಿಕ ಪರಿಷತ್ತು ತಾ.ಘಟಕ ರಾಯಬಾಗ ಹಾಗೂ ತಾಲೂಕ ಕನ್ನಡ ಸಾಹಿತ್ಯ ಪರಿಷತ್ತು ರಾಯಬಾಗ, ಸರಕಾರಿ ನೌಕರರ ಸಂಘ, ಪ್ರಾಥಮಿಕ ಶಿಕ್ಷಕರ ಸಂಘ ದ ವತಿಯಿಂದ ಇವುಗಳ ಸಂಯುಕ್ತ ಆಶ್ರಯದಲ್ಲಿ ಅಕ್ಷರದಾಸೋಹದ ಸಹಾಯಕ ನಿರ್ದೇಶಕರಾದ ರವೀಂದ್ರ ಮ.ಪಾಟೀಲ ಅವರನ್ನು ಸನ್ಮಾನಿಸಿದರು.**

# ನಾಳೆ ಬಸವ ಪರ ಸಂಘಟನೆಗಳಿಂದ ಪ್ರತಿಭಟನೆ

**ಬೆಳಗಾವಿ:** ಕಣ್ಣೇರಿ ಮಠದ ಸ್ವಾಮೀಜಿ ವಿರುದ್ಧ ಸಮಸ್ತ ಬಸವ ಪರ ಸಂಘಟನೆಗಳ ಒಕ್ಕೂಟದಿಂದ ಶುಕ್ರವಾರ ದಿನಾಂಕ 17ರಂದು ಮುಂಜಾನೆ 11:00 ಗಂಟೆಗೆ ಬೆಳಗಾವಿ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಜಾಗತಿಕ ಲಿಂಗಾಯಿತ ಮಹಾಸಭೆಯ ಜಿಲ್ಲಾಧ್ಯಕ್ಷ ಬಸವರಾಜ ರೊಟ್ಟಿ ತಿಳಿಸಿದ್ದಾರೆ.

ಇತ್ತೀಚಿಗೆ ಲಿಂಗಾಯತ ಮಠಾಧಿಪತಿಗಳ ಒಕ್ಕೂಟ ಮತ್ತು ಜಾಗತಿಕ ಲಿಂಗಾಯತ ಮಹಾಸಭೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಬಸವ ಸಂಸ್ಕೃತಿ ಅಭಿಯಾನವನ್ನು ಟೀಕಿಸಿ ಅದರಲ್ಲಿ ಭಾಗವಹಿಸಿದ್ದ 300ಕ್ಕೂ ಅಧಿಕ ಮಠಾಧಿಪತಿಗಳನ್ನು ಅವಾಚ್ಯ ಶಬ್ದಗಳಿಂದ ಅಸಂವಿಧಾನಿಕ ಶಬ್ದಗಳನ್ನು ಬಳಸಿ ಅತ್ಯಂತ ಹೇಯವಾಗಿ ನಿಂದಿಸಿದ್ದನ್ನು ಖಂಡಿಸಿ ಬುಧವಾರ ಬೆಳಗಾವಿಯಲ್ಲಿ ನಡೆದ ಬಸವಪರ ಸಂಘಟನೆಗಳ ಒಕ್ಕೂಟದ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ.

ಈ ಬೃಹ ಪ್ರತಿಭಟನೆಯಲ್ಲಿ ಸಮಸ್ತ ಬಸವ ಅಭಿಮಾನಿಗಳು ಭಾಗವಹಿಸಬೇಕೆಂದು ಒಕ್ಕೂಟದ ಪರವಾಗಿ ಲಿಂಗಾಯತ ಮಹಾಸಭೆಯ ಸಮಸ್ತ ಪದಾಧಿಕಾರಿಗಳು ಕರೆ ನೀಡಿದ್ದಾರೆ. ಸಭೆಯಲ್ಲಿ ಒಕ್ಕೂಟದ ಪದಾಧಿಕಾರಿಗಳಾದ ಮುರಿಗೆಪ್ಪ ಬಾಳಿ, ಈರಣ್ಣ ದೇಯಣ್ಣವರ, ಮುರುಗೇಶ್ ಶಿವಪೂಜಿ, ಸತೀಶ್ ಚೌಗುಲಾ, ಪ್ರವೀಣ್ ಚಿಕಲಿ, ಮೋಹನ್ ಗುಂಡ್ಲೂರ್, ಸುರೇಶ್ ನರಗುಂದ, ಶ್ರೀಮತಿ ಶೋಭಾ ಶಿವಳ್ಳಿ, ಶ್ರೀಮತಿ ರಾಜಶ್ರೀ ದೇಯಣ್ಣವರ್, ನಾನಾಗೌಡ ಬಿರಾದಾರ್, ಶಿವಾನಂದ್ ವಾಗರವಾಡಿ, ಬಸವರಾಜ್ ಮಿಂಡೊಳ್ಳಿ, ಈರಣ್ಣ ಚಿನುಗುಡಿ, ಕೆಂಪಣ್ಣ ರಾಮಾಪುರಿ, ಬಿ. ಎಸ್. ಮತ್ತಿಕೊಪ್ಪ ಮತ್ತು ಬಸವರಾಜ್ ಜಮಖಂಡಿ, ಉಪಸ್ಥಿತರಿದ್ದರು.



# ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ




**ಬೆಳಗಾವಿ:** ಲಿಂಗರಾಜ ಕಾಲೇಜಿನ ಮನೋವಿಜ್ಞಾನ ವಿಭಾಗದ ವತಿಯಿಂದ ವಿಶ್ವ ಮಾನಸಿಕ ಆರೋಗ್ಯ ದಿನವನ್ನು ಆಚರಿಸಲಾಯಿತು. ಎರಡು ದಿನಗಳ ಕಾಲ ನಡೆದ ಈ ಆಚರಣೆಯು ಮಾನಸಿಕ ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವುದು, ಮುಕ್ತ ಸಂಭಾಷಣೆಗಳನ್ನು ಪ್ರೋತ್ಸಾಹಿಸುವುದು ಮತ್ತು ವಿದ್ಯಾರ್ಥಿಗಳಲ್ಲಿ ಒಟ್ಟಾರೆ ಭಾವನಾತ್ಮಕ ಯೋಗಕ್ಷೇಮವನ್ನು ಉತ್ತೇಜಿಸುವ ಗುರಿಯನ್ನು ಹೊಂದಿತ್ತು.

ಪ್ರಬಂಧ ಬರವಣಿಗೆ ಸ್ಪರ್ಧೆ ಮತ್ತು ಪೋಸ್ಟರ್ ಪ್ರಸ್ತುತಿ ಸ್ಪರ್ಧೆ. "ಮಾನಸಿಕ ಆರೋಗ್ಯದ ಮೇಲೆ ಎಐ ಪ್ರಭಾವ" ಎಂಬ ಪ್ರಬಂಧ ವಿಷಯವು ಭಾಗವಹಿಸುವವರನ್ನು ಮಾನವ ಭಾವನೆಗಳು ಮತ್ತು ಮಾನಸಿಕ ಆರೋಗ್ಯದ ಮೇಲೆ ತಂತ್ರಜ್ಞಾನದ ಹೆಚ್ಚುತ್ತಿರುವ ಪ್ರಭಾವವನ್ನು ಪ್ರತಿಬಿಂಬಿಸಲು ಆಹ್ವಾನಿಸಿತು. "ಮಾನಸಿಕ ಆರೋಗ್ಯ ಜಾಗೃತಿ" ಎಂಬ ಪೋಸ್ಟರ್ ವಿಷಯವು ವಿದ್ಯಾರ್ಥಿಗಳು ತಮ್ಮ ಸೃಜನಶೀಲತೆ ಮತ್ತು ಮಾನಸಿಕ ಯೋಗಕ್ಷೇಮದ ತಿಳಿವಳಿಕೆಯನ್ನು ದೃಷ್ಟಿಗೋಚರವಾಗಿ ವ್ಯಕ್ತಪಡಿಸಲು ಅವಕಾಶ ಮಾಡಿಕೊಟ್ಟಿತು. ಈ ಸ್ಪರ್ಧೆಯನ್ನು ಇಲಾಖಾ ಚಟುವಟಿಕೆಯಾಗಿ ನಡೆಸಲಾಯಿತು.

ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿದರು. ಡಾ. ಶೀತಲ್ ಪಾಟೀಲ ಅವರು "ಮಾನಸಿಕ ಆರೋಗ್ಯದ ಮೇಲೆ ಯೋಗ ಮತ್ತು ಧ್ಯಾನದ ಪ್ರಭಾವ" ಎಂಬ ವಿಷಯದ ಕುರಿತು ಮಾತನಾಡಿ, ಇಂದಿನ ವೇಗದ ಜಗತ್ತಿನಲ್ಲಿ ಯೋಗ ಮತ್ತು ಧ್ಯಾನವು ಒತ್ತಡ, ಆತಂಕ ಮತ್ತು ಭಾವನಾತ್ಮಕ ಅಸಮತೋಲನವನ್ನು ನಿರ್ವಹಿಸಲು ಹೇಗೆ ಸಹಾಯ ಮಾಡುತ್ತದೆ ಎಂಬುದನ್ನು ಸುಂದರವಾಗಿ ವಿವರಿಸಿದರು.

ಮನೋವಿಜ್ಞಾನ ವಿದ್ಯಾರ್ಥಿನಿ ಸುಹಾನಿ ಮಗದುಮ ಸ್ವಾಗತಿಸಿದರು. ಮನೋವಿಜ್ಞಾನ ಉಪನ್ಯಾಸಕಿ ಶ್ರೀಕೃಪಾ ಶಾಸ್ತ್ರಿ ವಂದಿಸಿದರು. ಕಾರ್ಯಾಗಾರದ ಅಧ್ಯಕ್ಷತೆಯನ್ನು ಪ್ರಾಚಾರ್ಯ ಡಾ. ಎಚ್.ಎಸ್. ಮೇಲಿನಮನಿ ವಹಿಸಿದ್ದರು.

**ಶಾಸಕ ಗುಡಗುಂಟಿ 70 ಸಾವಿರ ಆರ್ಥಿಕ ಸಹಾಯ: ಶೈಕ್ಷಣಿಕ ಆರ್ಥಿಕ ಸಹಾಯಕ್ಕೆ ಪತ್ರಕರ್ತ ಆಳಗಿ ಮನವಿ**

# ಅಂದು ಪತ್ರಿಕಾ ವಿತರಕರು ಇಂದು ಇಂಜಿನೀಯರಿಂಗ್ ವಿದ್ಯಾರ್ಥಿಗಳು

**ವರದಿ: ಮಲ್ಲೇಶ ರಾ. ಆಳಗಿ**

**ಜಮಖಂಡಿ:** ನಗರದಲ್ಲಿ ಪತ್ರಿಕಾ ವಿತರಕರಾಗಿ ಕಳೆದ ಎರಡು ವರ್ಷಗಳಿಂದ ಕೆಲಸ ಮಾಡುತ್ತಿದ್ದ ರಾಮೇಶ್ವರ ಕಾಲನಿಯ ಅವಳಿ ಸಹೋದರರಿಗೆ ಬೀದರದಲ್ಲಿ ಮೆಡಿಕಲ್ ಸೀಟ ಮತ್ತು ಬೆಂಗಳೂರಿನ ಕಾಲೇಜಿನಲ್ಲಿ ಸರಕಾರಿ ಸೀಟ ಲಭಿಸಿದೆ.

ಪತ್ರಿಕಾ ವಿತರಕ ಮಾನವ ಕದಂ ಅವರು ನೀಟ್ ಪರೀಕ್ಷೆ ಬರೆದು ಬೀದರ ಇನಸ್ಟೂಟ್ ಆಫ್ ಮೆಡಿಕಲ್ ಸೈನ್ಸ್ ಕಾಲೇಜಿನಲ್ಲಿ ಸರಕಾರಿ ಎಂಬಿ.ಬಿ.ಎಸ್. ಮೆಡಿಕಲ್ ಸೀಟ್ ಪಡೆದುಕೊಂಡಿದ್ದಾರೆ. ಪತ್ರಿಕಾ ವಿತರಕ ಮನೀಷ ಕದಂ ಅವರು ಕೆಸಿಇಟಿ ಪರೀಕ್ಷೆ ಬರೆದು ಬೆಂಗಳೂರ ಬಿ.ಎಂ.ಎಸ್. ಕಾಲೇಜ ಆಫ್ ಇಂಜಿನೀಯರಿಂಗ್ ಕಾಲೇಜಿನಲ್ಲಿ ಸರಕಾರಿ ಬಿಇ ಕಂಪ್ಯೂಟರ್ ಸೈನ್ಸ್ ಸೀಟ್ ಪಡೆದುಕೊಂಡಿದ್ದಾರೆ.

ಅವಳಿ-ಜವಳಿ ಸಹೋದರರಾದ ಮಾನವ ಮತ್ತು ಮನೀಷ ಇಬ್ಬರು ಮೂಲದಲ್ಲಿ ವೈದ್ಯಕೀಯ ಕ್ಷೇತ್ರಕ್ಕೆ ಹೋಗಲು ಇಚ್ಚಿಸಿದ್ದರು. ಆದರೇ ಪತ್ರಿಕಾ ವಿತರಕ ಮಾನವ ಅವನಿಗೆ ಬೀದರದಲ್ಲಿ ಮೆಡಿಕಲ್ ಸೀಟ್ ಲಭಿಸಿದರೇ, ಪತ್ರಿಕಾ ವಿತರಕ ಮನೀಷನಿಗೆ ಬೆಂಗಳೂರ ಇಂಜೀನಿಯರಿಂಗ ಕಾಲೇಜಿನಲ್ಲಿ ಸೀಟ್ ಲಭ್ಯವಾಗಿದೆ.

ಆರ್ಥಿಕವಾಗಿ ಮತ್ತು ಹಿಂದುಳಿದ ಕುಟುಂಬದ ಹಿನ್ನಲೆ ಹೊಂದಿರುವ ಅವರ ತಂದೆ ಅರುಣ ಕದಂ ಖಾಸಗಿ ಸಂಸ್ಥೆಗಳಲ್ಲಿ ಸೆಕ್ಯೂಟರಿ ಗಾರ್ಡ ಆಗಿ ಕೆಲಸ ನಿರ್ವಹಿಸುತ್ತಿದ್ದರೇ, ತಾಯಿ ಸುನೀತಾ ಕದಂ ನೆರೆಹೊರೆಯವರು ಮನೆಯಲ್ಲಿ ಪಾತ್ರೆ ತೊಳೆಯುವ ಕೆಲಸ ಮಾಡುವ ಮೂಲಕ ಆರ್ಥಿಕ ತೊಂದರೆಯಲ್ಲಿದ್ದಾರೆ.



## ಶೈಕ್ಷಣಿಕ ಆರ್ಥಿಕ ಸಮಸ್ಯೆಗೆ ಸ್ಪಂದಿಸಲು ಮನವಿ

ಪತ್ರಿಕಾವಿತರಕರಾಗಿ ಕೆಲಸ ಮಾಡುತ್ತಿದ್ದ ರಾಮೇಶ್ವರ ಕಾಲನಿಯ ಅವಳಿ ಸಹೋದರರಾದ ಮಾನವ ಕದಂ ಅವರು ನೀಟ್ ಪರೀಕ್ಷೆ ಬರೆದು ಬೀದರ ಇನಸ್ಟೂಟ್ ಆಫ್ ಮೆಡಿಕಲ್ ಸೈನ್ಸ್ ಕಾಲೇಜಿನಲ್ಲಿ ಸರಕಾರಿ ಎಂಬಿ.ಬಿ.ಎಸ್. ಮೆಡಿಕಲ್ ಸೀಟ್ ಲಭಿದ್ದು ಅದರಂತೆ ಮನೀಷ ಕದಂ ಅವರು ಕೆಸಿಇಟಿ ಪರೀಕ್ಷೆ ಬರೆದು ಬೆಂಗಳೂರ ಬಿ.ಎಂ.ಎಸ್. ಕಾಲೇಜ ಆಫ್ ಇಂಜಿನೀಯರಿಂಗ್ ಕಾಲೇಜಿನಲ್ಲಿ ಸರಕಾರಿ ಬಿಇ ಕಂಪ್ಯೂಟರ್ ಸೈನ್ಸ್ ಸೀಟ್ ಪಡೆದುಕೊಂಡಿದ್ದಾರೆ. ತೀವ್ರ ಬಡತನ ಎದುರಿಸುತ್ತಿರುವ ಈ ಕುಟುಂಬಕ್ಕೆ ಯಾವುದೇ ಬೇಧಭಾವಿಲ್ಲದೇ ಶೈಕ್ಷಣಿಕ ಆರ್ಥಿಕ ಸಹಾಯ ಮಾಡಬೇಕೆಂದು ಪತ್ರಕರ್ತ ಮಲ್ಲೇಶ ಆಳಗಿ ಮನವಿ ಮಾಡಿದ್ದಾರೆ.

ಜ್ಞಾನ ಗಂತೋತ್ರಿಯಲ್ಲಿ ವಿಜ್ಞಾನ ವಿಭಾಗದಲ್ಲಿ ಪಿಯುಸಿ ಮುಗಿಸಿರುವ ಅವಳಿ ಸಹೋದರರಾದ ಮಾನವ ಶೇ.96 ರಷ್ಟು ಅಂಕ ಪಡೆದುಕೊಂಡರೇ, ಮನೀಷ ಶೇ.95 ರಷ್ಟು ಅಂಕ ಪಡೆದುಕೊಂಡಿದ್ದರು. ಅವಳಿ ಸಹೋದರರ ಆರ್ಥಿಕ ಸಂಕಷ್ಟ ಗಮನಿಸಿದ ಶಾಲಾ ಆಡಳಿತ ಮಂಡಳಿ ಮತ್ತು ಪ್ರಾಚರ್ಯರು ಯಾವುದೇ ರೀತಿ ಶುಲ್ಕ ಪಡೆಯದೇ ಉಚಿತವಾಗಿ ಪಿಯುಸಿ ಶಿಕ್ಷಣ ನೀಡಿದ್ದರು.

**ಆರ್ಥಿಕ ನೆರವು ಬೇಕಾಗಿದೆ:** ಪರಿಶಿಷ್ಟ ಜಾತಿಯಲ್ಲಿ ಗುರುತಿಕೊಂಡಿರುವ ಅವಳಿ ಸಹೋದರರು ಯಾವುದೇ ಆರ್ಥಿಕವಾಗಿ ಸ್ಥಿತಿವಂತರಲ್ಲ. ವಾಸಿಸಲು ಸ್ವಂತ ಸೂರವಿಲ್ಲದೇ ರಾಮೇಶ್ವರ ಕಾಲನಿಯಲ್ಲಿ ಬಾಡಿಗೆ ಮನೆಯಲ್ಲಿ ನಾಲ್ವರು ವಾಸವಾಗಿದ್ದಾರೆ. ತಂದೆ ಸೆಕ್ಯೂರೆಟ್ರಿ ಕೆಲಸ ಮಾಡುತ್ತಿದ್ದು, ತಾಯಿ ಪಾತ್ರೆ ತೊಳೆಯುವ ಕೆಲಸ ಮಾಡುತ್ತಿದ್ದಾರೆ. ಇಬ್ಬರು ಪುತ್ರರು ಬೆಳಗಿನ ಜಾವ ಪತ್ರಿಕೆ ವಿತರಣೆಯ ಕಾಯಕ ಮಾಡುತ್ತಿದ್ದರು. ಪತ್ರಿಕಾ ವಿತರಣೆ ನಂತರ ಆನಲೈನ್ ಮೂಲಕ ಪರೀಕ್ಷೆಗಳನ್ನು ಬರೆದು ಪ್ರಸಕ್ತ ವರ್ಷದಲ್ಲಿ ಎಂ.ಬಿ.ಬಿ.ಎಸ್. ಮತ್ತು ಇಂಜಿನೀಯರಿಂಗ್ ಸೀಟಗಳನ್ನು ಪಡೆದುಕೊಂಡಿದ್ದಾರೆ. ಆರ್ಥಿಕ ಸಹಾಯ ಮಾಡಲು ಇಚ್ಚಿಸುವರು ಬಡ ವಿದ್ಯಾರ್ಥಿಗಳೊಂದಿಗೆ ಚರ್ಚಿಸಿದ ನಂತರ ಫೋನ ಪೇ ನಂಬರ 8660229247 ಸಹಾಯ ಮಾಡಬಹುದು.

**ಶಾಸಕರಿಂದ 70 ಸಾವಿರ ಆರ್ಥಿಕ ನೆರವು.**

ಉನ್ನತ ವ್ಯಾಸಂಗಕ್ಕೆ ಆರ್ಥಿಕ ತೊಂದರೆ ಗಮನಿಸಿದ ಪತ್ರಕರ್ತ ಮಲ್ಲೇಶ ಆಳಗಿ ಅವರು ಅವಳಿ ವಿದ್ಯಾರ್ಥಿಗಳ ತಂದೆ-ತಾಯಿ, ಕನ್ನಡ ಸಾಹಿತ್ಯ ಅಧ್ಯಕ್ಷ ಸಂತೋಷ ತಳಕೇರಿ, ನಿವೃತ್ತ ಪ್ರಾಚಾರ್ಯ ಡಾ.ಎಸ್. ಎಸ್.ಸುವರ್ಣಖಿಂಡಿ, ಜ್ಞಾನಗಂಗೋತ್ರಿ ಕಾಲೇಜಿನ ಪ್ರಾಚಾರ್ಯ ಚಂದ್ರಕಾಂತ ಆಸಿ ಜೊತೆಗೂಡಿ ನಾಡೋಜ ಶಾಸಕ ಜಗದೀಶ ಗುಡಗುಂಟಿ ಅವರನ್ನು ಸಂಪರ್ಕಿಸಿ ಉನ್ನತ ವ್ಯಾಸಂಗಕ್ಕೆ ವಿದ್ಯಾರ್ಥಿಗಳಿಗೆ ಆರ್ಥಿಕ ತೊಂದರೆ ವ್ಯಕ್ತಪಡಿಸಿದಾಗ ಶಾಸಕ ಜಗದೀಶ ಗುಡಗುಂಟಿ 70 ಸಾವಿರ ನಗದು ಹಣವನ್ನು ನೀಡುವ ಮೂಲಕ ಮತ್ತೇ ಅವಳಿ ಸಹೋದರ ಶೈಕ್ಷಣಿಕ ತೊಂದರೆಗಳಿಗೆ ಸ್ಪಂದಿಸುತ್ತೇನೆ ಎಂದರು.

# ಅರ್ಹ ವಯಸ್ಸಿನ ಖಾತ್ರಿ ನಂತರವೇ ವಿವಾಹಕ್ಕೆ ಸರಕು ಪೂರೈಸಿ

**ಕೊಪ್ಪಳ:** ವಿವಾಹಗಳಿಗೆ ಸರಕು ಮತ್ತು ಸೇವೆಗಳನ್ನು ನೀಡುವ ಪೂರ್ವದಲ್ಲಿಯೇ ಸರಕು ಹಾಗೂ ಸೇವಾ ಪೂರೈಕೆದಾರರು ವಧು-ವರರ ಅರ್ಹ ವಯಸ್ಸಿನ ಖಾತ್ರಿಪಡಿಸಿಕೊಂಡ ನಂತರವೇ ಸರಕು ಮತ್ತು ಸೇವೆಗಳನ್ನು ಪೂರೈಸಬೇಕು ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ.ಇಟ್ನಾಳ ಅವರು ಸೂಚಿಸಿದ್ದಾರೆ.



ಜಿಲ್ಲೆಯನ್ನು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಜಿಲ್ಲಾಡಳಿತವು ಹಲವಾರು ಕಾರ್ಯಕ್ರಮಗಳ ಮೂಲಕ ಜಾಗೃತಿ ಮೂಡಿಸುತ್ತಿದ್ದಾಗ್ಯೂ ಜಿಲ್ಲೆಯಲ್ಲಿ ಅಪ್ರಾಪ್ತ ಮಕ್ಕಳಿಗೆ ವಿವಾಹವನ್ನು ಮಾಡಲು ಪ್ರಯತ್ನಿಸುತ್ತಿರುವುದು ಕಂಡುಬರುತ್ತಿದೆ. ಬಾಲ್ಯವಿವಾಹ ನಿಷೇಧ ಕಾಯ್ದೆ-2006 ಕರ್ನಾಟಕ ತಿದ್ದುಪಡಿ-2016 ರಂತೆ 18 ವರ್ಷದೊಳಗಿನ ಹೆಣ್ಣು ಮಗು ಹಾಗೂ 21 ವರ್ಷದೊಳಗಿನ ಗಂಡು ಮಕ್ಕಳ ವಿವಾಹವನ್ನು ನಿಷೇಧಿಸಿದೆ. ಬಾಲ್ಯವಿವಾಹವು ಶಿಕ್ಷಾರ್ಹ ಅಪರಾಧವಾಗಿದ್ದು, ಕಾಯ್ದೆಯ ಕಲಂ 10 ಮತ್ತು 11 ರನ್ವಯ ಬಾಲ್ಯವಿವಾಹದಲ್ಲಿ ಭಾಗವಹಿಸಿದವರು, ಪ್ರೋತ್ಸಾಹಿಸಿದವರು, ಸಹಕರಿಸಿದವರು ಹಾಗೂ ನಡೆಸಿದವರಿಗೆ ಕನಿಷ್ಠ 1 ರಿಂದ 2 ವರ್ಷಗಳ ಜೈಲು ಶಿಕ್ಷೆ ಮತ್ತು ರೂ.1 ಲಕ್ಷದವರೆಗೆ ದಂಡವನ್ನು ವಿಧಿಸಬಹುದಾಗಿದೆ.

ಬಾಲ್ಯವಿವಾಹ ನೆರವೇರಲು ಸಹಕರಿಸಿದ ಡೆಕೋರೇಶನ್, ಸಪ್ಲಾಯರ್, ಪ್ರಿಂಟಿಂಗ್ ಪ್ರೆಸ್, ಕಲ್ಯಾಣ ಮಂಟಪ, ಫಂಕ್ಷನ್ ಹಾಲ್‌ಗಳ ವ್ಯವಸ್ಥಾಪಕರು ಅಥವಾ ಮಾಲೀಕರು, ಅಡುಗೆದಾರರು ಅಥವಾ ಕೇಟರಿಂಗ್ ಸೇವೆಯನ್ನು ನೀಡಿದವರ ವಿರುದ್ಧವೂ ಪ್ರಕರಣ ದಾಖಲಿಸಲು ಬಾಲ್ಯವಿವಾಹ ನಿಷೇಧಾಧಿಕಾರಿಗಳಿಗೆ ಅವಕಾಶವಿರುತ್ತದೆ. ಜಿಲ್ಲೆಯಲ್ಲಿ ಈಗಾಗಲೇ ಕಲ್ಯಾಣ ಪಂಟಪಗಳ, ಸಾಮೂಹಿಕ ವಿವಾಹಗಳ ಆಯೋಜಕರ ವಿರುದ್ಧ ಪ್ರಕರಣಗಳು ದಾಖಲಾಗಿವೆ.

ಸರ್ವೋಚ್ಚ ನ್ಯಾಯಾಲಯವು ಬಾಲ್ಯ ವಿವಾಹದಿಂದ ಮಕ್ಕಳ ಬೆಳವಣಿಗೆಯ ಮೇಲೆ ದುಷ್ಪರಿಣಾಮ ಬೀರುವುದಲ್ಲದೆ ಮಕ್ಕಳ ಮೇಲೆ ಲೈಂಗಿಕ ಅಪರಾಧಗಳನ್ನು ಎಸಗಲು ಅವಕಾಶಗಳನ್ನು ನೀಡಿದಂತಾಗುತ್ತದೆ. ಆದ್ದರಿಂದ ಬಾಲ್ಯವಿವಾಹಗಳನ್ನು ಕಡ್ಡಾಯವಾಗಿ ತಡೆಗಟ್ಟಿ ಮತ್ತು ಸಮುದಾಯಗಳಲ್ಲಿ ಜಾಗೃತಿಯನ್ನು ಮೂಡಿಸಲು ಅವಶ್ಯಕ ಕ್ರಮಗಳನ್ನು ಕೈಗೊಳ್ಳುವಂತೆ ನಿರ್ದೇಶಿಸಿದೆ.

ಆದ್ದರಿಂದ ತಾವುಗಳು ನೆರವೇರಿಸುವ ವಿವಾಹಗಳಲ್ಲಿ ವಧುವಿನ ವಯಸ್ಸು 18 ವರ್ಷ ಹಾಗೂ ವರನ ವಯಸ್ಸು 21 ವರ್ಷ ಪೂರ್ಣವಾಗಿರುವ ಬಗ್ಗೆ ಖಾತ್ರಿ ಪಡಿಸಿಕೊಂಡ ನಂತರವೇ(ಜನನ ಪ್ರಮಾಣ ಪತ್ರ ಅಥವಾ ಶಾಲಾ ದಾಖಲಾತಿ ಪ್ರಮಾಣ ಪತ್ರ ಅಥವಾ ಎರಡೂ ದಾಖಲಾತಿ ಇಲ್ಲದ ಸಂದರ್ಭದಲ್ಲಿ ಮಾತ್ರ ಜಿಲ್ಲಾ ಶಸ್ತ್ರ ಚಿಕಿತ್ಸಕರು ನೀಡಿದ ವೈದ್ಯಕೀಯ ಪ್ರಮಾಣ ಪತ್ರಗಳು ಮಾತ್ರ ಮಾನ್ಯವಾಗಿದ್ದು, ಇನ್ನಾವುದೇ ದಾಖಲಾತಿಗಳು ಮಾನ್ಯವಲ್ಲ) ಅಂತಹ ವಿವಾಹಗಳಿಗೆ ಸರಕು ಮತ್ತು ಸೇವೆಗಳನ್ನು ಪೂರೈಸಬೇಕು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 15ನೇ ಹಣಕಾಸಿನ ಯೋಜನೆ: ಸಾಮಾಜಿಕ ಲೆಕ್ಕಪರಿಶೋಧನೆ ಗ್ರಾಮಸಭೆ

**ಮುದ್ದೇಬಿಹಾಳ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿಗಳನ್ನು ಪರಿಶೀಲನೆ ಮಾಡಲಾಗಿದೆ. ಇಲಾಖೆ ಕೆಲಸದ ಯೋಜನೆಗಳಾದ ವಲಯ ಅರಣ್ಯ ಇಲಾಖೆ,ಕೃಷಿ ಇಲಾಖೆ,ಸಾಮಾಜಿಕ ಅರಣ್ಯ ಇಲಾಖೆ ಉದ್ಯೋಗ ಖಾತ್ರಿ ಯೋಜನೆಯ 15 ನೇ ಹಣಕಾಸು ಯೋಜನೆ, ಗ್ರಾಪಂ ಯೋಜನೆಗಳು ವಿವಿಧ ಗ್ರಾಮಗಳಿಗೆ ಕಾಮಗಾರಿಯನ್ನು ಪರಿಶೀಲನೆ ಮಾಡಿದ್ದೇವೆ ಎಂದು ಸಾಮಾಜಿಕ ಲೆಕ್ಕ ಪರಿಶೋಧನೆ ಕಾರ್ಯಕ್ರಮದ ವ್ಯವಸ್ಥಾಪಕ ಚಿದಾನಂದ ಕೋಳಾರಿ ಹೇಳಿದರು.




ತಾಲೂಕಿನ ಹಿರೇಮುರಾಳ ಗ್ರಾಪಂ ವ್ಯಾಪ್ತಿಯಲ್ಲಿ ಬರುವ ಅರಸನಾಳ ಗ್ರಾಮದಲ್ಲಿ 2025/26ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಸಾಮಾಜಿಕ ಲೆಕ್ಕಪರಿಶೋಧನೆ ಮತ್ತು 15 ನೇ ಹಣಕಾಸಿನ ಯೋಜನೆಯ ಸಾಮಾಜಿಕ ಲೆಕ್ಕಪರಿಶೋಧನೆ ಗ್ರಾಮಸಭೆಯಲ್ಲಿ


ಅವರು ಮಾತನಾಡಿದ, ಕಾಮಗಾರಿ ಕೆಲಸ ಬಗ್ಗೆ ಆಕ್ಷೇಪಣೆ ಇದ್ದರೆ ನಮಗೆ ಮಾಹಿತಿ ನೀಡಿ ಇದರ ಬಗ್ಗೆ ಪರಿಶೀಲನೆಯನ್ನು ಮಾಡಲಾಗುವುದು.

ಹಿರೇಮುರಾಳ ಗ್ರಾಪಂ ವ್ಯಾಪ್ತಿಯಲ್ಲಿ ಬರುವ ಸರಕಾರಿ ಶಾಲೆಯ ಕೇಂದ್ರದಲ್ಲಿ ಹೈಟೆಕ್ ಶೌಚಾಲಯ, ಚರಂಡಿ,ಪ್ರೇವರ್ ಸ್ಟೋನ್, ಅಂಗನವಾಡಿ ಕೇಂದ್ರ ದುರಸ್ತಿ,ಕೃಷಿ ಹೊಂಡ,ಬದು ನಿರ್ಮಾಣ,ಕುರಿ ಶೆಡ್,ಧನದ ಕೊಟ್ಟಿಸಿಡಿ ನಿರ್ಮಾಣ, ರಸ್ತೆ ಸುಧಾರಣೆ,ಈ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿದೆ.

ಈ ಕೆಲಸವು ಐದು ವರ್ಷದವರೆಗೆ ಕೆಲಸ ಉಳಿದರೆ ಸರಕಾರ ಕೊಟ್ಟು ಅನುದಾನ ಸದ್ಧಬಳಕೆಯಾಗುತ್ತೆದೆ ಎಂದರು. ಇದೇ ವೇಳೆ ಗ್ರಾಮ ಸಭೆಯಲ್ಲಿ ಸವಿತಾ ಪಾಟೀಲ್ ಕಾಮಗಾರಿ ವರದಿ ಮಂಡನೆ ಮಾಡಿದರು.

ಈ ಸಂದರ್ಭದಲ್ಲಿ ಹಿರೇಮುರಾಳ ಗ್ರಾ ಪಂ ಅಧ್ಯಕ್ಷ ದೇವಿಂದ್ರಪ್ಪ ಬಸಪ್ಪ ಬೆಳ್ಳಿಕಟ್ಟಿ,ಗ್ರಾಪಂ ಸದಸ್ಯರಾದ ಬಸವರಾಜ ಬಿರಾದಾರ, ಚಂದ್ರಶೇಖರ ಪಾಟೀಲ,ಗ್ರಾಮದ ಹಿರಿಯರಾದ ಷನ್ಮಮುಖಪ್ಪ ರಕ್ಕಸಗಿ, ಸಿದ್ದಣ್ಣ ಹಗರಗುಂಡ,ವಿರೇಶ ಬಿರಾದಾರ,ಈರಣ್ಣ ಬಿರಾದಾರ, ಹಿರೇಮುರಾಳ ಗ್ರಾಪಂ ಅಭಿವೃದ್ಧಿ ಅಧಿಕಾರಿ ಕೆ ಎಚ್ ಕುಂಬಾರ, ಶಾಲೆಯ ಮುಖ್ಯಗುರು ಸಿದ್ದಣ್ಣ ವಗ್ಗರ, ಅಂಗನವಾಡಿ ಕಾರ್ಯಕರ್ತರಾದ ರೇಣುಕಾ ಹಡಪದ, ಮಂಜುಳಾ, ಆಶಾ ಕಾರ್ಯಕರ್ತೆ ಶಾಂತಾ ಹುನಗುಂದ, ಗ್ರಾಪಂ ಸಿಬ್ಬಂದಿಗಳಾದ ಸುಜಾತಾ ರಾಠೋಡ, ಶಾಂತು ಮುಳವಾಡ, ಶೀಧರ ಬಿದರಕುಂದಿ, ಅಶೋಕ ರಕ್ಕಸಗಿ, ಗ್ರಾ ಪಂ ಸದಸ್ಯರು,ಗ್ರಾಮಸ್ಥರು ಸೇರಿದಂತೆ ಉಪಸ್ಥಿತರಿದ್ದರು.

# ರಸ್ತೆಗೆ ದಿ.ಸಿದ್ದು ಮೀಶಿ ಹೆಸರು ನಾಮಕರಣಕ್ಕೆ ಒತ್ತಾಯ




**ಜಮಖಂಡಿ:** ನಗರಾಭಿವೃದ್ಧಿ ಹಾಗೂ ಸಾರ್ವಜನಿಕ ಸೇವೆಗಳಲ್ಲಿ ಮಹತ್ವದ ಪಾತ್ರ ವಹಿಸಿದ್ದ ನಗರಸಭೆಯ ಮಾಜಿ ಅಧ್ಯಕ್ಷ ದಿ.ಸಿದ್ದು ಧರೆಪ್ಪ ಮೀಶಿ ಅವರ ಹೆಸರಿನಲ್ಲಿ ನಗರದ ಪ್ರಮುಖ ರಸ್ತೆಗೆ ನಾಮಕರಣ ಮಾಡುವಂತೆ ಜೈ ಭೀಮ ಯುವಕ ಸಂಘ ರುದ್ರಸ್ವಾಮಿ ಪೇಠದ ಯುವಕರು ನಗರಸಭೆಗೆ ಪೌರಯುಕ್ತರಿಗೆ ಮನವಿ ಸಲ್ಲಿಸಿದ್ದರು.

ನಗರದ ಅಂಬೇಡ್ಕರ್ ಸರ್ಕಲ್‌ದಿಂದ ಬಸವೇಶ್ವರ ಸರ್ಕಲ್‌ವರೆಗೆ ಇರುವ ಮಧ್ಯದ ರಸ್ತೆ ದೀರ್ಘಕಾಲದಿಂದ ಸ್ಥಳೀಯ ಜನರ ಸಂಚಾರಕ್ಕೆ ಪ್ರಮುಖ ಮಾರ್ಗವಾಗಿದ್ದು, ಈ ರಸ್ತೆಗೆ "ದಿ. ಸಿದ್ದು ಧರೆಪ್ಪ ಮೀಶಿ ರಸ್ತೆ ಎಂದು ನಾಮಕರಣ ಮಾಡುವಂತೆ ಒತ್ತಾಯಿದರು.

ದಿ. ಸಿದ್ದು ಧರೆಪ್ಪ ಮೀಶಿ ಅವರು ದಲಿತ, ಅಲ್ಪಸಂಖ್ಯಾತ ಹಾಗೂ ಹಿಂದುಳಿದ ವರ್ಗದ ಜನರ ಹಕ್ಕು ರಕ್ಷಣೆಗೆ ಸದಾ ಮುಂಚೂಣಿಯಲ್ಲಿದ್ದು, ಜಮಖಂಡಿಯ ಅಭಿವೃದ್ಧಿಗಾಗಿ ಹಲವು ಜನಮುಖಿ ಕಾರ್ಯಗಳನ್ನು ಕೈಗೊಂಡಿದ್ದರು. ಬಡಜನರ ಸೇವೆ, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದನೆ ಹಾಗೂ ಸಾಮಾಜಿಕ ಬಾಂಧವ್ಯ ನಿರ್ಮಾಣದಲ್ಲಿ ಅವರು ನೀಡಿದ ಕೊಡುಗೆ ವಿಶಿಷ್ಟವಾಗಿದೆ. ಮುಂದಿನ ಪೀಳಿಗೆಗೂ ಸ್ಮರಣೀಯವಾಗಿಸಲು ಈ ರಸ್ತೆಗೆ ಅವರ ಹೆಸರಿಡುವುದು ಅತ್ಯಂತ ಯೋಗ್ಯವಾದ ಕ್ರಮ"* ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಯಮನಪ್ಪ ಗುಣದಾಳ, ರಾಘವೇಂದ್ರ ಆಳಬಾಳ, ಪರಸುರಾಮ ಕಾಂಬಳೆ, ಸುರಜ ಕುಡ್ರಾಣಿ, ಭೀಮುರಾವ ಮಿಶಿ, ಶ್ರಾವಣ ಸುತ್ತಾರ, ಪವನ ಸುತ್ತಾರ, ನಾಗು ಮಿಶಿ, ಉದಯ ಕಡಕೋಳ, ರಾಜು ಮಸುಳಿ, ಇನ್ನೂ ಅನೇಕರು ಇದ್ದರು.

# ಅ.18 ರಿಂದ ಕಿತ್ತೂರು ಕರ್ನಾಟಕ ನಾಟಕೋತ್ಸವ

**ಬೆಳಗಾವಿ:** ಕರ್ನಾಟಕ ನಾಟಕ ಅಕಾಡೆಮಿ, ಕನ್ನಡ ಭವನ ಹಾಗೂ ತೇಜೋಮಯ ಪ್ರದರ್ಶನ ಕಲೆಗಳ ಸಂಘ (ರಿ) ಇವರ ಸಹಕಾರದೊಂದಿಗೆ ಅಕ್ಟೋಬರ್ 18, 19, 20 ರಂದು ನಗರದ ಹೊಟೇಲ ರಾಮದೇವ ಹತ್ತಿರವಿರುವ ಕನ್ನಡ ಭವನದಲ್ಲಿ ಕಿತ್ತೂರು ಕರ್ನಾಟಕ ನಾಟಕೋತ್ಸವ ಜರುಗಲಿದೆ. ಶನಿವಾರ (ಅ.18) ಸಂಜೆ 6 ಗಂಟೆಗೆ ಕಾರ್ಯಕ್ರಮದ ಉದ್ಘಾಟನೆ ಮತ್ತು ನಾಟಕ ಪ್ರದರ್ಶನಕ್ಕೆ ಚಾಲನೆ ಜರುಗಲಿದೆ. ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಬೆಳಗಾವಿ ಉತ್ತರವಲಯ ಶಾಸಕರಾದ ಆಸೀಫ್ (ರಾಜು) ಸೇಠ್ ಅವರು ಅಧ್ಯಕ್ಷತೆ ವಹಸಿಲಿದ್ದಾರೆ.

ಜಿಲ್ಲಾಧಿಕಾರಿ ಮೊಹಮ್ಮದ ರೋಷನ್, ಡಾ.ದ.ರಾ.ಬೇಂದ್ರೆ, ರಾಷ್ಟ್ರೀಯ ಸ್ಮಾರಕ ಟ್ರಸ್ಟ್, ಧಾರವಾಡ ಅಧ್ಯಕ್ಷ ಡಾ. ಸರಜೂ ಕಾಟ್ಕರ್, ಬಸವರಾಜ ಕಟ್ಟೀಮನಿ ಪ್ರತಿಷ್ಠಾನದ ಅಧ್ಯಕ್ಷ ಡಾ.ಯಲ್ಲಪ್ಪ ಹಿಮ್ಮಡಿ, ಬೆಳಗಾವಿ ವಲಯದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಕೆ.ಹೆಚ್.ಚನ್ನೂರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ರಂಗಕರ್ಮಿಗಳು, ಧಾರ್ಮಿಕ ದತ್ತಿ ಇಲಾಖೆ ವಿಶ್ರಾಂತ ಉಪ ಆಯುಕ್ತ ರವಿ ಕೋಟಾರಗಸ್ತಿ, ಚಲನಚಿತ್ರ ನಿರ್ದೇಶಕ ಹಾಗೂ ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ರವೀಂದ್ರನಾಥ ಸಿರಿವರ ಅವರುಗಳು ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಶನಿವಾರ (ಅ.18) ಸಂಜೆ 7 ಗಂಟೆಗೆ ಸಮುದಾಯ ಧಾರವಾಡ ಪ್ರಸ್ತುತ ಪಡಿಸುವ ಬುದ್ಧ ಪ್ರಬುದ್ಧ ರಂಗ ನಾಟಕ, ರವಿವಾರ (ಅ.19) ದೃಶ್ಯ (ರಿ) ಬೆಂಗಳೂರು ಪ್ರಯೋಗಿಸುತ್ತಿರುವ ತಾಜ್‌ಮಹಲಿನ ಟೆಂಡರ್, ಸೋಮವಾರ (ಅ.20) ಸಂಜೆ 6 ಗಂಟೆಗೆ ಸಮಾರೋಪ ಸಮಾರಂಭ ಜರುಗಲಿದೆ. ಕರ್ನಾಟಕ ನಾಟಕ ಅಕಾಡೆಮಿ ಅಧ್ಯಕ್ಷ ಡಾ.ಕೆ.ವಿ. ನಾಗರಾಜಮೂರ್ತಿ ಸಮಾರೋಪ ಭಾಷಣ ಮಾಡಲಿದ್ದಾರೆ. ಸಮುದಾಯ ಕರ್ನಾಟಕ ರಾಜ್ಯ ಉಪಾಧ್ಯಕ್ಷ ಬಿ.ಐ.ಈಳಿಗೇರಿ ಅಧ್ಯಕ್ಷತೆ ವಹಿಸಲಿದ್ದಾರೆ. ಸಂಜೆ 7 ಗಂಟೆಗೆ ಭಾವೈಕ್ಯ ಸಮರ ಶಿಲ್ಪಿ ಸಂತ ಶಿಶುನಾಳ ಶರೀಫ ನಾಟಕ ನಡೆಯಲಿದೆ ಎಂದು ತಿಳಿಸಲಾಗಿದೆ.

# ಸಂಜೀವಿನಿ ಮಾಸಿಕ ಸಂತೆ ವಸ್ತುಪ್ರದರ್ಶನ



**ರಾಮದುರ್ಗ:** ಮಹಿಳೆಯರು ಸ್ವಾವಲಂಭನೆ ಜೀವನ ನಡೆಸುವದಕ್ಕಾಗಿ ಸರಕಾರ ಅನೇಕ ಕರಕುಶಲ ಕಲೆ ಹಾಗೂ ಸ್ವಉದ್ಯೋಗಕ್ಕಾಗಿ ಸಾಕಷ್ಟು ಯೋಜನೆಗಳನ್ನು ಅನುಷ್ಠಾಣಗೊಳಿಸುವ ಮೂಲಕ ಅಗತ್ಯ ಆರ್ಥಿಕ ನೆರವು ನೀಡುತ್ತಿದ್ದು, ಮಹಿಳೆಯರು ಯೋಜನೆ ಸದುಪಯೋಗ ಪಡೆದುಕೊಂಡು ಆರ್ಥಿಕವಾಗಿ ಸದೃಢವಾಗಬೇಕೆಂದು ಬಟಕುರ್ಕಿ ಗ್ರಾ.ಪಂ ಅಧ್ಯಕ್ಷ ಹನಮಂತ ಲಕ್ಕನ್ನವರ ತಿಳಿಸಿದರು.

ತಾಲೂಕಿನ ಬಟಕುರ್ಕಿ ಗ್ರಾಮದಲ್ಲಿ ಬುಧವಾರ ತಾ.ಪಂ ಎನ್.ಆರ್.ಎಲ್.ಎಂ ಯೋಜನೆಯಿಂದ ಹಮ್ಮಿಕೊಂಡ ಸಂಜೀವಿನಿ ಮಾಸಿಕ ಸಂತೆ ವಸ್ತುಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಜೀವಿನಿ ಒಕ್ಕೂಟದ ಖಜಾಂಚಿ ರಾಜೇಶ್ವರ ಯಾದವಾಡ ಮಾತನಾಡಿ, ಪುರುಷ ಪ್ರಧಾನ ಸಮಾಜದಲ್ಲಿಂದು ಮಹಿಳೆಯರಿಗೆ ಹೆಚ್ಚಿನ ಅವಕಾಶಗಳು ದೊರೆಯುತ್ತಿರುವುದರಿಂದ ಎಲ್ಲ ಕ್ಷೇತ್ರದಲ್ಲಿ ಮಹಿಳೆಯರು ಮುನ್ನುಗ್ಗುತ್ತಿದ್ದಾರೆ. ಸರಕಾರ ನೀಡುವ ಯೋಜನೆಗಳನ್ನು ಪಡೆದುಕೊಂಡು ಸ್ತ್ರೀಶಕ್ತಿ ಸಂಘಗಳೂ ಕೂಡಾ ಲಾಭದಾಯಕ ಕಾಯಕ ಮಾಡುತ್ತಿವೆ ಎಂದು ಹೇಳಿದರು. ಪಂಚಯಾತಿ ಪಿಡಿಓ ಜಗದೀಶ ದೇಸಾಯಿ ಮಾತನಾಡಿ, ಮಹಿಳಾ ಸಂಘದವರು ತಯಾರಿಸಿ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆಯಾದರೆ ಸಂಘಗಳು ಮತ್ತಷ್ಟು ಅಭಿವೃದ್ಧಿ ಹೊಂದುತ್ತವೆ ಎಂದು ಹೇಳಿದರು. ಪೂರ್ಣಿಮಾ ಭಾವಿಕಟ್ಟಿ ಎನ್.ಆರ್. ಎಲ್.ಎಂ ಯೋಜನೆ ಉದ್ದೇಶಗಳ ಬಗ್ಗೆ ಪ್ರಾಸ್ತಾವಿಕ ಮಾತನಾಡಿದರು.

ಗ್ರಾ.ಪಂ ಸದಸ್ಯರಾದ ಸುರೇಖಾ ಬನ್ನೂರ, ಬಸವರಾಜ ಅಳ್ಳಿಮಟ್ಟಿ, ಜಗದೀಶ ನೀರಾಕಾರಿ, ಗೀತಾ ಮೇಟಿ, ಎಂ.ಬಿ.ವಾಸನ, ಸರಸ್ವತಿ ಕುಲಗೋಡ, ಲಕ್ಕವ್ವ ಅಳ್ಳಿಮಟ್ಟಿ, ಬಾಳು ಪತ್ತಾರ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.ನೀಲಮ್ಮ ಕಾಯಿ ಸ್ವಾಗತಿಸಿದರು. ರೂಪಾಶ್ರೀ ಪಾಟೀಲ ನಿರೂಪಿಸಿದರು. ರೇಣುಕಾ ಅವರಾದಿ ವಂದಿಸಿದರು.

# ಅದ್ದೂರಿ ರಾಜ್ಯೋತ್ಸವಕ್ಕೆ ನಿರ್ಧಾರ

**ರಬಕವಿ-ಬನಹಟ್ಟಿ:** ನವೆಂಬರ್1 ರಂದು ಕರ್ನಾಟಕ ರಾಜ್ಯೋತ್ಸವವನ್ನು ಅದ್ದೂರಿಯಾಗಿ ನೆರವೇರಿಸಲಾಗುವದೆಂದು ಸಮಿತಿಯ ಚಿದಾನಂದ ಸೊಲ್ಲಾಪೂರ ತಿಳಿಸಿದರು.

ಅಂದು ಬೆಳಿಗ್ಗೆ 9 ಗಂಟೆಗೆ ರಬಕವಿ ಹೊಸ ಬಸ್ ನಿಲ್ದಾಣದ ಎಂ.ವಿ. ಪಟ್ಟಣ ಶಾಲೆಯಿಂದ ರಾಮಪೂರದ ನೀಲಕಂಠೇಶ್ವರಮಠದವರೆಗೆ ನಾಡದೇವಿ ಶ್ರೀ ಭುವನೇಶ್ವರಿ ತಾಯಿಯ ಭವ್ಯ ಮೆರವಣಿಗೆ ಜರುಗಲಿದೆ.

ವಿಜಯನಗರದ ನಂದಿ ಧ್ವಜದೊಂದಿಗೆ, ರಾಮದುರ್ಗದ ಮಹಿಳಾ ಡೊಳ್ಳು ಕುಣಿತ ಹಾಗೂ ವಿವಿಧ ವಾದ್ಯಗಳೊಂದಿಗೆ ಎಲ್ಲ ಶಾಲಾ-ಕಾಲೇಜು ಮಕ್ಕಳಿಂದ, ಸಂಘ-ಸಂಸ್ಥೆಗಳ ಹಾಗೂ ಕನ್ನಡಾಭಿಮಾನಿಗಳೊಂದಿಗೆ ಕಾರ್ಯಕ್ರಮ ಜರುಗಲಿದೆ. ಸಂಜೆ 6 ಕ್ಕೆ ಕಲಾವಿದರಿಂದ ಕನ್ನಡ ನಾಡು-ನುಡಿ ಸಾರುವ ಗೀತೆಗಳು, ರಸಮಂಜರಿ ನಡೆಯಲಿದೆಯೆಂದು ಸಭೆಯಲ್ಲಿ ತಿಳಿಸಿದರು.

ಇದೇ ಸಂದರ್ಭ ಸುಭಾಸ ಕರಡಿ, ಧರೆಪ್ಪ ಉಳ್ಳಾಗಡ್ಡಿ, ಎಂ.ಎಸ್. ಬಾದಾಮಿ, ಮಲ್ಲಿಕಾರ್ಜುನ ಸಾಬೋಜಿ, ರಾಮಣ್ಣ ಹುಲಕುಂದ, ಚಂದ್ರಶೇಖರ ಉಮದಿ, ಸುಭಾಸ ತಳವಾರ, ಶಿವಾನಂದ ಬಾಗಲಕೋಟ, ಸಾಗರ ನಿಪ್ಪಾಣಿ, ಈರಣ್ಣ ಗುಣಕಿ, ಬಾಬು ಗಂಗಾವತಿ, ಯಶವಂತ ವಾಜಂತ್ರಿ, ಪ್ರಕಾಶ ಕುಂಬಾರ ಸೇರಿದಂತೆ ಅನೇಕರಿದ್ದರು.

# ಬಿಸಿಎ ವಿದ್ಯಾರ್ಥಿಗಳಲ್ಲಿ ಎಐ ಅಧ್ಯಯನ ಅಗತ್ಯ



**ರಬಕವಿ-ಬನಹಟ್ಟಿ:** ಇಂದಿನ ದಿನಗಳಲ್ಲಿ ಬಿಸಿಎ ವಿಭಾಗದ ವಿದ್ಯಾರ್ಥಿಗಳು ಕಡ್ಡಾಯವಾಗಿ ಕೃತಕ ಬುದ್ಧಿಮತ್ತೆ(ಎ ಐ) ವಿಷಯವನ್ನುಅಧ್ಯಯನ ಮಾಡಬೇಕು. ಇದು ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿದೆ ಎಂದು ಜಮಖಂಡಿಯ ಬಾಗಲಕೋಟೆ ವಿವಿಯ ಡೀನ್ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನದ ವಿಭಾಗದ ದಯಾನಂದ ಸಾವಕಾರ ತಿಳಿಸಿದರು.

ಅವರು ಸೋಮವಾರ ಸ್ಥಳೀಯ ಎಸ್ ಟಿ ಸಿ ಬಿಸಿಎ ವಿಭಾಗದ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮದಲ್ಲಿ ಮಾತನಾಡಿದರು. ಆಧುನಿಕ ಶಿಕ್ಷಣದ ಜೊತೆಗೆ ವಿದ್ಯಾರ್ಥಿಗಳು ನಮ್ಮ ದೇಶದ ಆಚಾರ ಸಂಸ್ಕೃತಿ ಮತ್ತು ಸಂಸ್ಕಾರಗಳನ್ನು ಅರಿತುಕೊಳ್ಳಬೇಕು. ಇದು ಅಗತ್ಯವಾಗಿದೆ ಎಂದು ಸಾವಕಾರ ತಿಳಿಸಿದರು.

ಜನತಾ ಶಿಕ್ಷಣ ಸಂಘದ ಆಡಳಿತ ಮಂಡಳಿಯ ಸದಸ್ಯ ಪಂಡಿತ ಹನಗಂಡಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಉತ್ತಮವಾದ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು. ಜೀವನದಲ್ಲಿ ತಾವು ಕಲಿತ ಶಿಕ್ಷಣ ಸಂಸ್ಥೆಗಳಿಗೆ ಕೀರ್ತಿ ತರವಂತೆ ಮಾಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಿಸಿಎ ವಿಭಾಗದ ಸಂಯೋಜಕ ರಮೇಶ ಮಾಗುರಿ ಮಾತನಾಡಿದರು. ಜೆಎಸ್‌ಎಸ್ ಸಂಘದ ಕಾರ್ಯಾಧ್ಯಕ್ಷ ಬಸವಂತ ಜಾಡಗೌಡ, ಸದಸ್ಯೆ ಮಹಾದೇವಿ ಕೊಳಕಿ, ಪ್ರಕಾಶ ಕೆಂಗನಾಳ, ಮನೋಹರ ಶಿರಹಟ್ಟಿ, ಶೋಭಾ ಪಿಟಗಿ, ಶಿವು ಸಿಂದೆ, ಅವಿನಾಶ ಹಟ್ಟಿ, ಮಹಾಂತ ಅಂಗಡಿ, ಚೇತನ ಮುಳೆಗಾವಿ, ಭುವನೇಶ್ವರಿ ಸನಮನಿ, ಕಾವ್ಯ ನಡಕಟ್ಟಿನ ಸೇರಿದಂತೆ ಅನೇಕರು ಇದ್ದರು.

# ಗುರು ಹಿರಿಯರನ್ನು ಆತ್ಮೀಯವಾಗಿ ನೋಡಿಕೊಳ್ಳಿ

**ಘಟಪ್ರಭಾ:** ಇಂದಿನ ದಿನಮಾನದಲ್ಲಿ ಹಿರಿಯರ ಭಾವನೆಗಳನ್ನು ನಾವೆಲ್ಲರೂ ಗೌರವಿಸಬೇಕು ಮತ್ತು ಅವರನ್ನು ಆತ್ಮೀಯತೆಯಿಂದ ನೋಡಿಕೊಳ್ಳುವ ಅವಶ್ಯಕತೆ ಹೆಚ್ಚಾಗಿದ್ದು ಹಿರಿಯರ ನಾಗರೀಕರ ಮನಸ್ಸು ಸೂಕ್ಷ್ಮತೆಯಿಂದ ಕೂಡಿರುತ್ತದೆ ಅವರಿಗೆ ಶಾಂತಿ ಸಹನೆಗಳಿಂದ ವರ್ತನೆ ನಾವು ಮಾಡಿದರೆ ಅವರು ಸಹ ಶಾಂತವಾಗಿರುತ್ತಾರೆ ಎಂದು ಭಾರತ ಸೇವಾ ದಳದ ಕರ್ನಾಟಕ ರಾಜ್ಯ ನಿವೃತ್ತ ರಾಜ್ಯಾಧಿಪತಿಗಳಾದ ಬಸವರಾಜ ಹಟ್ಟೀಗೌಡರ ಅವರು ಹೇಳಿದರು.

ಅವರು ಘಟಪ್ರಭಾದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಮಂಗಳವಾರ ದಿನಾಂಕ, 14-10-2025 ರಂದು ಘಟಪ್ರಭಾ ಹಿರಿಯ ನಾಗರಿಕರ ವೇದಿಕೆ ಮತ್ತು ಜೈಂಟ್ಸ್ ಗ್ರೂಪ್ ಆಫ್ ಘಟಪ್ರಭಾ ಇವರು ಸಂಯುಕ್ತವಾಗಿ ಆಯೋಜಿಸಿದ್ದ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಹಿರಿಯ ನಾಗರಿಕರಾದ ಸುರೇಶ ಪಾಟೀಲ ಮತ್ತು ಪುಂಡಲೀಕ ನಾಯಿಕ ಅವರನ್ನು ಸನ್ಮಾನ ಮಾಡಿ ಗೌರವಿಸಲಾಯಿತು




ಅತಿಥಿ ರಾಮಣ್ಣ ಹುಕ್ಕೇರಿ ಮಾತನಾಡಿ ಹಿರಿಯ ನಾಗರಿಕರು ತಮ್ಮ ಜೀವನದಲ್ಲಿ ಸಾಕಷ್ಟು ತೊಂದರೆ ಅನುಭವಿಸಿ ಮಕ್ಕಳನ್ನು ಬೆಳೆಸಿ ದೊಡ್ಡವರನ್ನು ಮಾಡಿರುತ್ತಾರೆ ಅವರ ಭಾವನೆಗಳನ್ನು ಮಕ್ಕಳು ಹಾಗೂ ಕುಟುಂಬದ ಎಲ್ಲಾ ಸದಸ್ಯರು ಗೌರವಿಸುವದು ಆದ್ಯ ಕರ್ತವ್ಯವಾಗಿದೆ ಎಂದರು.

ಸತ್ಕಾರ ಸ್ವೀಕರಿಸಿದ ಸುರೇಶ ಪಾಟೀಲ ಮತ್ತು ಪುಂಡಲೀಕ ನಾಯಿಕ ಅವರು ಮಾತನಾಡಿ ಎಲ್ಲಾ ಹಿರಿಯ ನಾಗರಿಕರು ಸಾಮಾಜಿಕ ಧಾರ್ಮಿಕ ಆಧ್ಯಾತ್ಮಿಕ ರಂಗಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಸಾಮಾಜಿಕ ಸೇವೆ ಮಾಡುವ ಮೂಲಕ ಸಾರ್ಥಕ ಬದುಕು ಸಾಧಿಸಬೇಕು ಎಂದು ಸನ್ಮಾನ ಮಾಡುವ ಮೂಲಕ ನಮ್ಮ ಜವಾಬ್ದಾರಿ ಇನ್ನೂ ಹೆಚ್ಚಾಗಿದೆ ಎಂದರು.

ಜೈಂಟ್ಸ್ ಗ್ರೂಪ್ ಆಫ್ ಘಟಪ್ರಭಾ ಅಧ್ಯಕ್ಷ ಭೂಪಾಲ್ ಖೆಮಲಾಪುರೆ, ಮತ್ತು ಹಿರಿಯ ನಾಗರಿಕರ ವೇದಿಕೆ ಅಧ್ಯಕ್ಷ ಶ್ರೀಕಾಂತ ಕುಲಕರ್ಣಿ ಅವರು ಸುಭಾಷ್ ದಡ್ಡೀಕರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕೆ ಡಿ ವಾಲಿಕಾರ, ಕೆ ಪಿ ಕಳ್ಳೀಮಠ ಮಹಾದೇವ ಯರನಾಳ, ರಾಜು ಕತ್ತಿ, ಮಲ್ಲಪ್ಪ ನಾಯಿಕ ಪ್ರಭಾಕರ ಸುಳೆಗಾವಿ, ಹರಿ ಪ್ರಕಾಶ ಕಾಳೆ, ಕೆಂಚಪ್ಪಾ ಪಾಟೀಲ ಪಶುಪತಿಮಠ ಚಿರಾಕಲಿಶಾ ಮಕಾನದಾರ, ಪ್ರಕಾಶ ಕುಲಕರ್ಣಿ, ಮುರಳೀಧರ ಜತ್ಕರ ಪ್ರಭು ಅಂತರಗಂಗಿ, ಶಂಕರ ವಾಘ, ಮನಗುತ್ತಿ, ಮಹಾದೇವ ಬಡೋದೆ, ಮಣಿಕಂಠ ನಾಯಿಕ ಕೆಂಚಪ್ಪಾ ನಾಯಿಕ ಸೇರಿದಂತೆ ಹಲವು ನಾಗರಿಕರು ಭಾಗವಹಿಸಿದ್ದರು.

# ತಂಬಾಕು ಮುಕ್ತ ಯುವ ಅಭಿಯಾನ ಅಂಗವಾಗಿ ರಸಪ್ರಶ್ನೆ ಸ್ಪರ್ಧೆ

**ಕೊಪ್ಪಳ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಘಟಕ, ತಂಬಾಕು ನಿಯಂತ್ರಣ ಕೋಶ, ಕೊಪ್ಪಳ, ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯ ಯಲಬುರ್ಗಾ, ಪ್ರಾಥಮಿಕ ಆರೋಗ್ಯ ಕೇಂದ್ರ ಗುನ್ನಾಳ ಹಾಗೂ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜ್, ಗುನ್ನಾಳ ಇವರ ಸಂಯುಕ್ತಾಶ್ರಯದಲ್ಲಿ ಕಾಲೇಜಿನ ಸಭಾಭವನದಲ್ಲಿ ಅ.14 ರಂದು ಕಾಲೇಜು ವಿದ್ಯಾರ್ಥಿಗಳಿಗೆ ತಂಬಾಕು ಮುಕ್ತ ಯುವ ಅಭಿಯಾನ ಹಾಗೂ ರಸಪ್ರಶ್ನೆ ಸ್ಪರ್ಧೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.



ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಗುನ್ನಾಳ ಆಡಳಿತ ವೈದ್ಯಾಧಿಕಾರಿ ಡಾ. ದಯಾನಂದ ಸ್ವಾಮಿ ಅವರು ಯುವ ಜನತೆಗೆ ತಂಬಾಕು ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವ ದುಸ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸುವುದು ಹಾಗೂ ಯುವಜನತೆಯ ರಕ್ಷಿಸಲು ಸರ್ಕಾರ ವಿವಿಧ ಮಾಧ್ಯಮಗಳ ಮೂಲಕ ಅರಿವು ಮೂಡಿಸುವ ಕಾರ್ಯಕ್ರಮವನ್ನು ಜಾರಿಗೊಳಿಸಿದೆ. ತಂಬಾಕಿನಲ್ಲಿ 7000 ವಿಷಾನಿಲಗಳು ಇರುತ್ತವೆ. ತಂಬಾಕು ಸೇವನೆಯಿಂದ ಮುಖ್ಯವಾಗಿ ಕ್ಯಾನ್ಸರ್‌ನಂತ ಮಾರಕ ರೋಗ ಉಂಟಾಗಿ, ಜೀವಕ್ಕೆ ಹಾನಿಯಾಗುವ ಸಾಧ್ಯತೆ ಇರುತ್ತದೆ. ತಂಬಾಕು ಸೇವನೆಯಿಂದ ಯುವ ಸಮೂಹ ಕುಟುಂಬ ಮತ್ತು ದೇಶಕ್ಕೆ ಹೊರೆಯಾಗುತ್ತದೆ. ಆದ್ದರಿಂದ 2003ರಲ್ಲಿ ಜಾರಿಗೆ ತಂದ ಕೋಟ್ಪಾ ಕಾಯ್ದೆ ಬಗ್ಗೆ ಪ್ರತಿಯೊಬ್ಬರೂ ತಿಳಿದುಕೊಂಡು ಜಾಗೃತರಾಗಬೇಕು. ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಸೇವನೆ ನಿಷೇಧಿಸಲಾಗಿದೆ. ನಿಯಮ ಉಲ್ಲಂಘಿಸಿದವರಿಗೆ ಜೈಲು ಮತ್ತು ದಂಡ ಶಿಕ್ಷೆ ವಿಧಿಸಲಾಗುತ್ತದೆ. ಆದ್ದರಿಂದ ಇಂದಿನ ಯುವ ಸಮೂಹ ತಂಬಾಕು ಸೇವನೆಯಿಂದ ತಮ್ಮ ಆರೋಗ್ಯವನ್ನು ಹಾಳು ಮಾಡಿಕೊಳ್ಳದೆ ಆರೋಗ್ಯವಂತ ಮನುಷ್ಯರಾಗಿ ಬಾಳಬೇಕೆಂದು ಕರೆ ನೀಡಿದರು. ಜೀವನ ಆಯ್ದುಕೊಳ್ಳಿ ತಂಬಾಕನ್ನಲ್ಲ ಎಂದು ತಿಳಿಸಿದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ವೈ.ಪಿ. ಅವರು ಮಾತನಾಡಿ, ಕಾಲೇಜು ವಿದ್ಯಾರ್ಥಿಗಳಿಗೆ ವಿವಿಧ ರಾಷ್ಟ್ರೀಯ ಕಾರ್ಯಕ್ರಮಗಳು, ಸಾಂಕ್ರಾಮಿಕ ರೋಗಗಳ ನಿಯಂತ್ರಣ ಹಾಗೂ ಅಸಾಂಕ್ರಾಮಿಕ ರೋಗಗಳ ಬಗ್ಗೆ ಮುಂಜಾಗ್ರತೆ ತೆಗೆದುಕೊಳ್ಳುವ ಕುರಿತು, ನಿರಂತರವಾಗಿ ವಿವಿಧ ಮಾಧ್ಯಮದ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಗುತ್ತಿದೆ.

ನಂತರ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳಾದ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮ, ಆರ್.ಸಿ.ಹೆಚ್. ಕಾರ್ಯಕ್ರಮ, ರಾಷ್ಟ್ರೀಯ ಶ್ರವಣದೋಷ ನಿವಾರಣಾ ಮತ್ತು ನಿಯಂತ್ರಣ ಕಾರ್ಯಕ್ರಮ, ಹದಿಹರೆಯದವರ ಆರೋಗ್ಯದ ಮಹತ್ವ, ಸೊಳ್ಳೆಗಳಿಂದ ಹರಡುವ ರೋಗಗಳ ನಿಯಂತ್ರಣ, ಕುಟುಂಬ ಕಲ್ಯಾಣ ಕಾರ್ಯಕ್ರಮ, ಮಾನಸಿಕ ಆರೋಗ್ಯ ಕಾರ್ಯಕ್ರಮ, ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮ, ಐ.ಡಿ.ಎಸ್.ಪಿ, ಅಸಾಂಕ್ರಾಮಿಕ ರೋಗಗಳ ಬಗ್ಗೆ ಹಾಗೂ ಇತರೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ವಿವರವಾಗಿ ಮಾತನಾಡಿದರು.

ರಸಪ್ರಶ್ನೆ ಸ್ಪರ್ಧೆಯಲ್ಲಿ 8 ತಂಡಗಳು ಭಾಗವಹಿಸಿದ್ದವು. ಅದರಲ್ಲಿ ಮಂಜುನಾಥ ವಿರುಪಾಕ್ಷಿ ಪ್ರಥಮ(ರೂ.500), ರಾಜಬಕ್ಷಿ ಸಂಗಮೇಶ ದ್ವಿತೀಯ(ರೂ.300) ಹಾಗೂ ನಿವೇದಿತಾ ಹಾಗೂ ಸೃಷ್ಠಿ ತೃತೀಯ(ರೂ200) ಬಹುಮಾನಗಳನ್ನು ಪಡೆದುಕೊಂಡರು.

ಕಾರ್ಯಕ್ರಮದಲ್ಲಿ ಎನ್.ಟಿ.ಸಿ.ಪಿ ಕಾರ್ಯಕ್ರಮದ ಸಮಾಜ ಕಾರ್ಯಕರ್ತೆ ಸರಸ್ವತಿ, ಕಾಲೇಜಿನ ಪ್ರಾಂಶುಪಾಲರಾದ ವಿಜಯಕುಮಾರ, ಎನ್.ಟಿ.ಸಿ.ಪಿ ಕಾರ್ಯಕ್ರಮದ ಸಲಹೆಗಾರ ಸಂಗಮೇಶ, ಎಸ್.ಟಿ.ಎಸ್ ಕೃಷ್ಣಾಜೀ, ಆರ್.ಕೆ.ಎಸ್.ಕೆ ಆಪ್ತಸಮಾಲೋಚಕ ಮಹೇಶ, ಐ.ಸಿ.ಟಿ.ಸಿ ಆಪ್ತಸಮಾಲೋಚಕ ಬಾಳಪ್ಪ, ಕಾಲೇಜಿನ ಸಹಉಪನ್ಯಾಸಕ ವರ್ಗದವರು, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಮಲ್ಲಯ್ಯ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಕಾವೇರಿ, ಸಮುದಾಯ ಆರೋಗ್ಯಾಧಿಕಾರಿ ಮಂಜುಳಾ, ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು.

# ನಶಾ ಮುಕ್ತ ಭಾರತ ಅಭಿಯಾನ: ಚಿತ್ರಕಲಾ ಸ್ಪರ್ಧೆ




**ಹುಬ್ಬಳ್ಳಿ:** ಬುಧವಾರ ನಗರದ ಶ್ರೀ ವಿಜಯ ಮಹಾಂತೇಶ ಲಲಿತ ಕಲಾಮಹಾವಿದ್ಯಾಲಯದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಧಾರವಾಡ, ವಿಕಲಚೇತನ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಧಾರವಾಡ, ತಾಲೂಕು ಪಂಚಾಯತ ಹುಬ್ಬಳ್ಳಿ ಹಾಗೂ ಶ್ರೀ ಮೈತ್ರಿ ಸಮಗ್ರ ವ್ಯಸನಮುಕ್ತ ಪುನರ ವಸತಿ ಕೇಂದ್ರ ಹುಬ್ಬಳ್ಳಿ ಇವುಗಳ ಸಂಯುಕ್ತಾಶ್ರಯದಲ್ಲಿ ನಶಾ ಮುಕ್ತ ಭಾರತ ಅಭಿಯಾನದ ಅಂಗವಾಗಿ ಚಿತ್ರಕಲಾ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಡಾ.ಜಿ.ವಿ.ಓಂಕಾರಿಗೌಡ್ರ ಅವರು ಮಾತನಾಡಿ, ಭಾರತವು ಯುವ ಜನಾಂಗದಿಂದ ಕೂಡಿದ ಸದೃಢ ದೇಶ ಕಟ್ಟಲು ಯುವಕರ ಕೊಡುಗೆ ಅವಶ್ಯಕವಾಗಿರುತ್ತದೆ. ಆದರೆ ಯುವಕರು ಮಾದಕ ವಸ್ತುಗಳಿಗೆ ದಾಸರಾಗಿ ಹಲವಾರು ರೋಗಗಳಿಗೆ ತುತ್ತಾಗುತ್ತಿದ್ದಾರೆ. ಕಾರಣ ಇಂತಹ ವ್ಯಸನಗಳಿಂದ ದೂರವಾಗಿ ಆರೋಗ್ಯಕರಾಗಿ ಉತ್ತಮ ಜೀವನ ರೂಪಿಸಿಕೊಳ್ಳಲು ಮುಂದಾಗಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ತಿಳಿಸಿದರು.

ಶ್ರೀ ವಿಜಯ ಮಹಾಂತೇಶ ಲಲಿತ ಕಲಾ ಮಹಾವಿದ್ಯಾಲಯದ ಪ್ರಾಚಾರ್ಯರಾದ ಆರ್. ಎಫ್. ಹಿರೇಗೌಡರ ಮಾತನಾಡಿ, ಯುವ ಪೀಳಿಗೆಯ ಮಾರಕ ದುಶ್ಚಟಗಳಿಗೆ ದಾಸರಾಗದೇ, ನಶಾ ವಸ್ತುಗಳಿಂದ ದೂರವಿದ್ದು, ಸದೃಢವಂತರಾಗಬೇಕೆಂದು ಅವರು ತಿಳಿಸಿದರು. ಮೈತ್ರಿ ಸಂಸ್ಥೆಯ ಮಂಜುನಾಥ ಮುದಿಗೌಡ್ರ, ಶಿವಾನಂದ ಚೌಗಲೆ, ಕಲ್ಮೇಶ್ ಬೆಳೆಬಾಳ ಇವರು ಕೂಡ ನಶಾ ಮುಕ್ತರಾಗುವಂತೆ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿದರು.

ಕಾರ್ಯಕ್ರಮದಲ್ಲಿ ರಂಜಿತಾ, ಶರಾವತಿ, ಕಾಲೇಜಿನ ಸಿಬ್ಬಂದಿ ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿ, ವಿಕಲಚೇತನ ಗ್ರಾಮೀಣ ಪುನರವಸತಿ ಕಾರ್ಯಕರ್ತರು ಹಾಜರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue : 214, Postal Reg No. PMG/KA/NK/BM/135/25-27 / POST AT Vantamury Colony Post Office